ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಸಂಪುಟ: 21, ಸಂಚಿಕೆ: 94, ಪುಟಗಳು: 8, ಶನಿವಾರ, 13 ಜನವರಿ 2024 RNI NO. KARKAN/2002/08054

epaper: www.sanjemugilu.com

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ



ವೇಣು ಸಾರಥ್ಯದಲ್ಲಿ...

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಶನಿವಾರ 13, ಜನವರಿ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ದಕ್ಷಿಣಾಯಣ, ಹಿಮಂತ ಋತು,
- ಪುಷ್ಯ ಮಾಸ, ಶುಕ್ಲ ಪಕ್ಷ,
- ದ್ವಿತೀಯ / ತೃತಿಯ,
- ಶನಿವಾರ,
- ಶ್ರವಣ ನಕ್ಷತ್ರ / ಧನಿ?ಠ ನಕ್ಷತ್ರ.
- ರಾಹುಕಾಲ - 09:40 ರಿಂದ 11:06
- ಗುಳಿಕಕಾಲ - 06:48 ರಿಂದ 08:14
- ಯಮಗಂಡಕಾಲ - 01:58 ರಿಂದ 03:24

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines





### ಮತ್ತೆ ಕಾಂಗ್ರೆಸ್ ತೆಕ್ಕೆಗೆ

# ಮುದ್ದಹನುಮೇಗೌಡ

### ಮಾಜಿ ಸಂಸದರ ಸೇರ್ಪಡೆಗೆ ಟಿ ಬಿ ಜಯಚಂದ್ರ ವಿರೋಧ!





**ಬೆಂಗಳೂರು:** ಮೇ 10ರಂದು ನಡೆದ ವಿಧಾನಸಭಾ ಚುನಾವಣೆಗೂ ಮುನ್ನ ಬಿಜೆಪಿಗೆ ಬಂದಿದ್ದ ತುಮಕೂರು ಲೋಕಸಭಾ ಕ್ಷೇತ್ರದ ಮಾಜಿ ಸದಸ್ಯ ಎಸ್‌ಪಿ ಮುದ್ದಹನುಮೇಗೌಡ ಲೋಕಸಭೆ ಚುನಾವಣೆಗೂ ಮುನ್ನ ಕಾಂಗ್ರೆಸ್‌ಗೆ ಮರಳುವ ಸಾಧ್ಯತೆ ಇದೆ. ತುಮಕೂರಿನಿಂದ ವೀರಶೈವ -ಲಿಂಗಾಯತ ಅಭ್ಯರ್ಥಿಯನ್ನು ಕಣಕ್ಕಿಳಿಸಲು ಬಿಜೆಪಿ-ಜೆಡಿಎಸ್ ಮೈತ್ರಿಕೂಟ ನಿರ್ಧರಿಸಿದ್ದರಿಂದ, ಮುದ್ದಹನುಮೇಗೌಡರು ಈ ನಿರ್ಧಾರ ಕೈಗೊಂಡಿದ್ದಾರೆ ಎನ್ನಲಾಗಿದೆ. ಮುದ್ದಹನುಮೇಗೌಡ ಒಂದೆರಡು ದಿನಗಳ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದರು. ಡಿಸಿಎಂ ಡಿ.ಕೆ. ಶಿವಕುಮಾರ್, ಗೃಹ ಸಚಿವ ಡಾ.ಜಿ.ಪರಮೇಶ್ವರ ಹಾಗೂ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರನ್ನು ಸಹ ಭೇಟಿ ಮಾಡಿದ್ದಾರೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಮನನೊಂದು ಯುವತಿ ಆತ್ಮಹತ್ಯೆ

**ಹಾಸನ:** ಪ್ರೀತಿಸುವಂತೆ ಯುವತಿಯೊಬ್ಬಳಿಗೆ ನಿರಂತರ ಕಿರುಕುಳ ನೀಡಿ ಜನರ ಎದುರೇ ಯುವಕನೊಬ್ಬ ಅವಮಾನ ಮಾಡಿದ ಪರಿಣಾಮ ಮನನೊಂದು ಯುವತಿ ನೇಣಿಗೆ ಶರಣಾದ ಘಟನೆ ಬೇಲೂರಿನ ನಿಡಗೂಡು ಗ್ರಾಮದಲ್ಲಿ ನಡೆದಿದೆ. ಗ್ರಾಮದ ಜಯಣ್ಣ ಎಂಬವರ ಪುತ್ರಿ ಸಂಗೀತಾ (21) ಆತ್ಮಹತ್ಯೆಗೆ ಶರಣಾದ ದುರ್ದೈವಿ. ಅದೇ ಗ್ರಾಮದ ಹೊನ್ನಯ್ಯ ಎಂಬವರ ಪುತ್ರ ಶಿವು ಎಂಬಾತ ಸಂಗೀತಾಳನ್ನು ಪ್ರೀತಿಸುತ್ತಿರುವುದಾಗಿ ಹೇಳಿಕೊಂಡು ಓಡಾಡುತ್ತಿದ್ದ. ಅಲ್ಲದೇ ತನಗೆ ಯುವತಿಯನ್ನು ಮದುವೆ ಮಾಡಿಕೊಡುವಂತೆ ಸಂಗೀತಾ ಪೋಷಕರಲ್ಲಿ ಕೇಳಿದ್ದ.

### ಬೆಳಗಾವಿಯಲ್ಲಿ ಬಿಜೆಪಿ ಸಂಘರ್ಷ



**ಬೆಳಗಾವಿ:** ಲೋಕಸಭಾ ಚುನಾವಣೆ ಸಿದ್ಧತೆ ನಡೆಸುತ್ತಿರುವ ಬಿಜೆಪಿಗೆ ಬೆಳಗಾವಿ ಭಿನ್ನಮತ ಬಿಸಿ ತುಪ್ಪವಾಗಿದೆ. ಕ್ಷೇತ್ರವಾರು ನಡೆದ ಬಿಜೆಪಿ ಸಭೆಯಲ್ಲಿ ಮೂಲ ವರ್ಸಸ್ ವಲಸಿಗರ ಸಂಘರ್ಷ ಜೋರಾಗಿದೆ. ಮಾಜಿ ಸಚಿವ ರಮೇಶ್ ಜಾರಕಿಹೊಳಿ ವಿರುದ್ಧ ಮೂಲ ಬಿಜೆಪಿಗರು ಸಿಡಿದೆದ್ದಿದ್ದಾರೆ. ಕಳೆದ ವಿಧಾನಸಭೆ ಚುನಾವಣೆಯಲ್ಲಿ ರಮೇಶ್ ಜಾರಕಿಹೊಳಿಗೆ ಚುನಾವಣೆ ಹೊಣೆ ಹೊರೆಸಲಾಗಿತ್ತು. ಪರಿಣಾಮ ಜಿಲ್ಲೆಯ 13 ಕ್ಷೇತ್ರಗಳಲ್ಲಿದ್ದ ಬಿಜೆಪಿ ಶಾಸಕರ ಸಂಖ್ಯೆ 7ಕ್ಕೆ ಇಳಿದಿದೆ. ಕಾಂಗ್ರೆಸ್ 5 ಕ್ಷೇತ್ರಗಳಿಂದ 11 ಕ್ಷೇತ್ರಗಳಿಗೆ ಸಂಖ್ಯೆ ಹೆಚ್ಚಿಸಿಕೊಂಡಿದೆ. ಈಗ ಲೋಕಸಭೆ ಚುನಾವಣೆಯಲ್ಲಿ ಜಾರಕಿಹೊಳಿ ಮಾತು ಕೇಳಬೇಡಿ. ಜಿಲ್ಲೆಯಲ್ಲಿ ಸೃಷ್ಟಿಯಾಗಿರುವ ಬಿಕ್ಕಟ್ಟು ಶಮನ ಮಾಡುವಂತೆ ಆಗ್ರಹಿಸಿದ್ದಾರೆ.

### ಮೂವರು ಸಾಧುಗಳ ಮೇಲೆ ಹಲ್ಲೆ

**ಕಲ್ಕತ್ತಾ:** ಪಶ್ಚಿಮ ಬಂಗಾಳದ ಗಂಗಾಸಾಗರ ಮೇಳಕ್ಕೆ ತೆರಳುತ್ತಿದ್ದ ಉತ್ತರ ಪ್ರದೇಶದ ಮೂವರು ಸಾಧುಗಳನ್ನು ಗುಂಪೊಂದು ಹಲ್ಲೆ ನಡೆಸಿರುವ ಘಟನೆ ವರದಿಯಾಗಿದೆ. ಸಾಧುಗಳು ಅಪಹರಣಕಾರರೆಂದು ಶಂಕಿಸಿ ಹಲ್ಲೆ ನಡೆಸಿರುವ ಘಟನೆ ಬಂಗಾಳದ ಪುರುಲಿಯಾ ಜಿಲ್ಲೆಯಲ್ಲಿ ನಡೆದಿದೆ. ಸಾಧುಗಳು-ಒಬ್ಬ ವ್ಯಕ್ತಿ ಮತ್ತು ಅವರ ಇಬ್ಬರು ಪುತ್ರರು, ಮಕರ ಸಂಕ್ರಾಂತಿ ಹಬ್ಬಕ್ಕಾಗಿ ಗಂಗಾಸಾಗರವನ್ನು ತಲುಪಲು ವಾಹನವನ್ನು ಬಾಡಿಗೆಗೆ ಪಡೆದಿದ್ದರು. ಅವರು ಮಾರ್ಗದ ಬಗ್ಗೆ ವಿಚಾರಿಸಿದಾಗ, ಕೆಲವು ಸ್ಥಳೀಯರು ಅನುಮಾನಗೊಂಡರು.

ಪುಟ 2

### ಅಬಕಾರಿ ಹಗರಣ: ದೆಹಲಿ ಸಿಎಂ ಕೇಜ್ರಿವಾಲ್‌ಗೆ 4ನೇ ಬಾರಿ

# ಇಡಿ ಸಮನ್ಸ್ ಜಾರಿ



**ನವದೆಹಲಿ:** ಈಗ ರದ್ದಾಗಿರುವ ದೆಹಲಿ ಅಬಕಾರಿ ನೀತಿ ಹಗರಣಕ್ಕೆ ಸಂಬಂಧಿಸಿದ ಅಕ್ರಮ ಹಣ ವರ್ಗಾವಣೆ ಪ್ರಕರಣದಲ್ಲಿ ವಿಚಾರಣೆಗೆ ಹಾಜರಾಗುವಂತೆ ಜಾರಿ ನಿರ್ದೇಶನಾಲಯ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರಿಗೆ ನಾಲ್ಕನೇ ಬಾರಿ ಸಮನ್ಸ್ ಜಾರಿ ಮಾಡಿದೆ ಎಂದು ಅಧಿಕೃತ ಮೂಲಗಳು ಶನಿವಾರ ತಿಳಿಸಿವೆ.

ಆಮ್ ಆದ್ಮಿ ಪಕ್ಷದ(ಎಎಪಿ) ರಾಷ್ಟ್ರೀಯ ಸಂಚಾಲಕರೂ ಆಗಿರುವ ಕೇಜ್ರಿವಾಲ್ ಅವರಿಗೆ ಜನವರಿ 18 ರಂದು ಇಡಿ ಮುಂದೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

55 ವರ್ಷದ ಕೇಜ್ರಿವಾಲ್ ಅವರು ಜನವರಿ 3 ರಂದು ಇಡಿ ಮುಂದೆ ಮೂರನೇ ಬಾರಿ ವಿಚಾರಣೆಗೆ ಹಾಜರಾಗಲು ನಿರಾಕರಿಸಿದ್ದರು. ಈ ಹಿಂದೆ 2023 ರ ನವೆಂಬರ್ 2 ರಂದು ಮತ್ತು ಡಿಸೆಂಬರ್ 21 ರಂದು ವಿಚಾರಣೆಗೆ ಹಾಜರಾಗುವಂತೆ ದೆಹಲಿ ಮುಖ್ಯಮಂತ್ರಿಗೆ ಇಡಿ ಸಮನ್ಸ್ ಜಾರಿ ಮಾಡಿತ್ತು. ಆದರೆ ವಿಚಾರಣೆಗೆ ಗೈರು ಆಗಿದ್ದ ಕೇಜ್ರಿವಾಲ್ ಅವರು ತಮಗೆ ನೀಡಿರುವ ನೋಟಿಸ್ ಕಾನೂನು ಬಾಹಿರ ಎಂದು ಲಿಖಿತ ಉತ್ತರ ಕಳುಹಿಸಿದ್ದರು.

### ಸಂಸತ್ ದಾಳಿ: ಮೈಸೂರಿನ ಮನೋರಂಜನ್ ಸೇರಿ

## ಐವರಿಗೆ ಮಂಪರು ಪರೀಕ್ಷೆ





ಮನೋರಂಜನ್

**ನವದೆಹಲಿ:** ಸಂಸತ್ತಿನ ಒಳಗೆ ಹೊಗೆ ಬಾಂಬ್ ಸಿಡಿಸಿ ದಾಳಿ ನಡೆಸಿದ ಪ್ರಕರಣದಲ್ಲಿ ಬಂಧಿತರಾಗಿರುವ 6 ಆರೋಪಿಗಳ ಪೈಕಿ ಐವರಿಗೆ ಶುಕ್ರವಾರ ಸುಳ್ಳುಪತ್ತೆ ಪರೀಕ್ಷೆ ಮತ್ತು ಮಂಪರು ಪರೀಕ್ಷೆ ನಡೆಸಲಾಗಿದೆ.

ಮೈಸೂರಿನ ಡಿ. ಮನೋರಂಜನ್, ನಾಲ್ವರು ಆರೋಪಿಗಳಾದ ಸಾಗರ್ ಶರ್ಮಾ, ಅಮೋಲ್ ಶಿಂಧೆ, ಲಲಿತ್ ಝಾ ಮತ್ತು ಮಹೇಶ್ ಕುಮಾವತ್ ಅವರಿಗೆ ಗುಜರಾತ್ ಗಾಂಧಿನಗರದ ವಿಧಿವಿಜ್ಞಾನ ಪ್ರಯೋಗಾಲಯದಲ್ಲಿ ಪರೀಕ್ಷೆ ಮಾಡಲಾಗಿದೆ. ಈ ವೇಳೆ ಮನೋರಂಜನ್ ಹಾಗೂ ಸಾಗರ್ ಅವರಿಗೆ ಹೆಚ್ಚುವರಿಯಾಗಿ ಬ್ರೈನ್ ಮ್ಯಾಪಿಂಗ್ ಪರೀಕ್ಷೆ ನಡೆಸಲಾಗಿದೆ.

ಪುಟ 2

### ರೇಸ್‌ಕೋರ್ಸ್ ಬುಕ್ಕಿಂಗ್ ಕೌಂಟರ್ ಮೇಲೆ ಸಿಸಿಬಿ ದಾಳಿ

## 3.47 ಕೋಟಿ ರೂ. ಸೀಜ್




**ಬೆಂಗಳೂರು:** ಇಲ್ಲಿನ ರೇಸ್‌ಕೋರ್ಸ್ ಬುಕ್ಕಿಂಗ್ ಕೌಂಟರ್ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದು, ಸೂಕ್ತ ದಾಖಲೆಗಳಿಲ್ಲದ 3.47 ಕೋಟಿ ರೂ. ಹಣವನ್ನು ಜಪ್ತಿ ಮಾಡಿರುವ ಘಟನೆ ಬೆಂಗಳೂರು ನಗರದಲ್ಲಿ ತಡರಾತ್ರಿ ನಡೆದಿದೆ. ನಿಗದಿತ ದರಗಳಿಗಿಂತ ಹೆಚ್ಚಿನ ಬೆಲೆಗೆ ಟಿಕೆಟ್ ಮಾರಾಟ ಹಾಗೂ ಜಿಎಸ್‌ಟಿ ಕಟ್ಟದೇ ವಂಚನೆ ಮಾಡಿದ ಆರೋಪಗಳ ಮೇಲೆ ರೇಸ್‌ಕೋರ್ಸ್ ಬುಕ್ಕಿಂಗ್ ಕೌಂಟರ್ ಮೇಲೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದಾರೆ. ಬುಕ್ಕಿಂಗ್ ಕೌಂಟರ್‌ಗಳನ್ನ ಲಾಕ್ ಮಾಡಿದ್ದಾರೆ.

ಪುಟ 2

### ಬಿಆರ್ ಹಿಲ್ಸ್‌ಗೆ ಜ.15, 16ರಂದು

## ಬೈಕ್ ಸಂಚಾರಕ್ಕೆ ನಿರ್ಬಂಧ

**ಚಾಮರಾಜನಗರ:** ಸಂಕ್ರಾಂತಿ ಹಬ್ಬದಂದು ಯಳಂದೂರು ತಾಲೂಕಿನಲ್ಲಿರುವ ಬಿಳಿಗಿರಿ ರಂಗನಬೆಟ್ಟಕ್ಕೆ ದ್ವಿಚಕ್ರ ವಾಹನಗಳ ಸಂಚಾರಕ್ಕೆ ನಿರ್ಬಂಧ ವಿಧಿಸಲಾಗಿದೆ. ಸಂಕ್ರಾಂತಿ ಹಾಗೂ ಚಿಕ್ಕಜಾತ್ರೆ ಹಿನ್ನಲೆಯಲ್ಲಿ ಜ.15 ಹಾಗೂ 16 ರಂದು ಬೈಕ್‌ಗಳಿಗೆ ನಿರ್ಬಂಧ ಹೇರಿ ಡಿಸಿ ಶಿಲ್ಪಾ ನಾಗ್ ಆದೇಶ ಹೊರಡಿಸಿದ್ದಾರೆ. ಈ ಎರಡು ದಿನ ವಾಹನ ದಟ್ಟನೆ ಹೆಚ್ಚಾಗುವ ಸಾಧ್ಯತೆ ಇದ್ದು ಬೆಟ್ಟದ ರಸ್ತೆ ಕಿರಿದು ಹಾಗೂ ಕಡಿದಾದ ಕಾರಣ ಜಿಲ್ಲಾಡಳಿತ ಮುಂಜಾಗ್ರತಾ ಕ್ರಮಕ್ಕೆಗೊಂಡಿದೆ. ಗುಂಬಳ್ಳಿ ಮತ್ತು ಹೊಂಡರಬಾಳು ಎರಡು ಅರಣ್ಯ ಇಲಾಖೆಯ ಚೆಕ್ ಪೋಸ್ಟ್‌ಗಳಲ್ಲಿಯೂ ನಿರ್ಬಂಧ ವಿಧಿಸಿದ್ದಾರೆ.



### 8 ಶಂಕಿತ ಉಗ್ರರ ವಿರುದ್ಧ

## ಎನ್‌ಐಎ ಚಾರ್ಜ್‌ಶೀಟ್




» ಸ್ಫೋಟಕಗಳ ಸಾಗಣೆ ಕಾಯ್ದೆ ಮತ್ತು ಶಸ್ತ್ರಾಸ್ತ್ರ ಕಾಯ್ದೆಯ ಅಡಿಯಲ್ಲಿ ಪ್ರಕರಣ

**ಬೆಂಗಳೂರು:** ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯದ ವಿವಿಧೆಡೆ ವಿಧ್ವಂಸಕ ಕೃತ್ಯ ಮತ್ತು ಆತ್ಮಾಹುತಿ ದಾಳಿ ಎಸಗಲು ಸಂಚು ರೂಪಿಸಿದ್ದ ಪಾಕಿಸ್ತಾನ ಮೂಲದ ಭಯೋತ್ಪಾದನಾ ಸಂಘಟನೆ ಲಷ್ಕರ್ ಎ ತೊಯ್ಬಾ ಎಂಟು ಶಂಕಿತ ಉಗ್ರರ ವಿರುದ್ಧ ರಾಷ್ಟ್ರೀಯ ತನಿಖಾ ದಳ ದೋಷರೋಪ ಪಟ್ಟಿ ಸಲ್ಲಿಸಿದೆ. 8 ಮಂದಿಯಲ್ಲಿ 6 ಮಂದಿಯನ್ನ ಬಂಧಿಸಲಾಗಿದ್ದು, ಇನ್ನೂ ಇಬ್ಬರು ಉಗ್ರರು ತಲೆ ಮರೆಸಿಕೊಂಡಿದ್ದಾರೆ ಎಂದು ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಲಾಗಿದೆ. ಇವರ ವಿರುದ್ಧ ಉಗ್ರವಾದಕ್ಕೆ ಪಿತೂರಿ, ಆತ್ಮಾಹುತಿ ದಾಳಿ ನಡೆಸಲು ಯೋಜನೆ ರೂಪಿಸಿರುವ ಆರೋಪವಿದೆ. ಈ ಪ್ರಕರಣದ ಪ್ರಮುಖ ಆರೋಪಿ ಕೇರಳ ಮೂಲದ ನಸೀರ್ ಪರಪ್ಪನ ಅಗ್ರಹಾರ ಜೈಲಿನಲ್ಲಿದ್ದಾನೆ. ಇಬ್ಬರು ಉಗ್ರರಾದ ಜುನೈದ್ ಅಹ್ಮದ್ ಮತ್ತು ಸಲ್ಮಾನ್ ಖಾನ್ ವಿದೇಶದಲ್ಲಿ ತಲೆಮರೆಸಿಕೊಂಡಿದ್ದಾರೆ. ಇನ್ನು ಕಳೆದ ಜುಲೈ 19ರಂದು ಬೆಂಗಳೂರಲ್ಲಿ ಬಂಧಿತರಾಗಿದ್ದ ಸೈಯದ್ ಸುಹೇಲ್ ಖಾನ್, ಮೊಹಮ್ಮದ್ ಉಮರ್, ಝುಹೀದ್ ತಬ್ರೇಜ್, ಸೈಯದ್ ಮುದಾಸಿರ್ ಮತ್ತು ಫೈಸಲ್ ರಬ್ಬಾನಿ ಹೆಸರುಗಳನ್ನು ಚಾರ್ಜ್ ಶೀಟ್‌ನಲ್ಲಿದೆ. ಇವರೆಲ್ಲರ ವಿರುದ್ಧ ಕಾನೂನುಬಾಹಿರ ಚಟುವಟಿಕೆ ತಡೆ ಕಾಯ್ದೆ, ಸ್ಫೋಟಕಗಳ ಸಾಗಣೆ ಕಾಯ್ದೆ ಮತ್ತು ಶಸ್ತ್ರಾಸ್ತ್ರ ಕಾಯ್ದೆಯ ಅಡಿಯಲ್ಲಿ ಪ್ರಕರಣ ದಾಖಲಾಗಿದೆ.

ಪುಟ 2

### 7 ವರ್ಷಗಳ ಹಿಂದೆ ನಾಪತ್ತೆಯಾಗಿದ್ದ

## ಐಎಎಫ್ ವಿಮಾನದ ಅವಶೇಷಗಳು ಪತ್ತೆ

**ನವದೆಹಲಿ:** ಏಳು ವರ್ಷಗಳ ಹಿಂದೆ ಕಾರ್ಯಾಚರಣೆಯ ವೇಳೆ 29 ರಕ್ಷಣಾ ಸಿಬ್ಬಂದಿಯೊಂದಿಗೆ ನಾಪತ್ತೆಯಾಗಿದ್ದ ಭಾರತೀಯ ವಾಯುಪಡೆಯ ಎಎನ್-32 ವಿಮಾನದ ಅವಶೇಷಗಳು ಚೆನ್ನೈ ಕರಾವಳಿಯಲ್ಲಿ 3.1 ಕಿಮೀ ಆಳದಲ್ಲಿ ಪತ್ತೆಯಾಗಿವೆ. ಚೆನ್ನೈ ಮೂಲದ ರಾಷ್ಟ್ರೀಯ ಸಾಗರ ತಂತ್ರಜ್ಞಾನ ಸಂಸ್ಥೆ(ಎನ್‌ಐಒಟಿ) ವಿಜ್ಞಾನಿಗಳು ಕಳೆದ ತಿಂಗಳು ಬಹು-ಬೀಮ್ ಸೋನಾರ್ (ಸೌಂಡ್ ನ್ಯಾವಿಗೇಷನ್ ಮತ್ತು ರೇಂಜಿಂಗ್) ಸೇರಿದಂತೆ ಸಮುದ್ರದ ಆಳದಲ್ಲಿ ಕಾರ್ಯಾಚರಣೆ ನಡೆಸಬಲ್ಲ ಎಯುವಿ ವಾಹನವನ್ನು ವಿಮಾನ ಅವಘಡ ಸಂಭವಿಸಿದ್ದ ಸ್ಥಳದಲ್ಲಿ ನಿಯೋಜಿಸಿದ್ದರು. ಎಯುವಿ ವಾಹನ 3.1 ಕಿ.ಮೀ. ಆಳದಲ್ಲಿ ವಿಮಾನದ ಅವಶೇಷಗಳನ್ನು ಪತ್ತೆ ಮಾಡಿದೆ. AUV ಸಮುದ್ರದಲ್ಲಿ 3,400 ಮೀಟರ್ ಆಳದಲ್ಲಿ ಬಲವಾದ ಸೋನಾರ್ ಪ್ರತಿಬಿಂಬಗಳನ್ನು ತೆಗೆದುಕೊಂಡಿದೆ ಮತ್ತು ವಿಮಾನದ ಅವಶೇಷಗಳ ಚಿತ್ರಗಳನ್ನು ಕ್ಲಿಕ್ ಮಾಡಿದೆ.




### ಪ್ರಿಯಕರನಿಂದಲೇ ಪತಿಯನ್ನು

## ಕೊಲೆ ಮಾಡಿಸಿದ್ದು ಪತ್ನಿ



**ಬೆಂಗಳೂರು:** ಶಬರಿಮಲೆ ಅಯ್ಯಪ್ಪನ ದರ್ಶನ ಮುಗಿಸಿ ಮನೆಗೆ ಹೋಗದೇ ಅಯ್ಯಪ್ಪನ ಸನ್ನಿದಿಯಿಂದ ನೇರವಾಗಿ ಪ್ರೇಯಸಿಯನ್ನ ನೋಡಲು ಬೆಂಗಳೂರಿಗೆ ಬಂದಿದ್ದ ಪ್ರೀಯಕರ, ಇದೀಗ ಪ್ರೇಯಸಿಯೊಂದಿಗೆ ಜೈಲುಪಾಲಾಗಿರುವ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಹೌದು. ಶಬರಿಮಲೆ ಅಯ್ಯಪ್ಪನ ದರ್ಶನ ಮುಗಿಸಿ ಬಂದಿದ್ದ ಪ್ರಿಯಕರನೊಂದಿಗೆ ಸರಸವಾಡಲು ಪತಿ ಅಡ್ಡಿಯಾಗಿದ್ದಾನೆ. ಇದರಿಂದ ಆಕ್ರೋಶಗೊಂಡ ಪತ್ನಿ ಪ್ರಿಯಕರನೊಂದಿಗೆ ಸೇರಿ ಪತಿಯನ್ನೇ ಕೊಲೆ ಮಾಡಿಸಿದ್ದಾಳೆ. ಪತಿ ವೆಂಕಟನಾಯ್ಕ್ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಲೆ ಮಾಡಿಸಿದ್ದಾಳೆ. ಬಳಿಕ ಪೊಲೀಸ್ ಸಹಾಯವಾಣಿ 112ಗೆ ಕರೆ ಮಾಡಿ ಬಾತ್ ರೂಂನಲ್ಲಿ ನನ್ನ ಗಂಡ ಕಾಲು ಜಾರಿ ಬಿದ್ದು ಸಾವನ್ನಪ್ಪಿದ್ದಾನೆ ಅಂತ ಪೊಲೀಸರ ಮುಂದೆ ಹೈಡ್ರಾಮಾ ಮಾಡಿದ್ದಾಳೆ.

ಪುಟ 2

## ಕೂಸಿನ ಮನೆ ಕೇರ್ ಟೇಕರ್ಸ್‌ಗಳಿಗೆ ಪ್ರಯೋಗಿಕ ಕ್ಷೇತ್ರ ಭೇಟಿ

**ರಾಮನಗರ:** ಕೂಸಿನ ಮನೆಗೆ ಬರುವಂತಹ ಮಕ್ಕಳನ್ನು ಆರೈಕೆದಾರರು ಸರಿಯಾಗಿ ನೋಡಿಕೊಳ್ಳಬೇಕು ಎಂದು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶಿವಕುಮಾರ್ ಅವರು ತಿಳಿಸಿದರು. ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಆಶ್ರಯದಲ್ಲಿ ಮೊದಲನೆ ಹಂತದ ಕೂಸಿನ ಮನೆ ಮಕ್ಕಳನ್ನು ಆರೈಕೆ ಮಾಡುವವರಿಗೆ ಚನ್ನಟ್ಟಣ ತಾಲ್ಲೂಕಿನ ಬಿ.ವಿ ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ದ್ಯಾವಪಟ್ಟಣ ಗ್ರಾಮದಲ್ಲಿ ಪ್ರಾರಂಭವಾಗಿರುವ ಶಿಶುಪಾಲನಾ ಕೇಂದ್ರಕ್ಕೆ ರಾಮನಗರ ಜಿಲ್ಲಾಪಂಚಾಯಿತಿ ವತಿಯಿಂದ ತಾಲ್ಲೂಕು ವ್ಯಾಪ್ತಿಯಲ್ಲಿ ಹೊಸದಾಗಿ ತರಬೇತಿ ಪಡೆಯುತ್ತಿರುವ ಕೇರ್ ಟೇಕರ್ಸ್ ಸಿಬ್ಬಂದಿಗಳಿಗೆ ಕ್ಷೇತ್ರ ಭೇಟಿ ಹಮ್ಮಿಕೊಂಡು ತರಬೇತಿ ಕಾರ್ಯಕ್ರಮದ ಕುರಿತು ಮಾತನಾಡಿದರು.

ಕೂಸಿನ ಮನೆ ಸ್ಥಾಪನೆಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತ್ ರಾಜ್ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾಗಿದೆ, ನರೇಗಾ ಕ್ರಿಯಾಶೀಲಾ ಕೂಲಿಕಾರ್ಮಿಕರ ಮಕ್ಕಳ ಲಾಲನೆ ಪಾಲನೆ ಜೊತೆಗೆ ಪೋಷಣೆ ಮಾಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು. ಜಿಲ್ಲಾ ಪಂಚಾಯತ್‌ನ ಯೋಜನಾ ನಿರ್ದೇಶಕ ಮಂಜುನಾಥ್ ಮಾತನಾಡಿ, ನರೇಗಾ ಯೋಜನೆಯಡಿ ಕ್ರಿಯಾಶೀಲಾ ಹೊಂದಿರುವ ಕೂಲಿಕಾರರ 6 ತಿಂಗಳಿಂದ 3 ವರ್ಷದ ಒಳಗಿನ ಮಕ್ಕಳ ಆರೈಕೆ ಮಾಡುವ ಉದ್ದೇಶದಿಂದ ರಾಜ್ಯ ವ್ಯಾಪ್ತಿಯಲ್ಲಿ ಕೂಸಿನ ಮನೆಗಳನ್ನು ಆರಂಭಿಸಲಾಗಿದೆ ಎಂದರು. ರಾಮನಗರ ಜಿಲ್ಲಾ ವ್ಯಾಪ್ತಿಯಲ್ಲೂ 125 ಕೂಸಿನ ಮನೆ ಗುರಿಯನ್ನು ನೀಡಿದ್ದು, ಚನ್ನಪಟ್ಟಣ ತಾಲ್ಲೂಕು ವ್ಯಾಪ್ತಿಯಲ್ಲಿ ಸುಮಾರು 27 ಪಂಚಾಯಿತಿಗಳ ಕೇರ್ ಟೇಕರ್ಸ್ಗಳು ತರಬೇತಿ ಪಡೆದಿರುತ್ತಾರೆ. ತರಬೇತಿ ಪಡೆದ ಕೇರ್ ಟೇಕರ್ಸ್ಗಳ 7ನೇ ದಿನ ಕ್ಷೇತ್ರ ಭೇಟಿ ಹಮ್ಮಿಕೊಂಡಿದ್ದು. ಕೂಸಿನ ಮನೆಗೆ ಬೇಕಾದ ಸಿದ್ಧತೆಯನ್ನು ಸ್ವತಃ ಕೇರ್ ಟೇಕರ್ಸ್ಗಳಿಂದ ಮಾಡಿಸುವ ಮೂಲಕ ನಿತ್ಯ ಮಕ್ಕಳ ಆರೈಕೆ ಬಗ್ಗೆ, ಪೌಷ್ಠಿಕ ಆಹಾರ ಸೇರಿ ವಿವಿಧ ವಿಚಾರದ ಬಗ್ಗೆ ಮಾಸ್ಟರ್ ಟ್ರೈನರ್ಸ್ ಪ್ರಯೋಗಿಕವಾಗಿ ತರಬೇತಿ ನೀಡುತ್ತಿದ್ದಾರೆ, ಎಲ್ಲಾ ಕೇರ್ ಟೇಕರ್ಸ್ಗಳು ಈ ತರಬೇತಿಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

## ಕೋಚಿಂಗ್ ಸೆಂಟರ್‌ಗಳ ನೋಂದಣಿ ಕಡ್ಡಾಯ

**ಬೆಂಗಳೂರು:** ಕರ್ನಾಟಕ ಶಿಕ್ಷಣ ಕಾಯ್ದೆ-1983 ರ ಸೆಕ್ಷನ್ 2 ರ ಕ್ಲಾಸ್ (31) ಮತ್ತು ಕರ್ನಾಟಕ ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ.43.ವಿವಿಧ.2001, ದಿನಾಂಕ: 05-05-2003 ಹಾಗೂ ಸರ್ಕಾರದ ಆದೇಶ ಸಂಖ್ಯೆ: ಇಡಿ.09.ವಿವಿಧ.2001, ದಿನಾಂಕ: 16-05-2006 ಪ್ರಕಾರ, ಕರ್ನಾಟಕ ರಾಜ್ಯದಲ್ಲಿ ಐ.ಎ.ಎಸ್, ಐ.ಪಿ.ಎಸ್, ಐ.ಎಫ್.ಎಸ್. ಹಾಗೂ ಕೆ.ಎ.ಎಸ್. ಭಾ?ಾ ಕೋಚಿಂಗ್ ಮತ್ತು ಇನ್ನಿತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕೋಚಿಂಗ್ ನೀಡುವ ಸಂಸ್ಥೆಗಳು ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಸೌಧ, ಶೇ?ಾದ್ರಿ ರಸ್ತೆ ಬೆಂಗಳೂರು - 560001 ಇಲ್ಲಿ ನೋಂದಣಿ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ನೋಂದಣಿ ಮಾಡಿಕೊಳ್ಳದೇ ಇರುವ ರಾಜ್ಯದಲ್ಲಿರುವ ಕೋಚಿಂಗ್ ಸೆಂಟರ್ಗಳು ಈ ಪ್ರಕಟಣೆಯು ಪ್ರಕಟಗೊಂಡ 15 ದಿನಗಳ ಒಳಗಾಗಿ ಕಡ್ಡಾಯವಾಗಿ ನೋಂದಣಿ ಮಾಡಿಕೊಳ್ಳುವುದು. ತಪ್ಪಿದಲ್ಲಿ ಕರ್ನಾಟಕ ಶಿಕ್ಷಣ ಕಾಯ್ದೆ-1983 ರ ಸೆಕ್ಷನ್ 2 ರ ಕ್ಲಾಸ್ (31) ರ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು ಎಂದು ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ತಿಳಿಸಿದ್ದಾರೆ.

## ಹಾಡು-ಹಳೆಯದಾದರೇನು ಭಾವ ನವನವೀನ

**ಮೈಸೂರು:** ನಗರದ ಭಾಮೀಸ್ ಫೌಂಡೇಶನ್‌ನ ಸಂಸ್ಥಾಪಕ ಡಾ.ರಾಘವೇಂದ್ರ ಪ್ರಸಾದ್ ಮತ್ತು ನಗರದ ಶಾಂತಲಾ ಚಿತ್ರಮಂದಿರದ ವ್ಯವಸ್ಥಾಪಕರಾಗಿದ್ದ ಎಂ.ಜಿ.ದೇವರಾಜ್ ಅವರುಗಳ ಆಶೀರ್ವಾದದೊಂದಿಗೆ ಎಸ್.ಜೆ.ಸಿ.ಇ. ನಿವೃತ್ತ ಪ್ರಾಧ್ಯಾಪಕ ಡಾ.ಕೆ.ಎಸ್.ಮಂಜುನಾಥ್‌ರವರ ಸಾರಥ್ಯದಲ್ಲಿ ಜಗನ್ಮೋಹನ ಅರಮನೆಯಲ್ಲಿ ಇತ್ತೀಚೆಗೆ ಹಾಡು-ಹಳೆಯದಾದರೇನು ಭಾವ ನವನವೀನ ಕನ್ನಡ ಮತ್ತು ಹಿಂದಿ ಚಲನಚಿತ್ರಗಳ ಸಂಗೀತ ಸಂಜೆಯನ್ನು ಆಯೋಜಿಸಲಾಗಿತ್ತು. ಮೊದಲಿಗೆ ಡಾ.ಮಂಜುನಾಥ್ ಕವಿರತ್ನ ಕಾಳಿದಾಸ ಚಿತ್ರದ ಮಾಣಿಕ್ಯವೀಣಾ ಮುಪಲಾಲಯಂತಿ ಗೀತೆಯೊಂದಿಗೆ ಪ್ರಾರ್ಥನೆ ಸಲ್ಲಿಸಿದರು. ನಂತರ ಮತ್ತೊಬ್ಬ ಎಸ್.ಜೆ.ಸಿ.ಇ. ನಿವೃತ್ತ ಪ್ರಾಧ್ಯಾಪಕ, ಗಾಯಕ ಡಾ.ಎ.ಡಿ.ಶ್ರೀನಿವಾಸನ್ ಸೂರ್ಯವಂಶ ಚಿತ್ರದ ಸೇವಂತಿಯೇ ಸೇವಂತಿಯೇ, ಹಿಂದಿ ಚಲನಚಿತ್ರ ಮೆಹಬೂಬದಿಂದ ಮೇರೇ ನೈನಾ, ಬಡವರ ಬಂಧು ಚಿತ್ರದ ನಿನ್ನ ಕಂಗಳ ಬಿಸಿಯ ಹನಿಗಳು, ಹಿಂದಿ ಚಲನಚಿತ್ರ ಆರಾಧನಾದಿಂದ ಮೇರೇ ಸಪುನೋಕಿ ರಾನಿ ಗೀತೆಗಳನ್ನು ಪ್ರಸ್ತುತಪಡಿಸಿದರು. ನಂತರ ಡಾ.ಕೆ.ಎಸ್.ಮಂಜುನಾಥ್ ಹಾಗೂ ಸಹನಾ ನಾ ನಿನ್ನ ಮರೆಯಲಾರೆ ಚಿತ್ರದ ಎಲ್ಲೆಲ್ಲಿ ನೋಡಲಿ ಹಾಡನ್ನು ಬಹಳ ಸೊಗಸಾಗಿ ಹಾಡಿದರು. ಯುಗಳ ಗೀತೆಯಲ್ಲಿ ಡಾ.ಎ.ಡಿ.ಶ್ರೀನಿವಾಸನ್ ಹಾಗೂ ಮತ್ತೊಬ್ಬ ಯುವ ಪ್ರತಿಭೆ ಹಂಸಿನಿ ಕುಮಾರ್‌ರವರು ನಾ ನಿನ್ನ ಬಿಡಲಾರೆ ಚಿತ್ರದ ನಾನು ನೀನು ಒಂದಾದ ಮೇಲೆ, ಇಂದ್ರಜಿತ್ ಚಿತ್ರದ ಬೆಳ್ಳಿ ರಥದಲಿ ಸೂರ್ಯ ತಂದ ಕಿರಣ ಗೀತೆಯನ್ನು ಬಹಳ ತನ್ಮಯತೆಯಿಂದ ಪ್ರಸ್ತುತಪಡಿಸಿದರು. ಸುಮಾರು ಮೂರು ಗಂಟೆಗಳಿಗೂ ಹೆಚ್ಚು ಕಾಲ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಹಾಡಿನ ಆಯ್ಕೆಯೂ ಅಷ್ಟೇ ಮಧುರವಾಗಿತ್ತು. ಎಲ್ಲ ಗಾಯಕ-ಗಾಯಕಿಯರೂ ನಾವು ಯಾವ ಡಾ.ರಾಜ್, ಡಾ.ಎಸ್‌ಪಿಬಿ, ಡಾ.ಪಿಬಿಎಸ್, ಎಸ್.ಜಾನಕಿಗೆ ಕಡಿಮೆಯಿಲ್ಲ ಎಂಬಂತೆ ಸುಶ್ರಾವ್ಯವಾಗಿ ಹಾಡಿದರು. ಪ್ರೇಕ್ಷಕರೂ ಸಭಾಂಗಣದಲ್ಲಿ ಕಟ್ಟ ಕಡೆಯ ಹಾಡಿನವರೆಗೂ ಅಲುಗದೇ ಕುಳಿತು ಸಂಗೀತ ರಸಸಂಜೆಯನ್ನು ಆಹ್ಲಾದಿಸಿದರು.

# ಸಾರ್ವಜನಿಕರು ಸರಕು, ಸೇವೆ ಕೊಳ್ಳುವಾಗ ಜಾಗರೂಕತೆವಹಿಸಿ

**ಕೋಲಾರ:** ಸಾರ್ವಜನಿಕರು ಸರಕು ಮತ್ತು ಸೇವೆಗಳನ್ನು ಕೊಳ್ಳುವಾಗ ಜಾಗರೂಕತೆ ವಹಿಸಿ ಮೂಲ ಬೆಲೆ ಮತ್ತು ಬಳಕೆಯ ಅವಧಿ ನೋಡಿ ವಸ್ತುಗಳನ್ನು ಖರೀದಿ ಮಾಡಬೇಕು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಹೇಳಿದರು.

ಇಂದು ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾನೂನು ಮಾಪನ ಶಾಸ್ತ್ರ ಇಲಾಖೆ, ವಕೀಲರ ಸಂಘ, ಕೋಲಾರ, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ ಹಾಗೂ ಯಶಸ್ವಿನಿ ಮಹಿಳಾ ಮಂಡಳಿ(ರಿ) ಕೋಲಾರ ಇವರ ಸಹಯೋಗದಲ್ಲಿ ರಾಷ್ಟ್ರೀಯ ಗ್ರಾಹಕರ ದಿನಾಚರಣೆ-2024 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಒಂದು ಉತ್ಪನ್ನಗಳು, ಸರಕುಗಳು, ಸೇವೆಗಳನ್ನು ಕೊಳ್ಳುವಾಗ ಅವುಗಳ ಬೆಲೆ, ತೂಕ, ಅಳತೆ, ಗುಣಮಟ್ಟ, ದಿನಾಂಕಗಳನ್ನು ಸರಿಯಾಗಿ ನೋಡಿ ತೆಗೆದುಕೊಳ್ಳಬೇಕು ಮತ್ತು ತಪ್ಪದೇ ರಸೀದಿಯನ್ನು ಪಡೆಯಬೇಕು. ಇತ್ತೀಚಿನ ದಿನಗಳಲ್ಲಿ ಆಹಾರ ಸಾಮಗ್ರಿಗಳಲ್ಲಿ ಗ್ರಾಹಕರು ತುಂಬಾ ಮೋಸ ಹೋಗುತ್ತಿದ್ದಾರೆ. ಗ್ರಾಹಕರು ಉತ್ಪನ್ನಗಳನ್ನು ಕೊಳ್ಳುವಾಗ ಜಾಗೃತ ನಾಗರಿಕರಾಗಿ ಯಾವುದೇ ರೀತಿಯ ಅಕ್ರಮವಾಗಿ ಮಾರಾಟವಾಗುವಂತಹ ಸರಕು ಮತ್ತು ಸೇವೆಗಳು ಮತ್ತು ಉತ್ಪನ್ನಗಳು ಕಂಡುಬಂದರೆ ನಿರ್ಬಂಧಿಸುವಂತೆ ಮತ್ತು ಅದರ ವಿರುದ್ಧ ಗ್ರಾಹಕ ಪರಿಹಾರ ವ್ಯಾಜ್ಯಗಳ ಆಯೋಗಕ್ಕೆ ದೂರು ನೀಡಬಹುದು ಎಂದು ತಿಳಿಸಿದರು.

ನಾವು ಯಾವುದೇ ವಸ್ತುವನ್ನು ಖರೀದಿಸಿದರೆ ರಸೀದಿಯನ್ನು ತಪ್ಪದೆ ಪಡೆಯಬೇಕು. ನಾವು ಸಹಾ ಮೋಸ ಹೋಗದಂತೆ ಜಾಗೃತರಾಗಿ ದೇಶಕ್ಕೆ ಮಾದರಿಯಾಗಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸುನಿಲ್ ಕುಮಾರ್ ಎಸ್.ಹೊಸಮನಿ ಅವರು ಮಾತನಾಡಿ ಗ್ರಾಹಕರೇ ಎಚ್ಚೆತ್ತುಕೊಳ್ಳಿ ಎಂಬ ವೇದ ವಾಕ್ಯವನ್ನು ನುಡಿದು ಸಾರ್ವಜನಿಕರು ಪಡೆಯುವಂತಹ ಸರಕು ಮತ್ತು ಸೇವೆಗಳಿಗೆ ಯಾವುದೇ ರೀತಿಯ ಅಕ್ರಮಗಳು ಕಂಡುಬಂದಲ್ಲಿ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಶೀಘ್ರವಾಗಿ ದೂರನ್ನು ನೊಂದಾಯಿಸಿ. ಬೇರೆ ಯಾವ ರೀತಿಯಲ್ಲಿಯು ಸಹಾ ರಾಜಿಯಾಗದೆ ವಸ್ತುಗಳ ಗುಣಮಟ್ಟ, ತೂಕ, ಅಳತೆ ದಿನಾಂಕಗಳನ್ನು ಸರಿಯಾಗಿ ನೋಡಿ ನಂತರ ತೆಗೆದುಕೊಳ್ಳಿ ಎಂದು ಹೇಳಿದರು.

ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಸೈಯದ್ ಅನ್ಸರ್ ಕಲೀಂ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿ, ದಿನನಿತ್ಯದ ವ್ಯವಹಾರಗಳಲ್ಲಿ ಕಾನೂನು ನಮಗೆ ಅವಶ್ಯಕವಾಗಿದೆ. ಕೋಲಾರ ಜಿಲ್ಲೆಯಲ್ಲಿ ಗ್ರಾಹಕ ನ್ಯಾಯಾಲಯದಲ್ಲಿ ಕೇಸುಗಳನ್ನು ದಾಖಲಾಗುತ್ತಿಲ್ಲ. ಇಲ್ಲಿನ ಜನರಿಗೆ ಅದರ ಅರಿವಿನ ಕೊರತೆ ಕಡಿಮೆ ಇದೆ. ಅದರಿಂದ ಗ್ರಾಹಕರು ತುಂಬಾ ಜಾಗರೂಕತೆಯಿಂದ ಉತ್ಪನ್ನಗಳನ್ನ ಕೊಳ್ಳಬೇಕು ಎಂದು ಹೇಳಿದರು.

ಇತ್ತೀಚಿನ ಡಿಜಿಟಲ್ ಆನ್‌ಲೈನ್ ಯುಗದಲ್ಲಿ ಕಂಪನಿಗಳ ಉತ್ಪನ್ನಗಳ ಗುಣಮಟ್ಟ ಕಡಿಮೆ ಇದ್ದರೂ ಸಹ ಅಂತಹ ಕಂಪನಿಗಳ ವಿರುದ್ಧ ಸಹಾ ಕೇಸುಗಳನ್ನು ದಾಖಲಿಸಬಹುದು ಮತ್ತು ಪರಿಹಾರವನ್ನು ಪಡೆಯಬಹುದಾಗಿದೆ ಮತ್ತು ಯಾವುದೇ ರೀತಿಯ ಸರಕು ಮತ್ತು ಸೇವೆಗಳನ್ನು ಪಡೆಯುವಾಗ ತುಂಬಾ ಎಚ್ಚರವಾಗಿಬೇಕು. ಅವುಗಳ ರಸೀದಿಯನ್ನು ತಪ್ಪದೆ ಪಡೆಯಬೇಕು. ವೈದ್ಯಕೀಯ, ಇನ್ಸೂರೆನ್ಸ್ ಮತ್ತು ದಿನಸಿ ಅಂಗಡಿ, ಗ್ಯಾಸ್, ಪೆಟ್ರೋಲ್ ಮುಂತಾದ ಸರಕು ಮತ್ತು ಸೇವೆಗಳಿಗೆ ಸಂಬಂಧಿಸಿದಂತೆ ಅದರ ತೂಕ, ಗುಣಮಟ್ಟ, ಅಳತೆ ಮುಂತಾದವುಗಳನ್ನು ಗಮನದಲ್ಲಿಟ್ಟುಕೊಂಡು ಜಾಗೃತರಾಗಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಆಹಾರ ಸುರಕ್ಷತಾ ಮತ್ತು ಗುಣಮಟ್ಟ ಕಾಯ್ದೆ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿ ಶ್ರೀ ನಿಧಿ, ವಕೀಲರ ಸಂಘದ ಉಪಾಧ್ಯಕ್ಷ ರವೀಂದ್ರ ಬಾಬು, ಕಾನೂನು ಮಾಪನ ಶಾಸ್ತ್ರ ಸಹಾಯಕ ನಿಯಂತ್ರಕ ಎಂ.ಪಿ. ಪ್ರಭುದೇವ, ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮದ ಜಿಲ್ಲಾ ವ್ಯವಸ್ಥಾಪಕ ಎಸ್. ಪ್ರಸಾದ್, ಸೋಮೇನಹಳ್ಳಿಯ ಯಶಸ್ವಿನಿ ಮಹಿಳಾ ಮಂಡಳಿ ಅಧ್ಯಕ್ಷ ಕೆ.ಎಸ್. ನಾಗವೇಣಿ, ಆಹಾರ ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಸಹಾಯಕ ನಿರ್ದೇಶಕ ಪ್ರಕಾಶ್ ಅವರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪ್ರವಾಸಿ ತಾಣಗಳ ಅಭಿವೃದ್ಧಿಗೆ ಪರಿಣಿತರಿಂದ ಅಭಿಪ್ರಾಯ ಸಂಗ್ರಹ



**ಮಂಡ್ಯ:** ಜಿಲ್ಲೆಯಲ್ಲಿರುವ ಅನೇಕ ಪಾರಂಪರಿಕ, ಐತಿಹಾಸಿಕ, ಸಾಂಸ್ಕೃತಿಕ ತಾಣಗಳನ್ನು ಗುರುತಿಸಿ ಅಭಿವೃದ್ಧಿ ಪಡಿಸಲು ಜಿಲ್ಲಾಡಳಿತದಿಂದ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಆಸಕ್ತಿ ಹೊಂದಿರುವ ಪರಿಣಿತ ವ್ಯಕ್ತಿಗಳಿಂದ ವಿವರ ಪಡೆಯಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಡಾ.ಕುಮಾರ ಅವರು ತಿಳಿಸಿದ್ದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಮಂಡ್ಯ ಜಿಲ್ಲೆಯ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಾರ್ವಜನಿಕರನ್ನು ಆಕರ್ಷಣೆ ಮಾಡಲು ಪ್ರೇಕ್ಷಣೀಯ ಸ್ಥಳಗಳಲ್ಲಿ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಪ್ರೇಕ್ಷಣೀಯ ಸ್ಥಳಗಳಿಗೆ ಹೋಗಲು ಸಾರಿಗೆ ವ್ಯವಸ್ಥೆ ಕಲ್ಪಿಸಬೇಕು. ಲಭ್ಯವಿರುವ ಅನುದಾನದಲ್ಲಿ ಉತ್ತಮ ರೀತಿಯಲ್ಲಿ ಅಭಿವೃದ್ಧಿ ಪಡಿಸಲು ಚಿಂತಿಸಲಾಗುತ್ತಿದೆ ಎಂದರು.

ಜಿಲ್ಲೆಯಲ್ಲಿರುವ ಪ್ರೇಕ್ಷಣೀಯ ಸ್ಥಳಗಳನೊಳಗೊಂಡ ವೆಬ್ ಸೈಟ್, ಭೂಪಟ ಟೂರಿಸ್ಟ್ ಮಾಹಿತಿಯ ಪಾಕೆಟ್ ಡೈರಿ, ಪ್ರವಾಸಿ ತಾಣದ ಒಂದು ನಿಮಿಷ ವಿಡಿಯೋ, ಬೆಂಗಳೂರು - ಮೈಸೂರು ರಾಷ್ಟೀಯ ಹೆದ್ದಾರಿಯಲ್ಲಿ ಮಂಡ್ಯ ಪ್ರೇಕ್ಷಣೀಯ ಸ್ಥಳಗಳ ಫಲಕಗಳ ಅಳವಡಿಕೆಗೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದರು.

ನಾಲ್ವಡಿ ಕೃಷ್ಣರಾಜ ಒಡೆಯರ್, ಚೋಳರು, ಹೊಯ್ಸಳರು, ಗಂಗರು ಹೀಗೆ ಅನೇಕ ಅರಸರುಗಳು ಕಟ್ಟಿದ ಅನೇಕ ಪ್ರೇಕ್ಷಣೀಯ ಯಾತ್ರಾ ಸ್ಥಳಗಳು ಇದ್ದು ಅವುಗಳನ್ನು ಪುನರ್ ಚೇತನ ಮಾಡಿದರೆ ಜಿಲ್ಲೆಯ ಸಮಗ್ರ ಪ್ರವಾಸೋದ್ಯಮ ಅಭಿವೃದ್ಧಿ ಮಾಡಲು ನೆರವಾಗುತ್ತದೆ ಎಂದರು .

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್ ಅವರು ಮಾತನಾಡಿ ನರೇಗಾ ಯೋಜನೆಯಡಿ ಕೆರೆಗಳ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗಿದೆ. ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದಂತೆ ನರೇಗಾ ಯೋಜನೆಯಲ್ಲಿ ಸೇರಿಸಬಹುದಾದ ಕಾಮಗಾರಿಗಳ ಬಗ್ಗೆ ಚಿಂತಿಸಲಾಗುವುದು ಎಂದರು.

ಆನೇಕ ಪ್ರವಾಸಿ ತಾಣಗಳಲ್ಲಿ ಆಹಾರ ಒದಗಿಸಲು, ವಾಹನ ನಿಲುಗಡೆ ಶುಲ್ಕ ಸಂಗ್ರಹಿಸಲು, ಪ್ರವಾಸಿ ತಾಣದ ಮಾಹಿತಿ ನೀಡುವ ಗೈಡ್ ಗಳಾಗಿ ಕಾರ್ಯನಿರ್ವಹಿಸಲು, ಸ್ವಚ್ಛತೆ ಗೆ ಸಂಬಂಧಸಿದಂತೆ ಸ್ಥಳೀಯ ಮಹಿಳಾ ಸಂಘಗಳಿಗೆ ಅವಕಾಶ ನೀಡಲು ಯೋಜನೆ ಸಿದ್ದಪಡಿಸಲಾಗುವುದು ಎಂದರು.

ಪ್ರವಾಸಿ ಗೈಡ್ ಪ್ರವಾಸಿ ಸ್ಥಳಗಳಲ್ಲಿ ಉತ್ತಮ ಮಾಹಿತಿವುಳ್ಳ ಪ್ರವಾಸಿ ಗೈಡ್ ಗಳ ಅವಶ್ಯಕತೆ ಇದೆ. ಅವರಿಗೆ ಆಂಗ್ಲ ಭಾಷೆ ಸೇರಿದಂತೆ ವಿವಿಧ ಭಾಷೆಗಳ ಬಗ್ಗೆ ತಿಳಿದಿರಬೇಕು. ಮಂಡ್ಯ ಜಿಲ್ಲೆ ಕೃಷಿ ಆಧಾರಿತ ಜಿಲ್ಲೆಯಾಗಿದ್ದು, ಅಗ್ರಿ ಟೂರಿಸಂ ಗೆ ಚಿಂತಿಸಬಹುದು ಎಂದು ಮಳವಳ್ಳಿ ತಾಲ್ಲೂಕು ಚುಕ್ಕಿಮನೆ ಹೋಂಸ್ಟೇ ಮಾಲೀಕರಾದ ಸಂಜಯ್ ಶಂಕರಪ್ಪ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಸಾಮಾಜಿಕ ಮಾಧ್ಯಮ ಮಂಡ್ಯ ಜಿಲ್ಲೆಯ ಪ್ರವಾಸೋದ್ಯಮ ಇಲಾಖೆಯಿಂದ ಫೇಸ್ ಬುಕ್, ಇನ್ಸ್ಟಾ?ಟಗ್ರಮ್ ಸೇರಿದಂತೆ ಇನ್ನಿತರ ಸಾಮಾಜಿಕ ಮಾಧ್ಯಮದ ಮೂಲಕ ಪ್ರವಾಸಿಗರನ್ನು ಆಕರ್ಷಿಸುವ ರೀತಿ ಭಾವಚಿತ್ರ ಹಾಗೂ ವಿಡಿಯೋಗಳನ್ನು ಅಪ್ ಲೋಡ್ ಮಾಡಬೇಕು ಎಂದು ಪಾರಂಪರಿಕ ಸಂರಕ್ಷಣಾ ಉತ್ಸಾಹಿ ಸ್ವಾಮಿನಾಥನ್ ನಟರಾಜನ್ ಅವರು ತಮ್ಮ ಅನಿಸಿಕೆ ವ್ಯಕ್ತ ಪಡಿಸಿದರು.

ಜಲ ಮತ್ತು ಸಾಹಸ ಕ್ರೀಡೆಗೆ ಉತ್ತೇಜನ ಕೆ.ಆರ್. ಪೇಟೆಯ ಅಂಬಿಗರಹಳ್ಳಿಯಲ್ಲಿರುವತ್ರಿವೇಣಿ ಸಂಗಮ ಇಲ್ಲಿ ಜಲ ಕ್ರೀಡೆಗೆ ಹೆಚ್ಚಿನ ಅವಕಾಶಗಳಿವೆ. ವೇಣು ಗೋಪಾಲಸ್ವಾಮಿ, ಭೂ ವರಹಸ್ವಾಮಿ ದೇವಾಲಯ ಸೇರಿದಂತೆ ದೇವಲಾಯಗಳಿದ್ದು, ಬಸ್ ಸೌಲಭ್ಯದ ಅವಶ್ಯಕತೆ ಇದೆ. ಯಾತ್ರಿ ನಿವಾಸಿಗಳನ್ನು ಪಬ್ಲಿಕ್ ಪ್ರೈವೇಟ್ ಪಾರ್ಟರ್ನರ ಶಿಪ್ ನಲ್ಲಿ ನಿರ್ವಹಣೆ ಮಾಡುವುದು ಉತ್ತಮ ಎಂದು ಪಾರಂಪರಿಕ ಸಂರಕ್ಷಣಾ ಉತ್ಸಾಹಿ ಸಣ್ಣಸ್ವಾಮಿ ಗೌಡ ಅವರು ಸಭೆಗೆ ಮಾಹಿತಿ ನೀಡಿದರು.

ಇತಿಹಾಸ ಸಂಶೋಧಕ ಮಹಮ್ಮದ್ ಖಲೀಂ ಉಲ್ಲಾ ಅವರು ಜಿಲ್ಲೆಯಲ್ಲಿ ವಿದ್ಯಾರ್ಥಿಗಳು ಪಠ್ಯದಲ್ಲಿ ಓದುವ ಚೋಳರು, ಹೊಯ್ಸಳ ರ ಕಾಲದ ಸ್ಮಾರಕಗಳಿವೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪ್ರವಾಸ ಕೈಗೊಳ್ಳುವಾಗ ಮೊದಲು ಜಿಲ್ಲೆಯ ಪ್ರವಾಸ ಕೈಗೊಳ್ಳಬೇಕು ಎಂದರು.

ಶ್ರೀರಂಗಪಟ್ಟಣದ ಗಣಂಗೂರು ನಂಜೇಗೌಡ ಅವರು ಮಾತನಾಡಿ ಶ್ರೀರಂಗಪಟ್ಟಣ ದಲ್ಲಿ ಧಾರ್ಮಿಕ, ಪಾರಂಪರಿಕ ಹಾಗೂ ನೈಸರ್ಗಿಕವಾಗಿ ಆಕರ್ಷಿಸುವ ಸ್ಥಳಗಳಿವೆ . ಇಲ್ಲಿ ಒಂದು ದಿನದ ಪ್ತವಾಸ ಕೈಗೊಳ್ಳುವ ಬಗ್ಗೆ ಪ್ರವಾಸಿಗರಿಗೆ ಮಾಹಿತಿ ನೀಡಿ ಒಂದು ದಿನದ ಟೂರ್ ಪ್ಯಾಕೇಜ್ ನೀಡಬಹುದು. ಬಹಳಷ್ಟು ಪಾರಂಪರಿಕ ಸ್ಥಳಗಳು ನಶಿಸಿ ಹೋಗುವ ಹಂತ ತಲುಪಿದ್ದು, ಅವುಗಳ ಸಂರಕ್ಷಣೆಯಾಗಬೇಕು ಎಂದು ಭಾವಚಿತ್ರ ಸಮೇತ ವಿವರಿಸಿದರು. ಪ್ರವಾಸೋದ್ಯಮ ಇಲಾಖೆ ಉಪನಿರ್ದೇಶಕ ಎಚ್. ಬಿ ರಾಘವೇಂದ್ರ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕಿ ಎಚ್. ಎಸ್ ನಿರ್ಮಲಾ, ಹಿರಿಯ ಸಾಹಿತಿಗಳಾದ ತೈಲೂರು ವೆಂಕಟಕೃಷ್ಣ, ಪ್ರೊ. ಶಿವರಾಮ್, ಮೈಸೂರು ವಿಶ್ವ ವಿದ್ಯಾನಿಲಯದ ಪ್ರೊ. ಡಾ. ಪುಷ್ಪ ಹಾಗೂ ಇನ್ನಿತರು ಉಪಸ್ಥಿತರಿದ್ದರು.

## ಮಹಿಳೆಯರ ಮೇಲೆ ಆಗುವ ದೌರ್ಜನ್ಯ ತಡೆಗಟ್ಟಲು ಕಾನೂನು ಜಾರಿ



**ಕೋಲಾರ:** ಮನೆಗಳಲ್ಲಿ ಕುಟುಂಬಗಳ ಮಧ್ಯೆ ಜಗಳಗಳು ಆಗುತ್ತಿರುತ್ತದೆ, ಈಗಿನ ಕಂಪ್ಯೂಟರ್ ಮತ್ತು ಇಂಟರ್ನೆಟ್ ಯುಗದಲ್ಲಿ ಕೌಟುಂಬಿಕ ಜಗಳಗಳು ಹೆಚ್ಚಿಗೆ ಆಗಿರುತ್ತದೆ. ಮಹಿಳೆಯರ ಮೇಲೆ ಆಗುವ ದೌರ್ಜನ್ಯಗಳನ್ನು ತಡೆಗಟ್ಟಲು ಕಾನೂನುಗಳು ಜಾರಿಗೆ ಬಂದಿವೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಂಜುನಾಥ ಜಿ.ಎ ಅವರು ತಿಳಿಸಿದರು.

ಇಂದು ಕೋಲಾರ ತಾಲ್ಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೋಲಾರ ಇವರ ಸಂಯುಕ್ತಾಶ್ರಯದಲ್ಲಿ ''ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣೆ ಕಾಯ್ದೆ ಅನುಷ್ಠಾನದಲ್ಲಿ ಭಾಗೀದಾರ ಇಲಾಖೆಗಳ ಪಾತ್ರ'' ಕುರಿತಂತೆ ಎರಡು ದಿನಗಳ ಕಾರ್ಯಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

2005 ರಲ್ಲಿ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ ಜಾರಿಗೆ ಬಂದಿದ್ದು, ಅದರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಸಂರಕ್ಷಣಾಧಿಕಾರಿಗಳ ಹೆಚ್ಚಿನ ಪಾತ್ರ ಇರುತ್ತದೆ. ಈ ಅಧಿಕಾರಿಗಳಿಗೆ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆಯನ್ನು ಅನುಷ್ಠಾನಗೊಳಿಸಲು ಪ್ರತಿ ವರ್ಷ ತರಬೇತಿಯನ್ನು ನೀಡಲಾಗುತ್ತದೆ. ತಮ್ಮ ವ್ಯಾಪ್ತಿಯಲ್ಲಿ ಕಾಯ್ದೆಯನ್ನು ಸರಿಯಾದ ರೀತಿಯಲ್ಲಿ ಅರಿವು ಮೂಡಿಸಿ ಅನುಷ್ಠಾನಗೊಳಿಸುವ ಪ್ರಯತ್ನ ಮಾಡಬೇಕು ಎಂದು ಅವರು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನೀಲ ಎಸ್. ಹೊಸಮನಿ ಅವರು ಮಾತನಾಡಿ ಮಹಿಳೆಯರ ರಕ್ಷಣೆಗಾಗಿ ಕೌಟುಂಬಿಕ ದೌರ್ಜನ್ಯ ತಡೆ ಕಾಯ್ದೆ ಜಾರಿಗೆ ಬಂದಿದ್ದು, ಅದರಲ್ಲಿ ಹಲವಾರು ಇಲಾಖೆಗಳ ಅಧಿಕಾರಿಗಳ ಪಾತ್ರ ಇರುತ್ತದೆ. ತಮ್ಮ ತಮ್ಮ ವ್ಯಾಪ್ತಿಯಲ್ಲಿ ಸದರಿ ಕಾಯ್ದೆ ಅನುಷ್ಠಾನಗೊಳಿಸುವುದು ಅವಶ್ಯಕವಾಗಿರುತ್ತದೆ. ಇತ್ತೀಚೆಗೆ ಕೌಟುಂಬಿಕ ಪ್ರಕರಣಗಳು ಹೆಚ್ಚಿಗೆ ಆಗುತ್ತಿದ್ದು, ಅದನ್ನು ಪ್ರಾಥಮಿಕ ಹಂತದಲ್ಲಿಯೆ ಸಂಧಾನದ ಮೂಲಕ ಬಗೆಹರಿಸಬೇಕು ಎಂದು ತಿಳಿಸಿದರು. 1968 ರಲ್ಲಿ ವರದಕ್ಷಿಣೆ ನಿಷೇಧ ಕಾಯ್ದೆ ಜಾರಿಗೆ ಬಂದಿದ್ದರು ಸಹ ಇನ್ನೂ ನಾವು ಮಹಿಳೆಯರ ಮೇಲೆ ಆಗುವ ದೌರ್ಜನ್ಯಗಳನ್ನು ತಡೆಗಟ್ಟಲು ಆಗುತ್ತಿಲ್ಲ. ಆ ನಿಟ್ಟಿನಲ್ಲಿ ಎಲ್ಲರು ತಮ್ಮ ವ್ಯಾಪ್ತಿಯಲ್ಲಿ ಈ ಕಾಯ್ದೆ ಬಗ್ಗೆ ಅರಿವನ್ನು ಮೂಡಿಸಬೇಕು ಎಂದು ತಿಳಿಸಿದರು.

# ರಾಷ್ಟ್ರೀಯ ಮಟ್ಟಕ್ಕೆ ಆಯ್ಕೆ




**ಮೈಸೂರು:** ನಗರದ ಬೋಗಾದಿ ಮುಖ್ಯರಸ್ತೆಯಲ್ಲಿರುವ ಗಂಗೋತ್ರಿ ಪಬ್ಲಿಕ್ ಶಾಲೆ ಮತ್ತು ಪಿಯು ಕಾಲೇಜಿನ ವಿದ್ಯಾರ್ಥಿಗಳು ರಾಷ್ಟ್ರೀಯ ಮಟ್ಟದ ಟಾರ್ಗೆಟ್ಬಾಲ್ ಕ್ರೀಡೆಗೆ ಆಯ್ಕೆಯಾಗಿದ್ದು, ಜ13ರಿಂದ 16ರವರೆಗೆ ಹೈದರಾಬಾದ್‌ನ ತೆಲಂಗಾಣ ರಾಜ್ಯದಲ್ಲಿ ನಡೆಯುತ್ತಿರುವ ರಾಷ್ಟ್ರೀಯ ಕ್ರೀಡಾಕೂಟಕ್ಕೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಅಭಿನಂದಿಸಲಾಯಿತು. ಆಡಳಿತಾಧಿಕಾರಿ ಕಾಂತಿ ನಾಯಕ್, ಪ್ರಾಂಶುಪಾಲ ಸುನಿಲ್‌ಕುಮಾರ್ ಎಂ.ಎಸ್., ಮುಖ್ಯ ಶಿಕ್ಷಕ ಮಹಮದ್ ಫಾರೂಕ್ ಮತ್ತು ದೈಹಿಕ ಶಿಕ್ಷಣ ಶಿಕ್ಷಕರಾದ ಕೀರ್ತಿಕುಮಾರ್ ಎಂ. ಕ್ರೀಡಾಪಟುಗಳನ್ನು ಅಭಿನಂದಿಸಿದರು. ಕ್ರೀಡಾಪಟುಗಳು ಎಡದಿಂದ ಬಲಕ್ಕೆ ವಿಕಾಸ್ ಬಿ.ಎಂ., ಆದಿತ್ಯ ನಾಯಕ್, ಮನೋಜ್ ಎಂ., ವಿವೇಕ್ ಎಂ.ವಿ., ಅನಂತ ಎಂ.ಎಂ. ಮತ್ತು ರೋಹಿತ್ ಎಂ.ಪಿ.

# ಜಿಲ್ಲೆಯಲ್ಲಿ ಪಿಎಂ ವಿಶ್ವಕರ್ಮ ಯೋಜನೆಯ ನೋಂದಣಿ ಚುರುಕುಗೊಳಿಸಿ: ಕುಮಾರ

**ಮಂಡ್ಯ:** ಪಿ ಎಂ ವಿಶ್ವಕರ್ಮ ಯೋಜನೆ 18 ವಿಧದ ಸಾಂಪ್ರದಾಯಕ ಕುಶಲಕರ್ಮಿಗಳಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಉಪಯುಕ್ತವಾಗಿದ್ದು, ಅರ್ಹ ಫಲಾನುಭವಿಗಳನ್ನು ಗುರುತಿಸಿ ನೋಂದಣಿ ಚುರುಕುಗೊಳಿಸಿ ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು. ಅವರು ಇಂದು ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಪಿ ಎಂ ವಿಶ್ವಕರ್ಮ ಯೋಜನೆ ಅನುಷ್ಟಾನ ಕುರಿತು ಅಧಿಕಾರಿಗಳ ಸಭೆ ನಡೆಸಿ ಮಾತನಾಡಿದರು. ಮರಗೆಲಸಗಾರರು, ಗಾರೆ ಕೆಲಸಗಾರರು, ವಿಗ್ರಹ ತಯಾರಕರು/ಕಲ್ಲು ಹೊಡೆಯುವವರು, ಟೈಲರ್, ಅಕ್ಕಸಾಲಿಗರು, ಕ್ಷೌರಿಕರು, ಅಗಸರು(ದೋಬಿ), ಬುಟ್ಟಿ/ ಚಾಪೆ/ಕಸ ಪೊರಕೆ ತಯಾರಕರು, ಕಾಯರ್ ನೇಕಾರರು, ಕಮ್ಮಾರರು, ಕುಂಬಾರರು, ಹೂವಿನ ಹಾರ ತಯಾರಕರು, ಮೀನು ಬಲೆ ತಯಾರಕರು, ಧೋಣಿ ತಯಾರಕರು, ಚರ್ಮಕಾರರು, ಆಯುಧ ತಯಾರಕರು, ಕಬ್ಬಿಣದ ಉಪಕರಣಗಾರರು, ಆಟಿಕೆ ತಯಾರಕರು, ಬೀಗ ತಯಾರಕರನ್ನು ಒಳಗೊಂಡಂತೆ ವಿವಿಧ ರೀತಿಯ ಒಟ್ಟು 18 ಸಾಂಪ್ರದಾಯಿಕ ಕುಶಲಕರ್ಮಿಗಳಿಗೆ ಪಿ ಎಂ ವಿಶ್ವಕರ್ಮ ಯೋಜನೆಯಡಿ ನೋಂದಣಿ ಮಾಡಿಕೊಳ್ಳಲು ಅವಕಾಶ ನೀಡಲಾಗಿದೆ ಎಂದರು. ಪಿ ಎಂ ವಿಶ್ವಕರ್ಮ ಯೋಜನೆಯಡಿ ನೋಂದಣಿಯಾದ ನಂತರ ಡಿಜಿಟಲ್ ಐಡಿ, ಪಿ ಎಂ ವಿಶ್ವಕರ್ಮ ಪ್ರಮಾಣ ಪತ್ರ ಮತ್ತು ಐಡಿ ಕಾರ್ಡ್ ನೀಡಲಾಗುವುದು. ಆಸಕ್ತರಿಗೆ 500 ರೂ ಸಂಭಾವನೆಯೊಂದಿಗೆ 5 ದಿನದ ಕೌಶಲ್ಯ ತರಬೇತಿ ನೀಡಿ, ರೂ 15,000 ವರೆಗಿನ ಟೂಲ್ ಕಿಟ್ ನೀಡಲಾಗುವುದು ಎಂದರು. ತರಬೇತಿಯ ನಂತರ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕ್ ನಿಂದ ಶೇ.5 ರ ಬಡ್ಡಿ ದರದಲ್ಲಿ 2 ಹಂತಗಳಲ್ಲಿ ಸಾಲವನ್ನು ನೀಡಲಾಗುವುದು. ಮೊದಲ ಹಂತ ಗರಿಷ್ಟ ರೂ 1 ಲಕ್ಷ, 18 ತಿಂಗಳ ಮರುಪಾವತಿ ಹಾಗೂ ಎರಡನೇ ಹಂತದಲ್ಲಿ ಗರಿಷ್ಟ ರೂ 2 ಲಕ್ಷ , 30 ತಿಂಗಳ ಮರುಪಾವತಿ ಷರತ್ತಿನೊಂದಿಗೆ ನೀಡಲಾಗುವುದು ಎಂದರು. ಜಿಲ್ಲೆಯಲ್ಲಿ ಇದುವರೆಗೂ ಪಿ ಎಂ ವಿಶ್ವಕರ್ಮ ಯೋಜನೆಗೆ ಒಟ್ಟು 44,000 ನೋಂದಣಿಯಾಗಿದ್ದು, ಇನ್ನೂ ಹೆಚ್ಚಿನ ಕುಶಲರ್ಮಿಗಳ ನೋಂದಣಿಯಾಗಬೇಕು. ಇದಕ್ಕಾಗಿ ವಿವಿಧ ಕುಶಲರ್ಮಿಗಳ ಸಂಘಟನೆಗಳ ಸಹಯೋಗದೊಂದಿಗೆ ಕಾರ್ಯಾಗಾರ ನಡೆಸಿ ಎಂದರು. ಈ -ಶ್ರಮ್ ಪೋರ್ಟಲ್ ನಲ್ಲಿ ಅಸಂಘಟಿತ ಕಾರ್ಮಿಕರ ಮಾಹಿತಿ ಲಭ್ಯವಿದ್ದು ಕಾರ್ಮಿಕ ಇಲಾಖೆ ಸಹಕಾರದೊಂದಿಗೆ ಈ ಯೋಜನೆಯಡಿ ಬರುವ ಸಾಂಪ್ರದಾಯಿಕ ಕುಶಲಕರ್ಮಿಗಳನ್ನು ಗುರುತಿಸಿ ನೋಂದಣಿ ಮಾಡಿ ಎಂದರು. ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, ಜಂಟಿ ನಿರ್ದೇಶಕರ ಕಛೇರಿ ದೂ. ಸಂ. 08232-200964, 08232-221358 ಸಂಪರ್ಕಿಸಬಹುದು ಎಂದರು.

# ಶಿಲ್ಪಕಲೆಯ ಜೊತೆಗೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿ



**ಚಿಕ್ಕಬಳ್ಳಾಪುರ:** ಜನವರಿ-10: ಶಿಲ್ಪಕಲೆಯ ಜೊತೆಗೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಿದರೆ ಸಮಾಜದ ಮುಖ್ಯವಾಹಿನಿಗೆ ತಲುಪಲು ಸಾಧ್ಯ. ಕರ್ನಾಟಕದ ಇತಿಹಾಸದಲ್ಲಿ ಅಮರಶಿಲ್ಪಿ ಜಕಣಾಚಾರಿಯವರ ಹೆಸರು ಶಾಶ್ವತವಾಗಿ ಉಳಿದಿರುವುದು ನಮ್ಮೆಲ್ಲರ ಅದೃಷ್ಟ ಎಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅವರು ತಿಳಿಸಿದರು.

ಬುಧವಾರ ನಗರದ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿಕ್ಕಬಳ್ಳಾಪುರ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ''ವಿಶ್ವ ಕರ್ಮ ಅಮರಶಿಲ್ಪಿ ಜಕಣಾಚಾರಿಯವರ ಸಂಸ್ಮರಣಾ ದಿನಾಚರಣೆ'' ಕಾರ್ಯಕ್ರಮವನ್ನು ಉದ್ಘಾಟಿಸಿ, ಅಮರಶಿಲ್ಪಿ ಜಕಣಾಚಾರಿಯವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಕರ್ನಾಟಕ ಇತಿಹಾಸದಲ್ಲಿ ಪ್ರಸಿದ್ಧವಾಗಿರುವ ಹಲವಾರು ದೇವಾಲಯಗಳನ್ನು ನಿರ್ಮಿಸುವ ಮೂಲಕ ದಂತಕಥೆಯಾದ ಅಮರಶಿಲ್ಪಿ ಜಕಣಾಚಾರಿಯವರು ಕಲ್ಯಾಣಿ ಚಾಲುಕ್ಯನ ಹಾಗೂ ಹೊಯ್ಸಳರ ಶೈಲಿಯ ದೇವಾಲಯಗಳನ್ನು ಬೇಲೂರು ಹಾಗೂ ಹಳೇಬೀಡಿನಲ್ಲಿ ನಿರ್ಮಿಸಿದ್ದಾರೆ. ನಾಡಿನ ಐತಿಹಾಸಿಕ ವಾಸ್ತುಶಿಲ್ಪ ಪರಂಪರೆಗೆ ಶಿಲ್ಪಿಗಳ ಕೊಡುಗೆ ಅಪಾರವಾದುದು. ಅಂತಹ ಅಪರೂಪದ ಕೊಡುಗೆಯನ್ನು ತನ್ನ ಕಲಾ ಕೌಶಲ್ಯದಿಂದ ನಾಡಿಗೆ ನೀಡಿ ಅಜರಾಮರನಾದವನು ಅಮರಶಿಲ್ಪಿ ಜಕಣಾಚಾರಿ. ಕರ್ನಾಟಕ ಸರ್ಕಾರವು ಪ್ರತಿವರ್ಷ ಶಿಲ್ಪಕಲೆಗೆ ಅತಿ ಹೆಚ್ಚಿನ ಕೊಡುಗೆ ನೀಡುವ ಕಲೆಗಾರನಿಗೆ ಅಮರಶಿಲ್ಪಿ ಜಕಣಾಚಾರಿ ಪ್ರಶಸ್ತಿ ನೀಡಿ ಗೌರವಿಸುತ್ತದೆ ಎಂದು ತಿಳಿಸಿದರು.

ಗ್ರಾಮಗಳಲ್ಲಿ ಸುಂದರವಾದ ದೇವಾಲಯಗಳು, ಕಟ್ಟಡಗಳನ್ನು ವೈಚಾರಿಕತೆ ಮತ್ತು ಧರ್ಮದ ಹಿನ್ನೆಲೆಯಲ್ಲಿ ನಿರ್ಮಾಣಮಾಡಿದ್ದು ವಿಶ್ವಕರ್ಮ ಸಮುದಾಯದವರು. ಸರ್ಕಾರವು ವಿಶ್ವಕರ್ಮದ ಅಡಿಯಲ್ಲಿ ಬರುವ ಎಲ್ಲ ಕಾರ್ಯಕ್ರಮಗಳನ್ನು ಈ ಸಂಘ ಸಂಸ್ಥೆಗಳಡಿಯಲ್ಲಿ ಯೋಜನೆಗಳನ್ನು ರೂಪಿಸಲಾಗಿದೆ. ಈ ಸಮುದಾಯದವರು ಸದುಪಯೋಗಪಡಿಸಿಕೊಳ್ಳಬೇಕು. ಈ ಸಮುದಾಯದ ಕಲಾಶಾಲಾ ಕಟ್ಟಡ ನಿರ್ಮಾಣ ಮಾಡಲು ಜಮೀನು ಮಂಜೂರಾತಿಯ ಕುರಿತು ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ತಿಳಿಸಿದರು.

ವಿಶ್ವಕರ್ಮ ಉತ್ಸವ ಸಮಿತಿಯ ಅಧ್ಯಕ್ಷ ನವೀನ್ ಕುಮಾರ್ ಅವರು ಮಾತನಾಡಿ, ಅಮರಶಿಲ್ಪಿ ಜಕಣಾಚಾರಿಯವರು ಮತ್ತು ಹಲವಾರು ಶಿಲ್ಪಿಗಳು ನಿರ್ಮಾಣ ಮಾಡಿರುವ ಹಳೆಬೀಡು ಮತ್ತು ಬೇಲೂರು ದೇವಾಲಯಗಳನ್ನು ಕೆತ್ತನೆಯು ಅದ್ಭುತವಾಗಿದೆ. ಅಯೋಧ್ಯೆಯಲ್ಲಿ ನಿರ್ಮಿಸಲಾಗಿರುವ ರಾಮಮಂದಿರದ ಶ್ರೀರಾಮನ ಮೂರ್ತಿಯನ್ನು ಮೈಸೂರಿನ ಅರುಣ್ ಯೋಗಿರಾಜ್ ರವರು ನೀಡಿರುವುದು ಗರ್ವದ ಸಂಗತಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಭಾರತೀಯ ಜೀವವಿಮಾ ನಿಗಮದ ಅಭಿವೃದ್ಧಿ ಅಧಿಕಾರಿ ಎಸ್.ಎನ್. ಅಮೃತ್ ಕುಮಾರ್ ರವರು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿಯವರನ್ನು ಕುರಿತು ಉಪನ್ಯಾಸ ನೀಡಿದರು. ಇದೇ ವೇಳೆ ಸಾಧನೆ ಮಾಡಿದ ಈ ಸಮುದಾಯದ ಸಾಧಕರಿಗೆ ಸನ್ಮಾನಿಸಲಾಯಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಎನ್.ಮನಿಷ್, ನಗರಸಭೆ ಸದಸ್ಯ ಮಂಜುನಾಥ ಚಾರಿ, ಸುಬ್ರಮಣ್ಯಚಾರಿ, ಯತೀಶ್, ವಿಶ್ವಕರ್ಮ ಕ್ಷೇಮಾಭಿವೃದ್ಧಿ ಸಂಘದ ಗೌರವಾಧ್ಯಕ್ಷ ನಂಜುಂಡಾಚಾರಿ, ಮಹಿಳಾ ಜಿಲ್ಲಾಧ್ಯಕ್ಷೆ ಸುಬ್ಬಲಕ್ಷಮ್ಮ, ದೇವಾಲಯ ಕಟ್ಟಡ ಕಾರ್ಮಿಕ ಶಿಲ್ಪಕಲಾ ಕ್ಷೇಮಾಭಿವೃದ್ಧಿ ಸಂಘದ ಜಿಲ್ಲಾಧ್ಯಕ್ಷ ನಾಗರಾಜಚಾರಿ, ಕಾರ್ಯದರ್ಶಿ ಪಿ.ಎನ್.ಮಂಜುನಾಥ್, ಗೌರವಾಧ್ಯಕ್ಷ ಶಂಕರಚಾರಿ ಹಾಗೂ ಸಮುದಾಯದ ಮುಖಂಡರಾದ ಜಗದೀಶ್ ಆಚಾರಿ, ಶ್ರೀಧರಾಚಾರಿ, ಶಿವಶಂಕರಚಾರಿ, ಸುರೇಶ್ ಆಚಾರಿ, ಬ್ರಹ್ಮಾಚಾರಿ, ಎಂಜರಾಚಾರಿ, ರಾಮಕೃಷ್ಣಾಚಾರಿ, ಮಾದ್ರನ್ ಶಿವು ಹಾಗೂ ಸಂಘದ ಎಲ್ಲ ಪಾದಾಧಿಕಾರಿಗಳು ಉಪಸ್ಥಿತರಿದ್ದರು.

# ಪತ್ರಿಕಾ ವಿತರಕರಿಗೆ ಇ-ಶ್ರಮ ಯೋಜನೆ ಉಪಯುಕ್ತವಾಗಿದೆ

**ಪಿರಿಯಾಪಟ್ಟಣ:** ಅಸಂಘಟಿತ ಕಾರ್ಮಿಕ ವಲಯದಲ್ಲಿರುವ ಪತ್ರಿಕಾ ವಿತರಕರಿಗೆ ಇ-ಶ್ರಮ ಯೋಜನೆ ಉಪಯುಕ್ತವಾಗಿದೆ ಎಂದು ಕಾರ್ಮಿಕ ನಿರೀಕ್ಷಕ ಎನ್.ಮಂಜುನಾಥ್ ತಿಳಿಸಿದರು.

ಪಟ್ಟಣದ ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕಾರ್ಮಿಕ ಇಲಾಖೆ, ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಮತ್ತು ಕನ್ನಡ ದಿನಪತ್ರಿಕೆ ಸಹಯೋಗದಲ್ಲಿ ಆಯೋಜಿಸಿದ್ದ ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ ಯಡಿ ಇ-ಶ್ರಮ ಕಾರ್ಡ್ ನೋಂದಣಿ ಅಭಿಯಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಅಸಂಘಟಿತ ವಲಯದಲ್ಲಿರುವ ಪತ್ರಿಕಾ ವಿತರಕರು ಪತ್ರಿಕೆ ವಿತರಿಸಲು ಬೈಸಿಕಲ್ ಮತ್ತು ದ್ವಿಚಕ್ರ ವಾಹನ ಬಳಸುತ್ತಿದ್ದಾರೆ. ಮುಂಜಾನೆ ಮತ್ತು ಮುಸ್ಸಂಜೆ ವೇಳೆಯಲ್ಲಿ ಅಪಘಾತಗಳಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಕಲ್ಪಿಸುವ ಮೂಲಕ ಸಾಮಾಜಿಕ ಭದ್ರತೆಯನ್ನು ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ ಎಂದರು. 18 ರಿಂದ 59 ವರ್ಷದೊಳಗಿನ ಇಎಸ್‌ಐ, ಇಪಿಎಫ್ ಸೌಲಭ್ಯ ಹೊಂದಿರದ ಮತ್ತು ಆದಾಯ ತೆರಿಗೆ ಪಾವತಿದಾರರಾಗಿರದ ಎಲ್ಲರೂ ಯೋಜನೆಯನ್ನು ಪಡೆಯಲು ಅರ್ಹರಾಗಿದ್ದಾರೆ ಎಂದು ತಿಳಿಸಿದರು. ಈ ಯೋಜನೆಗೆ ಒಳಪಟ್ಟಿರುವ ಕಾರ್ಮಿಕರು ಅಪಘಾತದಲ್ಲಿ ಮೃತಪಟ್ಟರೆ ಅವರ ವಾರಸುದಾರರಿಗೆ 2 ಲಕ್ಷ ರೂ ಪರಿಹಾರ, ಶಾಶ್ವತ ದುರ್ಬಲತೆ ಹೊಂದಿದರೆ 2 ಲಕ್ಷ ರೂ. ಹಾಗೂ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚದ ಮರುಪಾವತಿಯಾಗಿ 1 ಲಕ್ಷ ರೂ.ಗಳವರೆಗೆ ನೀಡಲು ಅವಕಾಶವಿದೆ ಎಂದು ಮಾಹಿತಿ ನೀಡಿದರು. ಇ-ಶ್ರಮ ಪೋರ್ಟಲ್ ಮೂಲಕವೂ ಸ್ವಯಂ ಆಗಿ ಈ ಯೋಜನೆಗೆ ನೋಂದಾಯಿಸಿ ಕೊಳ್ಳಬಹುದಾಗಿದೆ ಎಂದರು.

ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ರವಿಚಂದ್ರ ಮಾತನಾಡಿ ಮಳೆ, ಬಿಸಿಲು, ಚಳಿ ಎನ್ನದೆ ಪತ್ರಿಕೆಗಳನ್ನು ಮನೆಮನೆಗೆ ತಲುಪಿಸುವ ಪತ್ರಿಕಾ ವಿತರಕರಿಗೆ, ಪತ್ರಿಕೆ ಹಂಚುವ ಹುಡುಗರಿಗೆ ನೈತಿಕಸ್ಥೈರ್ಯ ತುಂಬುವಲ್ಲಿ ವಿಜಯವಾಣಿ ಪತ್ರಿಕೆ ಮತ್ತು ಸರ್ಕಾರದ ಕಾರ್ಮಿಕ ಇಲಾಖೆಯು ಕ್ರಮ ಕೈಗೊಂಡಿರುವುದು ಶ್ಲಾಘನೀಯ ಎಂದರು. ಈ ಹಿಂದೆಯೂ ರಾಜ್ಯಾದ್ಯಂತ ಪತ್ರಿಕೆ ವಿತರಿಸುವ ಹುಡುಗರ ಸಮೀಕ್ಷೆ ನಡೆಸಿ ಪತ್ರಿಕೆ ಹಂಚುವವರಿಗೆ ಸೇವಾ ಭದ್ರತೆ ನೀಡುವಂತೆ ಸರ್ಕಾರಕ್ಕೆ ಒತ್ತಾಯಿಸಲಾಗಿತ್ತು ಎಂದರು. ಕಾರ್ಯಕ್ರಮದಲ್ಲಿ 20ಕ್ಕೂ ಹೆಚ್ಚು ಪತ್ರಿಕಾ ವಿತರಕರಿಗೆ ಇ-ಶ್ರಮ ಕಾರ್ಡ್ ವಿತರಿಸಲಾಯಿತು. ಈ ವೇಳೆ ವಿಜಯವಾಣಿ ತಾಲೂಕು ವರದಿಗಾರ ಸಿ.ಎನ್.ವಿಜಯ್, ತಾಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಎಸ್.ಸತೀಶ್ ಆರಾಧ್ಯ, ಕಾರ್ಯದರ್ಶಿ ಪಿ.ಡಿ.ಪ್ರಸನ್ನ, ಸಹ ಕಾರ್ಯದರ್ಶಿ ಅಶೋಕ್ ಇದ್ದರು.

# ಡೇರಿ ಸಿಇಓಗಳ ಕಾರ್ಯ ದಕ್ಷತೆಯಿಂದ ಸಹಕಾರ ಸಂಘಗಳ ಪ್ರಗತಿ

**ಚಾಮರಾಜನಗರ:** ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರುಗಳು ಜವಾಬ್ದಾರಿಯಿಂದ ಕಾರ್ಯ ದಕ್ಷತೆ, ಕೌಸಲ್ಯವನ್ನು ರೂಢಿಸಿಕೊಂಡು ಮುನ್ನಡೆಯಾದರೆ ಡೇರಿಗಳು ಹೆಚ್ಚಿನ ಅರ್ಥಿಕ ಪ್ರಗತಿಯನ್ನು ಹೊಂದಲು ಸಾಧ್ಯವಿದೆ ಎಂದು ಜಿಲ್ಲಾ ಸಹಕಾರ ಯೂನಿಯನ್ ಅಧ್ಯಕ್ಷ ಹಾಗೂ ಚಾಮುಲ್ ನಿರ್ದೇಶಕ ಎಚ್.ಎಸ್. ನಂಜುಂಡಪ್ರಸಾದ್ ತಿಳಿಸಿದರು.

ನಗರದ ಲ್ಯಾಂಪ್ಸ್ ಸೊಸೈಟಿ ಸಭಾಂಗಣದಲ್ಲಿ ಕರ್ನಾಟಕ ರಆಜ್ಯ ಸಹಕಾರ ಮಹಾಮಂಡಲ, ಜಿಲ್ಲಾ ಸಹಕಾರ ಯೂನಿಯನ್, ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ಹಾಗೂ ಸಹಕಾರ ಇಲಾಖೆಯ ಸಹಯೋಗದಲ್ಲಿ ಚಾ.ನಗರ ತಾಲೂಕಿನ ಹಾಲು ಉತ್ಪಾದಕರ ಸಹಕಾರ ಸಂಘಗಳ ಮುಖ್ಯ ಕಾರ್ಯನಿರ್ವಾಹಕರ ಕರ್ತವ್ಯ ಜವಾಬ್ದಾರಿ ಇತ್ತೀಚಿನ ಸಹಕಾರ ಕಾಯ್ದೆ ತಿದ್ದುಪಡಿ ಹಾಗು ಲೆಕ್ಕ ಪುಸ್ತಕ ದಾಖಲಾತಿ ನಿರ್ವಹಣೆ ಕುರಿತು ನಡೆದ ಜಿಲ್ಲಾ ಮಟ್ಟದ ಒಂದು ದಿನ ವಿಶೇಷ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಚಾಮುಲ್ ಸೇರಿದಂತೆ ಎಲ್ಲಾ ಒಕ್ಕುಟಗಳು ಇತ್ತೀಚಿನ ದಿನಗಳಲ್ಲಿ ಲಾಭಗಳಿಸುವುದಕ್ಕಿಂತ ನಷ್ಟದತ್ತ ಸಾಗುತ್ತಿವೆ. ಕಾರಣ, ಖಾಸಗಿ ಡೇರಿಗಳ ಪೊಪೈಟಿ ಮತ್ತು ಗುಣಮಟ್ಟದ ಹಾಲು ಪೂರೈಕೆಯಲ್ಲಿ ವ್ಯತ್ಯಯವಾಗುವುದು ಸೇರಿದಂತೆ ನಿರ್ವಹಣೆ ವೆಚ್ಚವೇ ಹೆಚ್ಚಾಗುತ್ತಿರುವುದರಿಂದ ಒಕ್ಕೂಟಗಳು ಲಾಭ ಗಳಿಸುವುದೇ ಕಷ್ಟವಾಗುತ್ತಿದೆ. ಚಾಮರಾಜನಗರ ಡೇರಿ ಪ್ರಸ್ತುತ 10 ಕೋಟಿ ನಷ್ಟದಲ್ಲಿದೆ. ಇನ್ನು ಮೂರು ತಿಂಗಳಲ್ಲಿ ಹಾಲಿ ಪುಡಿ ಹಾಗೂ ಇತರೇ ಉತ್ಪನ್ನಗಳನ್ನು ಮಾರಾಟ ಮಾಡಿ ನಷ್ಟವನ್ನು ಸರಿದೂಗಿಸುವ ಚಿಂತನೆ ನಮ್ಮದಾಗಿದೆ. ಹಾಲಿನ ಪೌಡರ್ ದರ ಇಳಿಕೆಯಾಗಿರುವುದು ಮತ್ತೊಂದು ಕಾರಣವಾಗಿದೆ. ಈ ನಿಟ್ಟಿನಲ್ಲಿ ಪ್ರತಿ ಗ್ರಾಮಗಳಲ್ಲಿರುವ ಡೇರಿಗಳ ಕಾರ್ಯನಿರ್ವಹಕರು ಆಡಳಿತ ಮಂಡಲಿಗೆ ಯಾರೇ ಬಂದರು ಅವರೊಂದಿಗೆ ಉತ್ತಮ ಬಾಂಧವ್ಯ ಮತ್ತು ಸಂಘದ ಹಿತದೃಷ್ಟಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯನಿರ್ವಹಿಸಬೇಕು. ಅವರಿಗೆ ಕಾಲ ಕಾಲಕ್ಕೆ ಲೆಕ್ಕ ಪತ್ರಗಳ ನಿರ್ವಹಣೆ ಮತ್ತು ಇತರೇ ಖರ್ಚುಗಳ ಬಗ್ಗೆ ಚರ್ಚಿಸುವುದು. ಗುಣಮಟ್ಟ ಹಾಲು ಶೇಖರಣೆ ನಿಮ್ಮ ಮೊದಲ ಅದ್ಯತೆಯಾಗಬೇಕು. ಆದಾಗ ಮಾತ್ರ ಡೇರಿ ಲಾಭ ಕಾಣಲು ಸಾಧ್ಯವಿದೆ. ನಿಮ್ಮೆಲ್ಲರ ಹಿತ ಕಾಯಲು ಜಿಲ್ಲಾ ಸಹಕಾರ ಯೂನಿಯನ್ , ಒಕ್ಕೂಟ ಸದಾ ಬದ್ದವಾಗಿದೆ ಎಂದರು.



ಡೇರಿ ಸಿಇಓಗಳ ಕರ್ತವ್ಯ, ಜವಾಬ್ದಾರಿ ಮತ್ತು ಲೆಕ್ಕ ಪತ್ರಗಳ ನಿರ್ವಹಣೆ, ಕಾಯ್ದೆ ತಿದ್ದುಪಡಿಗಳ ಕುರಿತು ವಿಶೇಷ ಕಾರ್ಯಾಗಾರ

ಚಾಮುಲ್ ನಿರ್ದೇಶಕ ಸದಾಶಿವಮೂರ್ತಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಸಹಕಾರ ಸಂಘಗಳ ಬಲವರ್ಧನೆ ಮತ್ತು ಉತ್ತಮ ಕಾರ್ಯನಿರ್ವಣೆಗೆ ಕಾರ್ಯಗಾರ ಸೂಕ್ತವಾಗಿದೆ. ಡೇರಿ ಸಿಇಓಗಳ ನಿವೃತ್ತಯಿಂದ ಸಾಕಷ್ಟು ಮಂದಿ ಯುವಕರು ಡೇರಿಗೆ ಬರುತ್ತಿದ್ದಾರೆ. ಅ ವರಿಗೆ ಇಂಥ ಶಿಬಿರಗಳು ವೃತ್ತಿ ನೈಪುಣ್ಯತೆಯನ್ನು ಹೆಚ್ಚಿಸುತ್ತದೆ. ಸಹಕಾರ ಇಲಾಖೆ ಮತ್ತು ಕಾಯ್ದೆಗೆ ಬಗ್ಗೆ ಸಾಕಷ್ಟು ತಿಳಿದುಕೊಂಡಿರುವವರು ಸಂಪನ್ಮೂಲ ವ್ಯಕ್ತಿಗಳಾಗಿ ಬಂದಿದ್ದಾರೆ. ಅವರ ಅನುಭವ ಮತ್ತು ಸಂಘದ ನಿರ್ವಹಣೆಗೆ ಬಗ್ಗೆ ತಿಳಿದು ಸಂಘವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗಬೇಕು ಎಂದರು.

ಸಹಕಾರ ಸಂಘಗಳ ಉಪ ನಿಬಂಧಕರಾದ ಜ್ಯೋತಿ ಅರಸು ಮಾತನಾಡಿ, ಸರ್ಕಾರ ಯಶಸ್ವಿ ವಿಮೆ ಯೋಜನೆ ನೋಂದಾಣಿಗೆ ಫೆ. 8 ರವರೆಗೆ ಕಾಲವಕಾಶ ನೀಡಿದ್ದು, ಕಳೆದ ಬಾರಿಯಿಂದ ಹೆಚ್ಚು ಮಂದಿಯನ್ನು ಯಶಸ್ವಿನಿ ವ್ಯಾಪ್ತಿಗೆ ತರುವ ಮೂಲಕ ಡೇರಿ ಸಿಇಓಗಳು ಶ್ರಮಿಸಬೇಕು ಎಂದರು. ಜಿಲ್ಲಾ ಸಹಕಾರ ಯೂನಿಯನ್ ಹಿರಿಯ ನಿರ್ದೇಶಕ ಎಂ. ಬಸವಣ್ಣ ಮಾತನಾಡಿ, ಸರ್ಕಾರ ಯಶಸ್ವಿನಿ ಯೋಜನೆ ಅನುಷ್ಟಾನ ಮಾಡಿ, ಬಳಿಕ ಅವರಿಗೆ ನೊಂದಾಣಿ ಕಾರ್ಡುಗಳು ಇಲಾಖೆಯಿಂದ ವಿತರಣೆಯಾಗುತ್ತಿಲ್ಲ. ಈ ವಿಳಂಬ ದೋರಣೆಯನ್ನು ಬಿಟ್ಟು ಯಶಸ್ವಿನಿ ನೊಂದಣಿಯಾದ ವಾರದಲ್ಲಿ ಕಾರ್ಡುಗಳು ಹಂಚಿಕೆಯಾಗಬೇಕು ಎಂದರು. ಕೆಎಂಎಫ್‌ನ ನಿವೃತ್ತ ಹಿರಿಯ ಉಪ ನಿರ್ದೇಶಕ ಆರ್.ರಾಜಣ್ಣ, ನಿವೃತ್ತ ಸಹಕಾರಿ ಅಭಿವೃದ್ಧಿ ಅಧಿಕಾರಿ ಎ.ಎನ್. ನಾಗಭೂಷಣ್ ಸಹಕಾರಿ ಸಂಘಗಳ ಜವಾಬ್ದಾರಿ ಲೆಕ್ಕ ಪತ್ರಗಳ ನಿರ್ವಹಣೆ ಕುರಿತು ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಹಕಾರ ಯೂನಿಯನ್ ನಿರ್ದೇಶಕರಾದ ಮಲೆಯೂರು ನಾಗರಾಜು, ಎಚ್.ಎಂ. ಮಹದೇವಪ್ರಭು, ಅಮಚವಾಡಿ ನಾಗಸುಂದರ, ದಾಕ್ಷಾಯಿಣಿ, ಎಆರ್ ದಯಾನಂದ, ಚಾಮುಲ್ ಉಪ ವ್ಯವಸ್ಥಾಪಕ ಡಾ. ಅಮರ್, ಯೂನಿಯನ್ ಸಿಇಓ ಯೋಗೇಂದ್ರನಾಯಕ್, ಮ್ಯಾನೇಜರ್ ಮಲ್ಲಿಕಾರ್ಜುನ್, ಮಲ್ಲೇಶ್, ಕೆಂಡಗಣ ಭಾಗವಹಿಸಿದ್ದರು.

# ಕಾರ್ಮಿಕರು ದುಡಿಮೆಗೆ ಒತ್ತು ನೀಡಿದಂತೆ ಆರೋಗ್ಯಕ್ಕೂ ನೀಡಿ



**ಹುಳಿಯಾರು:** ಆರೋಗ್ಯವೇ ಭಾಗ್ಯ ಎನ್ನುವ ನಾಣ್ಣುಡಿಯಿದೆ. ಆದ್ದರಿಂದ ಆರೋಗ್ಯಕ್ಕಿಂತ ಮೊದಲು ಯಾವುದೂ ಮುಖ್ಯವಲ್ಲ. ರೋಗ ಬಂದಾಗ ಔಷಧಿ ಮಾಡಿಕೊಳ್ಳುವುದಕ್ಕಿಂತ ರೋಗ ಬರದಂತೆ ನೋಡಿಕೊಳ್ಳುವುದು ಒಳ್ಳೆಯದು. ಆರೋಗ್ಯವನ್ನು ಕಾಪಾಡಿಕೊಳ್ಳುವುದೇ ಮೊದಲ ಹೆಜ್ಜೆಯಾಗಬೇಕು. ಈ ನಿಟ್ಟಿನಲ್ಲಿ ಕಾರ್ಮಿಕರು ದುಡಿಮೆಗೆ ಒತ್ತು ನೀಡಿದಂತೆ ಆರೋಗ್ಯ ರಕ್ಷಣೆಗೂ ನೀಡಬೇಕು ಎಂದು ಚಿಕ್ಕನಾಯಕನಹಳ್ಳಿ ಲೇಬರ್ ಇನ್ಸಪೆಕ್ಟರ್ ಸುಶೀಲಾ ಅವರು ಕಿವಿ ಮಾತು ಹೇಳಿದರು. ಹುಳಿಯಾರಿನ ಎಂಪಿಎಸ್ ಶಾಲಾ ಆವರಣದಲ್ಲಿ ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮೀಕರ ಕಲ್ಯಾಣ ಮಂಡಳಿಯಿಂದ ನೊಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಬುಧವಾರ ಏರ್ಪಡಿಸಿದ್ದ ಆರೋಗ್ಯ ತಪಾಸಣಾ ಶಿಬಿರದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಹಗಲಿರುಳು ದುಡಿಯುವ ಕಾರ್ಮಿಕರು ಆರೋಗ್ಯ ರಕ್ಷಣೆಯಲ್ಲಿ ನಿರ್ಲಕ್ಷ್ಯ ವಹಿಸುತ್ತಾರೆ. ಸಣ್ಣಪುಟ್ಟ ಕಾಯಿಲೆ ಬಂದಾಗ ಸುಮ್ಮನಿದ್ದು ಹೆಚ್ಚಿನ ಕಾಯಿಲೆ ಕಂಡುಬಂದಾಗ ಮಾತ್ರ ಚಿಕಿತ್ಸೆಗೆ ಮುಂದಾಗುತ್ತಾರೆ. ಇದರಿಂದ ಆರ್ಥಿಕವಾಗಿ ಸಾಕಷ್ಟು ಕಷ್ಟನಷ್ಟ ಅನುಭವಿಸುತ್ತಾರೆ. ಅದನ್ನು ಮನಗಂಡ ಸರ್ಕಾರ ವಾಸ ಮಾಡುವ ಊರು ಮತ್ತು ಕೆಲಸ ಮಾಡುವ ಸ್ಥಳಕ್ಕೆ ಹೋಗಿ ಕಾರ್ಮಿಕರ ಆರೋಗ್ಯ ತಪಾಸಣೆ ಮತ್ತು ತರಬೇತಿ ನೀಡುವ ಮುಖಾಂತರ ಜೀವ ರಕ್ಷಣೆ ಮಾಡುವಂತ ಮಹತ್ತರವಾದ ಯೋಜನೆಯು ಜಾರಿಗೆ ತಂದಿದೆ. ಇದನ್ನು ಎಲ್ಲರೂ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ಚಿಕ್ಕನಾಯಕನಹಳ್ಳಿ ತಾಲೂಕಿನಲ್ಲಿ ಈಗಾಗಲೇ ಎಲ್ಲಾ ಹೋಬಳಿ ಕೇಂದ್ರದಲ್ಲೂ ಆರೋಗ್ಯ ತಪಾಸಣಾ ಶಿಬಿರ ಮಾಡಲಾಗಿದ್ದು ಮುಂದಿನ ಹಂತದಲ್ಲಿ ಹೆಚ್ಚು ನೊಂದಾಯಿತ ಕಾರ್ಮಿಕರಿರುವ ಊರಿಗೇ ಆಂಬ್ಯುಲೆನ್ಸ್‌ನಲ್ಲಿ ತೆರಳಿ 19 ರೀತಿಯ ಆರೋಗ್ಯ ತಪಾಸಣೆ ಜತೆಗೆ ರೋಗಗಳ ಮುನ್ನೆಚ್ಚರಿಕೆ ಕ್ರಮ ಕುರಿತು ತಿಳುವಳಿಕೆ ನೀಡಲಾಗುವುದು ಎಂದರಲ್ಲದೆ ಬಡವರು, ಕಾರ್ಮಿಕರ ಏಳ್ಗೆಗಾಗಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತರುತ್ತಿವೆ. ಇದರಲ್ಲಿ ಬಡವರ ಮತ್ತು ಕೂಲಿ ಕಾರ್ಮಿಕರ ಆರೋಗ್ಯವನ್ನು ಕಾಪಾಡಲು ಆಯುಷ್ಮಾನ್ ಭಾರತ್ ಯೋಜನೆ ಜಾರಿ ತರುವ ಮುಖಾಂತರ ವರ್ಷದಲ್ಲಿ ಪ್ರತಿ ಕುಟುಂಬಕ್ಕೆ 5 ಲಕ್ಷ ರೂ. ಆರೋಗ್ಯ ವಿಮಾ ಸೌಲಭ್ಯ ಒಂದಾಗಿದೆ ಎಂದರು.

# ಸ್ವಾಮಿ ವಿವೇಕಾನಂದರ ಚಿಂತನೆಗಳು ಸಾರ್ವಕಾಲಿಕ : ಸುರೇಶ್ ಋಗ್ವೇದಿ

**ಚಾಮರಾಜನಗರ:** ಭಾರತದ ಶ್ರೇಷ್ಠ ಸಂಸ್ಕೃತಿ, ಪರಂಪರೆಯನ್ನು ಇಡೀ ವಿಶ್ವಕ್ಕೆ ಅನಾವರಣಗೊಳಿಸಿದ ಸ್ವಾಮಿ ವಿವೇಕಾನಂದರ ರಾಷ್ಟ್ರೀಯ ಪರಿಕಲ್ಪನೆಯ ಆದರ್ಶ ಚಿಂತನೆಗಳು ಸಾರ್ವಕಾಲಿಕವಾಗಿವೆ ಎಂದು ಉಪನ್ಯಾಸಕರು ಹಾಗೂ ರಾಷ್ಟ್ರೀಯ ಯುವ ಪ್ರಶಸ್ತಿ ಪುರಸ್ಕೃತರಾದ ಸುರೇಶ್ ಎನ್. ಋಗ್ವೇದಿ ಅವರು ತಿಳಿಸಿದರು.

ನಗರದ ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ಬಿ.ಎಡ್ ಕಾಲೇಜಿನಲ್ಲಿ ಭಾರತ ಸರ್ಕಾರದ ಯುವ ಕಾರ್ಯ ಹಾಗೂ ಕ್ರೀಡಾ ಸಚಿವಾಲಯ, ನೆಹರು ಯುವ ಕೇಂದ್ರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕ ಹಾಗೂ ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ ಸಂಯುಕ್ತಾಶ್ರಯದಲ್ಲಿ ಸ್ವಾಮಿ ವಿವೇಕಾನಂದರ 161ನೇ ಜನ್ಮ ದಿನಾಚರಣೆ ಹಾಗೂ ರಾಷ್ಟ್ರೀಯ ಯುವ ಸಪ್ತಾಹದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ?ರಾಷ್ಟ್ರೀಯ ಯುವ ದಿನ? ಸಮಾರಂಭದಲ್ಲಿ ವಿಶೇಷ ಉಪನ್ಯಾಸ ನೀಡಿ ಅವರು ಮಾತನಾಡಿದರು.

ರಾಷ್ಟ್ರದ ಯುವಜನತೆಗೆ ಮಾದರಿ ಶಕ್ತಿಯಾಗಿರುವ ಸ್ವಾಮಿ ವಿವೇಕಾನಂದರ ಜನ್ಮದಿನವನ್ನು ದೇಶದ್ಯಾಂತ ಆಚರಿಸಲಾಗುತ್ತಿದೆ. ಇಡೀ ಯುವಶಕ್ತಿ ಸಂಭ್ರಮಿಸುವ ದಿನ ಇದಾಗಿದೆ. ದೇಶದ ಅಭಿವೃದ್ಧಿಗಾಗಿ ಯುವಶಕ್ತಿಯ ಸೇವಾ ಮನೋಭಾವ, ಗುಣಶ್ರೇಷ್ಠತೆ, ತ್ಯಾಗ, ಏಕಾಗ್ರತೆ ಹೇಗಿರಬೇಕು ಎಂದು ತಮ್ಮ ಸಂದೇಶಗಳ ಮೂಲಕ ಸಾರಿದ ವಿವೇಕಾನಂದರು ಯುವಕರನ್ನು ಅಜ್ಞಾನದಿಂದ ಸುಜ್ಞಾನದೆಡೆಗೆ ನಡೆಸಿದರು. ಯುವಜನತೆಗೆ ರಾಷ್ಟ್ರೀಯ ಪರಿಕಲ್ಪನೆಯನ್ನು ಬಿತ್ತಿದವರಲ್ಲಿ ವಿವೇಕಾನಂದರು ಮೊದಲಿಗರಾಗಿದ್ದಾರೆ ಎಂದರು.

ದೇಶದಲ್ಲಿನ ಬಡತನ, ಜಾತೀಯತೆಯಿಂದ ಭಾರತೀಯರನ್ನು ಕೇವಲವಾಗಿ ನೋಡುತ್ತಿದ್ದ ವಿದೇಶಿಯರಿಗೆ ಚಿಕಾಗೋ ವಿಶ್ವಸಮ್ಮೇಳನದಲ್ಲಿ



ಸಹೋದರ, ಸಹೋದರಿಯರೇ ಎಂದು ಮಾನವತೆಯ ದಿವ್ಯಸಂದೇಶದ ಮೂಲಕ ಉಪನ್ಯಾಸ ಆರಂಭಿಸಿದ ವಿವೇಕಾನಂದರು ಇಡೀ ಜಗತ್ತು ಅಭಿಮಾನ, ಆತ್ಮವಿಶ್ವಾಸದಿಂದ ಭಾರತದತ್ತ ನೋಡುವಂತೆ ಮಾಡಿದರು. ಪ್ರಪಂಚದಲ್ಲಿ ಸಾಕಷ್ಟು ಸಂಸ್ಕೃತಿ, ನಾಗರಿಕತೆಗಳು ಬಂದು ಹೋಗಿವೆ. ಆದರೆ ಭಾರತೀಯ ಸಂಸ್ಕೃತಿ, ಪರಂಪರೆಯ ಜೀವಂತಿಕೆಗೆ ವಿವೇಕಾನಂದರ ಕೊಡುಗೆ ಅಪಾರವಾಗಿದೆ ಎಂದು ಸುರೇಶ್ ಋಗ್ವೇದಿ ಅವರು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶಿವಸ್ವಾಮಿ ಅವರು ಮಾತನಾಡಿ ಸ್ವಾಮಿ ವಿವೇಕಾನಂದರು ದೇಶದ ಆಧುನಿಕ ಚಿಂತಕ, ತತ್ವಜ್ಞಾನಿ, ದಾರ್ಶನಿಕರಾಗಿದ್ದಾರೆ. ಯುವಜನರಲ್ಲಿದ್ದ ಸಾಮಾಜಿಕ ಮೌಢ್ಯವನ್ನು ತೊಡೆಯಲು ಸತ್ಯಶೋಧನೆ ಮೂಲಕ ದೇಶದ ಪ್ರಗತಿ ಪೂರಕವಾಗಿ ಕೊಡುಗೆ ನೀಡಿದವರಲ್ಲಿ ವಿವೇಕಾನಂದರು ಪ್ರಮುಖರು. ಅವರ ಆದರ್ಶ ಚಿಂತನೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ಪ್ರಾಂಶುಪಾಲರಾದ ಡಾ. ಕೆ.ಸಿ. ಬಸವಣ್ಣ ಅವರು ಮಾತನಾಡಿ ಜಗತ್ತಿನ ಅತಿದೊಡ್ಡ ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರು ಅಪ್ರತಿಮ ದೇಶಭಕ್ತ, ಧಾರ್ಮಿಕ, ವೈಜ್ಞಾನಿಕ ಚಿಂತಕ, ಸಮಾಜ ಸುಧಾರಕರು ಹೌದು. ಇಡೀ ವಿಶ್ವಕ್ಕೆ ಭಾರತ ದರ್ಶನ ಮಾಡಿಸಿದ ವಿವೇಕಾನಂದರ ವಿಚಾರಧಾರೆಗಳು ಇಂದಿಗೂ ಪ್ರಸ್ತುತವಾಗಿದೆ. ಸ್ವಾಮಿ ವಿವೇಕಾನಂದರು ನಮ್ಮೆಲ್ಲರಿಗೂ ಮಾದರಿಯಾಗಿದ್ದಾರೆ ಎಂದರು.

ಜಿಲ್ಲಾ ಯುವ ಪ್ರಶಸ್ತಿ ಪುರಸ್ಕೃತರಾದ ಜಿ. ಬಂಗಾರು ಹಾಗೂ ಜಿಲ್ಲಾ ಏಡ್ಸ್ ನಿಯಂತ್ರಣ ಮತ್ತು ಪ್ರತಿಬಂಧಕ ಘಟಕದ ಮಹದೇವಪ್ರಸಾದ್ ಅವರುಗಳು ರಾಷ್ಟ್ರೀಯ ಯುವ ಸಪ್ತಾಹದ ಉದ್ದೇಶ ಹಾಗೂ ಸ್ವಾಮಿ ವಿವೇಕಾನಂದರ ಮೌಲ್ಯಯುತ ವಿಚಾರಗಳ ಕುರಿತು ಕಾರ್ಯಕ್ರಮದಲ್ಲಿ ಮಾತನಾಡಿದರು.

ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯ ಗ್ರಂಥಾಲಯದ ಶಿವಶಂಕರರಾಜೇ ಅರಸ್ ಅವರು ಏಡ್ಸ್ ನಿಯಂತ್ರಣದ ಬಗ್ಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಜೆ.ಎಸ್.ಎಸ್. ಶಿಕ್ಷಣ ಮಹಾವಿದ್ಯಾಲಯದ ಬಿ.ಎಡ್ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ನಗರ್ತ ಮಹಂತಿನ ಮಠ ಧರ್ಮ ಸಂಸ್ಥೆಗೆ ಚುನಾವಣಾ ಪ್ರಕ್ರಿಯೆ

**ವಿಜಯಪುರ:** ಪಟ್ಟಣದ ಗಾಂಧಿ ಚೌಕದಲ್ಲಿರುವ ಅಯೋಧ್ಯಾನಗರ ಶಿವಾಚಾರ್ಯ ನಗರ್ತ ಮಹಾಂತೀನ ಮಠ ಧರ್ಮ ಸಂಸ್ಥೆಯ ನಿರ್ದೇಶಕರುಗಳ ಚುನಾವಣೆ- 2024ರ ಪ್ರಕ್ರಿಯೆ ಆಕಾಂಕ್ಷಿಗಳಿಗೆ ನಾಮಪತ್ರಗಳನ್ನು ನೀಡುವ ಮೂಲಕ ಪ್ರಾರಂಭಿಸಲಾಯಿತು. ಸಹಾಯಕ ಚುನಾವಣಾ ಅಧಿಕಾರಿಯಾಗಿ ನೇಮಕವಾಗಿರುವ ವಿಜಯಪುರ ನಾಡಕಚೇರಿ ಕಂದಾಯ ಅಧಿಕಾರಿ ಸತ್ಯನಾರಾಯಣ ರವರು ಮಾತನಾಡುತ್ತಾ, ದೇವನಹಳ್ಳಿ ತಹಸಿಲ್ದಾರ್ ರವರ ನಿರ್ದೇಶನದ ಮೇರೆಗೆ ನಗರ್ತ ಮಹಂತಿನ ಮಠಕ್ಕೆ ಚುನಾವಣೆ ನಡೆಸಲಾಗುತ್ತಿದ್ದು, 2024-2029ರ ಅವಧಿಗೆ ಇಬ್ಬರು ಮಹಿಳೆಯರು ಮತ್ತು 9 ಪುರುಷ ನಿರ್ದೇಶಕರಗಳನ್ನು ಆಯ್ಕೆ ಮಾಡಬೇಕಾಗಿದ್ದು, ಇದಕ್ಕಾಗಿ ಸದರಿ ಧರ್ಮ ಸಂಸ್ಥೆಯಿಂದ ಈಗಾಗಲೇ ವಿಜಯಪುರ ಪುರಸಭೆ ವ್ಯಾಪ್ತಿಯಲ್ಲಿ ಕನಿಷ್ಠ ಐದು ವರ್ಷಗಳಿಂದ ವಾಸವಾಗಿರುವ ಶಿವಾಚಾರ ವೈಶ್ಯ ನಗರ್ತ ಜನಾಂಗದ ಒಂದು ಕುಟುಂಬಕ್ಕೆ ಒಬ್ಬರಂತೆ ಮತದಾರರ ಪಟ್ಟಿಯನ್ನು ತಯಾರು ಮಾಡಲಾಗಿದ್ದು, ಈಗಾಗಲೇ ಚುನಾವಣಾ ಅಧಿಸೂಚನೆ ಕರಡು ಮತದಾರರ ಪಟ್ಟಿ ಹಾಗೂ ಈಗಾಗಲೇ ಚುನಾವಣೆಯ ಅಧಿಸೂಚನ ಪ್ರಕಟಣೆ, ಕರಡು ಮತದಾರರ ಪಟ್ಟಿಯಲ್ಲಿನ ಹೆಸರುಗಳ ಆಕ್ಷೇಪಣೆ ಹಾಗೂ ಕ್ಲೈಮಗಳನ್ನು ನೀಡಲು ಅಂತಿಮ ದಿನಾಂಕ ಹಾಗೂ ಅಂತಿಮ ಮತದಾರರ ಪಟ್ಟಿ ಪ್ರಕಟಣೆ ಮುಗಿದಿದ್ದು, ಜನವರಿ 10ರ ನಿರ್ದೇಶಕರ ಸ್ಥಾನಕ್ಕೆ ನಾಮಪತ್ರಗಳನ್ನು ನೀಡಲಾಗುತ್ತಿದ್ದು, ಜನವರಿ 17ರ ಬುಧವಾರದಂದು ಅಂತಿಮ ದಿನವಾಗಿದ್ದು, ಬೆಳಗ್ಗೆ 11 ಗಂಟೆಯಿಂದ ಮೂರು ಗಂಟೆಯವರೆಗೂ ರಜಾ ದಿನಗಳನ್ನು ಹೊರತುಪಡಿಸಿ, ನಾಮಪತ್ರಗಳನ್ನು ಪಡೆಯಲು ಹಾಗೂ ಸಲ್ಲಿಸಲು ಅವಕಾಶವಿದೆ ಜನವರಿ 20ರ ಶನಿವಾರದಂದು ನಾಮಪತ್ರಗಳನ್ನು ಹಿಂತೆಗೆದುಕೊಳ್ಳಲು ಅಂತಿಮ ದಿನವಾಗಿದ್ದು, ಸ್ಪರ್ಧೆಯಲ್ಲಿ ಉಳಿದ ಅಭ್ಯರ್ಥಿಗಳ ಪಟ್ಟಿಯನ್ನು ಶನಿವಾರ 20ರಂದು ಪ್ರಕಟಿಸಲಾಗುತ್ತಿದ್ದು, ಮಧ್ಯಾಹ್ನ 3:00 ಗಂಟೆಗೆ ಚುನಾವಣೆ ಅವಶ್ಯವಿದ್ದಲ್ಲಿ ಜನವರಿ 29ರ ಸೋಮವಾರದಂದು ಬೆಳಗ್ಗೆ 9:00 ರಿಂದ ಸಂಜೆ ಐದರವರೆಗೂ ನಡೆಸಲಾಗಿದ್ದು, ಜನವರಿ 30ರ ಮಂಗಳವಾರದಂದು ಬೆಳಗ್ಗೆ 10 ರಿಂದ ಮತ ಎಣಿಕೆ ನಡೆಸಲಾಗುತ್ತದೆ ಎಂದು ತಿಳಿಸಿದರು.

# ಬ್ಯಾಂಕ್‌ಗಳು ವಿಳಂಬ ಮಾಡದೆ ಸಾಲ ನೀಡಲಿ



**ಹುಳಿಯಾರು:** ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಲ್ಲಿ ಒಂದಾದ ವಿಶ್ವಕರ್ಮ ಕೌಶಲ್ಯ ಅಭಿವೃದ್ಧಿ ಯೋಜನೆಗೆ ಸಂಬಂಧಪಟ್ಟಂತೆ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ನೂರಾರು ಅರ್ಜಿಗಳು ಬಂದಿದ್ದು ಸದ್ಯದಲ್ಲೇ ಬ್ಯಾಂಕಿಗೆ ಕಳುಹಿಸಲಾಗುವುದು, ಬ್ಯಾಂಕಿನವರು ವಿಳಂಬ ಮಾಡದೆ ಆದ್ಯತೆಯ ಮೇರೆಗೆ ಸಾಲ ನೀಡಿದಲ್ಲಿ ಜನರಿಗೆ ಅನುಕೂಲವಾಗುವುದು ಎಂದು ತೀರ್ಥಪುರದ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಮಂಜುನಾಥ ತಿಳಿಸಿದರು.

ಚಿಕ್ಕನಾಯಕನಹಳ್ಳಿಯ ಭಾರತೀಯ ಸ್ಟೇಟ್ ಬ್ಯಾಂಕ್ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ, ಚಿಕ್ಕನಾಯಕನಹಳ್ಳಿ ಇವರು ಜಂಟಿಯಾಗಿ ತೀರ್ಥಪುರದಲ್ಲಿ ಮಂಗಳವಾರ ಏರ್ಪಡಿಸಿದ್ದ ವಿಕಸಿತ ಭಾರತ ಸಂಕಲ್ಪ ಯಾತ್ರೆಯಲ್ಲಿ ಬ್ಯಾಂಕುಗಳಿಗೆ ಸಲಹೆ ನೀಡಿದರು.

ತೀರ್ಥಪುರದ ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರಾದ ಮಂಜುನಾಥ ಮಾತನಾಡುತ್ತಾ ಕೇಂದ್ರ ಸರ್ಕಾರದ ಇನ್ನೊಂದು ಮಹತ್ವಾಕಾಂಕ್ಷಿ ಯೋಜನೆಯಲ್ಲಿ ಒಂದಾದ ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲವನ್ನು ಪಾಣಿ ಇಲ್ಲದ ರೈತರು ಕೂಡ ಜಂಟಿ ಹೊಣೆಗಾರಿಕೆ ಸಂಘಗಳನ್ನು ರಚಿಸಿಕೊಂಡು ಅವರವರ ಜಮೀನಿಗೆ ತಕ್ಕಂತೆ ಸಾಲವನ್ನು ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್.ಎಂ.ಕುಮಾರಸ್ವಾಮಿ ಮಾತನಾಡುತ್ತಾ ಕೇಂದ್ರ ಸರ್ಕಾರದ ಈ ಎಲ್ಲಾ ಯೋಜನೆಗಳನ್ನು ದೇಶಾದ್ಯಂತ ವಿಕಸಿತ ಭಾರತ ಸಂಕಲ್ಪ ಯಾತ್ರೆಯ ಮುಖಾಂತರ ಹಳ್ಳಿಯ ಮೂಲೆ ಮೂಲೆಗೂ ತಲುಪಿಸಬೇಕೆಂಬುದೇ ಈ ಯಾತ್ರೆಯ ಮುಖ್ಯ ಉದ್ದೇಶವಾಗಿದೆ ಎಂದು ನುಡಿದರು. ಈ ಕಾರ್ಯಗಾರದಲ್ಲಿ ತಿಮ್ಮನಹಳ್ಳಿ ಭಾರತೀಯ ಸ್ಟೇಟ್ ಬ್ಯಾಂಕಿನ ಮೆನೇಜರ್ ಮಲ್ಲೇಶ್, ಗ್ರಾಮ ಪಂಚಾಯಿತಿಯ ಉಪಾಧ್ಯಕ್ಷರಾದ ಲತಾ ನರಸಿಂಹಯ್ಯ, ಸದಸ್ಯರಾದ ಮನು ಕುಮಾರ್, ಅನಂತರಾಜ್, ಸಂಜೀವಿನಿ ಒಕ್ಕೂಟದ ಸುಮಿತ, ತುಮಕೂರು ಉಮೇಶ್ ಮುಂತಾದವರು ಉಪಸ್ಥಿತರಿದ್ದರು.

## 19 ರಂದು ಜನತಾ ದರ್ಶನ

**ರಾಮನಗರ:** ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಮಾಗಡಿ ತಾಲ್ಲೂಕಿನ ಡಾ. ಶ್ರೀ ಶಿವಕುಮಾರ ಸ್ವಾಮಿಗಳ ಸಭಾಂಗಣದಲ್ಲಿ ಇದೇ ಜ. 19ರ ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಜನತಾ ದರ್ಶನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಧಿ ವಿಸ್ತರಣೆ

**ರಾಮನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 2023-24ನೇ ಶೈಕ್ಷಣಿಕ ಸಾಲಿನ ಜುಲೈ ಆವೃತ್ತಿಯಲ್ಲಿ ಪ್ರವೇಶಾತಿ ಪಡೆದ ವಾರ್ಷಿಕ ಮತ್ತು ಸಿಬಿಸಿಎಸ್ ಪದ್ಧತಿಯಲ್ಲಿ ಬಿ.ಎ., ಬಿ.ಕಾಂ., ಬಿ.ಲಿಬ್.ಐ.ಎಸ್ಸಿ., ಬಿ.ಎಸ್.ಸಿ., ಬಿ.ಸಿ.ಎ., ಬಿ.ಬಿ.ಎ., ಬಿ.ಎಸ್.ಡಬ್ಲ್ಯು., ಎಂ.ಎ., ಎಂ.ಕಾಂ., ಎಂ.ಬಿ.ಎ., ಎಂ.ಎಸ್. ಡಬ್ಲ್ಯು., ಎಂ.ಸಿ.ಎ., ಎಂ.ಲಿಬ್.ಐ.ಎಸ್.ಸಿ., ಎಂ.ಎಸ್ಸಿ., ಪಿ.ಜಿ. ಡಿಪ್ಲೊಮಾ, ಡಿಪ್ಲೊಮಾ ಮತ್ತು ಸರ್ಟಿಫಿಕೇಟ್ ಕೋರ್ಸ್‌ಗಳಿಗೆ ಪ್ರವೇಶಾತಿ ಪಡೆದಿರುವ/ನವೀಕರಣಗೊಂಡಿರುವ ವಿದ್ಯಾರ್ಥಿಗಳು ಆಂತರಿಕ ನಿಬಂಧಗಳ ಪ್ರಶ್ನೆಗಳನ್ನು ವಿದ್ಯಾರ್ಥಿಗಳು ಕೆಎಸ್ ಒಯು ಅಕಾಡೆಮಿ ಪ್ಲಾಟ್‌ಫಾರಂ ಆಪ್‌ನಲ್ಲಿ ಡೌನ್‌ಲೋಡ್ ಮಾಡಿಕೊಂಡು ಉತ್ತರಗಳನ್ನು ಸಿದ್ಧಪಡಿಸಿ ಡಿ. 30 ರೊಳಗೆ ಆನ್‌ಲೈನ್ ಮುಖಾಂತರ ಸಲ್ಲಿಸುವಂತೆ ಆದೇಶಿಸಲಾಗಿತ್ತು. ವಿದ್ಯಾರ್ಥಿಗಳ ಮನವಿಯ ಮೇರೆಗೆ ಫೆಬ್ರವರಿ 15ರ ವರೆಗೆ ವಿಸ್ತರಿಸಿದ್ದು, ವಿದ್ಯಾರ್ಥಿಗಳು ನಿಗಧಿತ ದಿನಾಂಕದೊಳಗೆ ಆಂತರಿಕ ನಿಬಂಧಗಳನ್ನು ಸಿದ್ಧಪಡಿಸಿ ನಂತರ ಉತ್ತರಗಳನ್ನು ಪಿಡಿಎಫ್ ಫೈಲ್ ಮಾಡಿ ಕೆಎಸ್‌ಒಯು ಅಕಾಡೆಮಿ ಪ್ಲಾಟ್‌ಫಾರಂ ಆಪ್ ನಲ್ಲಿ ಅಪ್‌ಲೋಡ್ ಮಾಡುವಂತೆ ತಿಳಿಸಲಾಗಿದೆ ಹೆಚ್ಚಿನ ಮಾಹಿತಿಗೆ ವಿಶ್ವವಿದ್ಯಾನಿಲಯದ ಅಧಿಕೃತ ವೆಬ್‌ಸೈಟ್ ವೀಕ್ಷಿಸುವುದು ಹಾಗೂ ಪ್ರಾದೇಶಿಕ ನಿರ್ದೇಶಕರಾದ ಡಾ. ಕೆ. ನಂದಕುಮಾರಿ ದೂ. ಸಂಖ್ಯೆ 9964495936, ಮತ್ತು ಕಚೇರಿ ದೂ. ಸಂಖ್ಯೆ 8861732487, 8660460261, 9743184848 9900356226 ಹಾಗೂ 8618501602 ಅನ್ನು ಸಂಪರ್ಕಿಸುವಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜನತಾ ದರ್ಶನ ಕಾರ್ಯಕ್ರಮ

**ಚಿಕ್ಕಬಳ್ಳಾಪುರ:** ಮಾನ್ಯ ಉನ್ನತ ಶಿಕ್ಷಣ ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಂ.ಸಿ. ಸುಧಾಕರ್ ರವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ''ಜನತಾ ದರ್ಶನ'' ಕಾರ್ಯಕ್ರಮವನ್ನು ಜನವರಿ 17 ರಂದು ಬಾಗೇಪಲ್ಲಿ ತಾಲ್ಲೂಕಿನಲ್ಲಿ ಆಯೋಜಿಸಲಾಗಿದ್ದು, ಸಾರ್ವಜನಿಕರು ಸರ್ಕಾರಿ ಕೆಲಸದ ಸಂಬಂಧ ತಮ್ಮ ಅಹವಾಲುಗಳೇನಾದರೂ ಇದ್ದರೆ, ತಾವು ಖುದ್ದಾಗಿ ''ಜನತಾ ದರ್ಶನ'' ಕಾರ್ಯಕ್ರಮದಲ್ಲಿ ಭಾಗವಹಿಸಿ ತಮ್ಮ ಅಹವಾಲುಗಳನ್ನು ಸಚಿವರಿಗೆ ಸಲ್ಲಿಸಬಹುದು. ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮದಲ್ಲಿ ಸಚಿವರು ಸ್ವೀಕರಿಸುವ ಅಹವಾಲುಗಳಿಗೆ ಸಂಬಂಧಿಸಿದಂತೆ ಉತ್ತರಿಸಲು ಎಲ್ಲಾ ಇಲಾಖೆಗಳ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಹಾಜರಿದ್ದು, ಕಾರ್ಯಕ್ರಮವನ್ನು ಯಾವುದೇ ಲೋಪವಿಲ್ಲದೆ ಯಶಸ್ವಿಗೊಳಿಸಲು ಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 28ಕ್ಕೆ ಸಶಸ್ತ್ರ ಪೊಲೀಸ್ ಕಾನ್ ಟೇಬಲ್ ಹುದ್ದೆಗೆ ಲಿಖಿತ ಪರೀಕ್ಷೆ

**ಚಿಕ್ಕಬಳ್ಳಾಪುರ:** ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಸಶಸ್ತ್ರ ಪೊಲೀಸ್ ಕಾನ್ಸ್ ಟೇಬಲ್ (ಸಿಎಆರ್ ಮತ್ತು ಡಿಎಆರ್) (ಪುರುಷ ಮತ್ತು ತೃತೀಯ ಲಿಂಗ ಪುರುಷ) 3064 ಹುದ್ದೆಗಳಿಗೆ ಲಿಖಿತ ಪರೀಕ್ಷೆಯನ್ನು ಜನವರಿ 28 ರಂದು ಬೆಳಿಗ್ಗೆ 11:00 ರಿಂದ ಮಧ್ಯಾಹ್ನ 12:30 ಗಂಟೆಯವರೆಗೆ ರಾಜ್ಯಾದ್ಯಂತ ನಡೆಸಲಾಗುವುದು. ಆದ್ದರಿಂದ ಸದರಿ ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಕರೆಪತ್ರದ ಬಗ್ಗೆ ಮುಂಬರುವ ದಿನಗಳಲ್ಲಿ ಎಸ್.ಎಂ.ಎಸ್ ಮೂಲಕ ಮಾಹಿತಿಯನ್ನು ನೀಡಲಾಗುವುದು ಹಾಗೂ ಕರೆಪತ್ರದ ಲಿಂಕ್ ಅನ್ನು ಸಹ ಕಳುಹಿಸಲಾಗುವುದು. ಅಭ್ಯರ್ಥಿಗಳು ಕರೆಪತ್ರವನ್ನು ಡೌನ್ ಲೋಡ್ ಮಾಡಿಕೊಂಡು ನಿಗದಿಪಡಿಸಿದ ದಿನಾಂಕದಂದು ಲಿಖಿತ ಪರೀಕ್ಷೆಗೆ ಹಾಜರಾಗಬಹುದೆಂದು ಚಿಕ್ಕಬಳ್ಳಾಪುರ ಪೊಲೀಸ್ ಅಧೀಕ್ಷಕರು ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ರಾಮನಗರ:** ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ರಾಮನಗರ ಜಿಲ್ಲೆಯ ಅಲೆಮಾರಿ/ ಅರೆ ಅಲೆಮಾರಿ ಜನಾಂಗಕ್ಕೆ ಸೇರಿದ ಜಾತಿಗಳ ಅರ್ಹ ಫಲಾನುಭವಿಗಳಿಂದ ವಸತಿ ಸೌಲಭ್ಯ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದೆ. ದಾಖಲಾತಿಗಳೊಂದಿಗೆ ಅರ್ಜಿಯನ್ನು ಜ. 20ರ ಸಂಜೆ 5.30 ರೊಳಗೆ ಜಿಲ್ಲಾ ಅಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, 2ನೇ ಮಹಡಿ ಜಿಲ್ಲಾ ಪಂಚಾಯತ್ ಭವನ, ಬಿಎಂ ರಸ್ತೆ, ರಾಮನಗರ ಜಿಲ್ಲೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ ದೂ. ಸಂಖ್ಯೆ:08082727604 7 ಅನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರೆಕಾಲಿಕ ಡಿಪ್ಲೊಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು:** ಬೆಂಗಳೂರು ಎಸ್.ಜೆ. ಸರ್ಕಾರಿ ಪಾಲಿಟೆಕ್ನಿಕ್, ಹಾಗೂ ಎಂ.ಇ.ಐ. ಪಾಲಿಟೆಕ್ನಿಕ್ ಇಲ್ಲಿಗೆ 2023-24ನೇ ಸಾಲಿನ ಡಿಪ್ಲೊಮೊ ಲ್ಯಾಟರಲ್ ಎಂಟ್ರಿ ಸ್ಕೀಮ್ ಮುಖಾಂತರ 2ನೇ ವರ್ಷ/3ನೇ ಸೆಮಿಸ್ಟರ್ ಅರೆಕಾಲಿಕ (ಪಾರ್ಟ್ ಟೈಮ್) ಪ್ರವೇಶ ಅರ್ಜಿ ಸ್ವೀಕೃತಿ ಪ್ರಕ್ರಿಯೆಯುಜನವರಿ 4 ರಿಂದ 18 ರವರೆಗೆ ನಡೆಯಲಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರವೇಶ ಅರ್ಜಿಯನ್ನು ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಭರ್ತಿ ಮಾಡಿದ ಅರ್ಜಿಗಳನ್ನು ಜನವರಿ 18 ರೊಳಗಾಗಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಚಿಕ್ಕಲ್ಲೂರು ಜಾತ್ರೆಯಲ್ಲಿ ಪಂಕ್ತಿಭೋಜನಕ್ಕೆ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮಕೈಗೊಳ್ಳಲು ಮನವಿ

**ಚಾಮರಾಜನಗರ:** ಕೊಳ್ಳೇಗಾಲ ತಾಲೂಕಿನ ಚಿಕ್ಕಲ್ಲೂರಿನಲ್ಲಿ ಜ. 25 ರಿಂದ 29 ತನಕ ನಡೆಯುವ ಚಿಕ್ಕಲ್ಲೂರು ಜಾತ್ರೆಯಲ್ಲಿ ಪಂಕ್ತಿಭೋಜನಕ್ಕೆ ಭಕ್ತರಿಗೆ ಯಾವುದೇ ತೊಂದರೆಯಾಗದಂತೆ ಕ್ರಮಕೈಗೊಳ್ಳಬೇಕು ಎಂದು ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ, ಪರಂಪರೆ ರಕ್ಷಣಾ ಹೋರಾಟ ಸಮಿತಿಯಿಂದ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿಗಳ ಆಪ್ತ ಸಹಾಯಕ ಹೆಚ್.ಬಿ.ಭರತ್‌ಭೂಷನ್ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ನಂತರ ಜಿಲ್ಲಾ ಪೊಲಿಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.



ವಿಶ್ವಪ್ರಾಣಿ ದಯಾಸಂಘದ ಸ್ವಾಮೀಜಿ ಒಬ್ಬರು ಈ ಮಂಟೇಸ್ವಾಮಿ ಪರಂಪರೆ ಜಾತ್ರೆಯಲ್ಲಿ ಬಲಿ ನಡೆಯುತ್ತದೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ. ಅವರು ಹೈಕೋರ್ಟ್ ಮೊರೆಹೋಗಿದ್ದು, ಈ ವಿಷಯ ನ್ಯಾಯಾಲಯಕ್ಕೆ ತಲಿಪಿದೆ. ಹೋರಾಟ ಸಮಿತಿಯು ಕೂಡ ಪಂಕ್ತಿಸೇವೆ ಆಚರಣೆ ವಾಸ್ತವಾಂಶವನ್ನು ನ್ಯಾಯಾಲಯದ ಗಮನಕ್ಕೆ ತಂದ ಮೇಲೆ ಮಧ್ಯಂತರ ಆದೇಶವನ್ನು 2017ರಲ್ಲಿ ಕೊಟ್ಟಿದೆ. ಅದರ ಪ್ರಕಾರ ಈ ಒಕ್ಕಲುಗಳು ಮಾಂಸಾಹಾರದ ಅಡುಗೆ ತಯಾರಿಸಿ ಎಡೆ ಅರ್ಪಿಸುವ ಆಚರಣೆಗೆ ಧಕ್ಕೆ ತರಬಾರದೆಂದು ಹಾಗೂ ಅಲ್ಲಿ ಆಕ್ಮಾತ್ ಬಲಿಪ್ರಾಣಿ ನೆಡಯುತ್ತಿದ್ದರು ಅದನ್ನು ತಡೆಯುವಂತೆ ನೋಡಿಕೊಳ್ಳಬೇಕು ನ್ಯಾಯಾಲಯದ ಆದೇಶದಲ್ಲಿ ಹೇಳಿದೆ. ಆದರೆ ಪೊಲಿಸರು ಚಿಕ್ಕಲ್ಲೂರು ಸುತ್ತ ಚೆಕ್‌ಪೋಸ್ಟ್ ಗಳನ್ನು ಹಾಕಿ ತಪಾಸಣೆ ನಡೆಸುತ್ತಾ ಪ್ರಾಣಿ ಬಲಿ ನಿಷೇಧಿಸಿದೆ ಎಂದು ಅಲ್ಲಲ್ಲಿ ನಾಮಫಲಕ ಹಾಕಿದ್ದಾರೆ. ಪ್ರಾಣಿ ಬಲಿ ಇಲ್ಲದ ಕಡೆ ಪ್ರಾಣಿ ನಿಷೇಧ ಅಂಥಾ ಹಾಕುವ ಮೂಲಕ ಜನರಿಗೆ ಒಂದು ತಪ್ಪು ಸಂದೇಶ ರವಾನೆಯಾಗುತ್ತದೆ. ಕಳೆದ 8, 10 ವರ್ಷಗಳಿಂದ ಭಕ್ತಾಧಿಗಳಿಗೆ ಪಂಕ್ತಿಸೇವೆ ಸಮಸ್ಯೆಯಾಗುತ್ತಿದೆ. ಇದನ್ನು ನಿವಾರಿಸಿ ಒಕ್ಕಲುಗಳ ಧಾರ್ಮಿಕ ಆಚರಣೆಗೆ ಅಡ್ಡಿಯಾಗದಂತೆ ನೋಡಿಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಮಾಡಲಾಯಿತು.

ಚಿಕ್ಕಲ್ಲೂರಿನಲ್ಲಿ ಬಲಿಪೀಠವೇ ಇಲ್ಲ. ಮಂಟೇಸ್ವಾಮಿ ಪರಂಪರೆಯಲ್ಲಿ ಯಾರು ಕೂಡ ಬಲಿಕೊಡುವ ಪದ್ದತಿ ಅನುಸರಿಸಲ್ಲ. ಇಲ್ಲಿ ಸಸ್ಯಹಾರಿ, ಮಾಂಸಹಾರಿಗಳು ಅವರವರ ಆಹಾರ ಸಂಸ್ಕೃತಿಗೆ ಅನುಗುಣವಾಗಿ ಅಡುಗೆ ತಯಾರಿಸಿ ಎಡವಿಟ್ಟು ಊಟ ಮಾಡಿ ಎಲ್ಲರಿಗೂ ಊಟ ಹಾಕುತ್ತಾರೆ. ಜನರು ಅವರವರ ಧಾರ್ಮಿಕ ಹಕ್ಕಿನ ಪ್ರಕಾರ ಪಂಕ್ತಿಭೋಜನ ಮಾಡಬಾರದೆಂದು ಯಾವುದೇ ನ್ಯಾಯಾಲಯವು ಹೇಳಿಲ್ಲ. ಮಾಂಸಾಹಾರ ಮಾಡಬೇಡಿ ಎಂದೂ ಹೇಳಿಲ್ಲ. ಯಾರು ಕೂಡ ಹೆದರದೆ, ತಪ್ಪು ತಿಳುವಳಿಕೆ ಒಳಗಾಗದೆ ಒಕ್ಕಲಿನ ಭಕ್ತರು ಮಾಂಸದ ಅಡುಗೆ ಪಂಕ್ತಿ ಭೋಜನ ಮಾಡುವ ತಮ್ಮ ಧಾರ್ಮಿಕ ಹಕ್ಕನ್ನು ಆಚರಣೆ ಮಾಡಬೇಕು. ಇದನ್ನು ಜಿಲ್ಲಾಡಳಿತ ಕೂಡ ಭಕ್ತರಿಗೆ ತಿಳಿಯಬೇಕಿದೆ ಎಂದು ಸಮಿತಿ ಅಧ್ಯಕ್ಷ ಉಗ್ರ ನರಸಿಂಹೇಗೌಡ ಒತ್ತಾಯಿಸಿದರು.

ಮಂಟೇಸ್ವಾಮಿ, ರಾಚಪ್ಪಾಜಿ, ಸಿದ್ದಪ್ಪಾಜಿ, ಪರಂಪರೆ ರಕ್ಷಣಾ ಹೋರಾಟ ಸಮಿತಿ ಕಾರ್ಯದರ್ಶಿ ಎಲ್. ಶಂಭುಲಿಂಗಸ್ವಾಮಿ, ಸಂಶೋಧಕ ಶಂಕನಪುರಮಹದೇವ್, ಹೊಂಡರಬಾಳುವಾಸು, ನಾಗೇಶ್, ಇರಸವಾಡಿ ಮಹೇಶ್ ಹಾಜರಿದ್ದರು.

# ಮರಿಯಾಲ, ಪಣ್ಯದಹುಂಡಿಯ ಆರೋಗ್ಯ ಕೇಂದ್ರಕ್ಕೆ ನ್ಯಾಯಾಧೀಶರ ಅನಿರೀಕ್ಷಿತ ಭೇಟಿ

**ಚಾಮರಾಜನಗರ:** ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಸಿವಿಲ್ ನ್ಯಾಯಾಧಿಶರಾದ ಎಂ. ಶ್ರೀಧರ ಅವರು ತಾಲೂಕಿನ ಮರಿಯಾಲದ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರ ಹಾಗೂ ಪಣ್ಯದಹುಂಡಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಗುರುವಾರ (ಜ.11) ಅನಿರೀಕ್ಷಿತ ಭೇಟಿ ನೀಡಿ ಪರಿಶೀಲಿಸಿದರು. ಮರಿಯಾಲದ ಗ್ರಾಮದ ಸಮುದಾಯ ಆರೋಗ್ಯ ಕೇಂದ್ರದ ಸ್ವಚ್ಚತೆ, ವೈದ್ಯರು ಹಾಗೂ ಸಿಬ್ಬಂದಿಗ ಕರ್ತವ್ಯದ ಬಗ್ಗೆ ಪರಿಶೀಲಿಸಿದರು. ಆರೋಗ್ಯ ಕೇಂದ್ರಕ್ಕೆ ಬರುವ ರೋಗಿಗಳಿಗೆ ಜನಸ್ನೇಹಿಯಾಗಿ ಉತ್ತಮ ವೈದ್ಯಕೀಯ ಸೇವೆಯನ್ನು ನೀಡುವಂತೆ ಸೂಚಿಸಿದರು. ಪಣ್ಯದಹುಂಡಿ ಗ್ರಾಮದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಅಲ್ಲಿನ ಔಷಧಾಲಯ, ಲ್ಯಾಬ್, ವಾರ್ಡ್‌ಗಳನ್ನು ಪರಿಶೀಲಿಸಿದರು. ರೋಗಿಗಳಿಗೆ ಉಚಿತ ಔಷಧಿಗಳನ್ನು ನೀಡುವಂತೆ ಸೂಚಿಸಿದರು. ಆರೋಗ್ಯ ಕೇಂದ್ರದ ಪರಿಸರವನ್ನು ಉತ್ತಮವಾಗಿ ಕಾಪಾಡಿಕೊಳ್ಳಬೇಕು. ವಿಕಲಚೇತನರು ಆರೋಗ್ಯ ಕೇಂದ್ರಕ್ಕೆ ಬರಲು ರ‍್ಯಾಂಪ್ (ಇಳಿಜಾರು) ಸೌಲಭ್ಯ ಹಾಗೂ ಸೂಕ್ತ ಪ್ರವೇಶ ದ್ವಾರವನ್ನು ಮಾರ್ಪಡಿಸಲು ಹಿರಿಯ ಸಿವಿಲ್ ನ್ಯಾಯಾಧೀಶರಾದ ಎಂ. ಶ್ರೀಧರ ಅವರು ಸೂಚನೆ ನೀಡಿದರು.



# ಸಂಜೆ ಟಿಪ್ಸ್

policy bazaa
Compare. Buy. S

## ಯುಎಲ್ಐಪಿ ಖರೀದಿಸಲು ಹೆಚ್ಚು ಆಸಕ್ತಿ ವಹಿಸಿ

ದೀರ್ಘಾವಧಿಯ ಹಣಕಾಸಿನ ಗುರಿಗಳನ್ನು ಸಾಧಿಸಲು, ಹೂಡಿಕೆದಾರರು ಇಕ್ವಿಟಿ, ಸ್ಥಿರ ಆದಾಯದ ಉಪಕರಣಗಳು, ಟರ್ಮ್ ಪ್ಲಾನ್ ಯುಎಲ್ಐಪಿ ಖರೀದಿಸಲು ಒಲವು ತೋರುತ್ತಾರೆ. ನಿವೃತ್ತಿ, ಉನ್ನತ ಶಿಕ್ಷಣ ಮತ್ತು ಮನೆ ಖರೀದಿ ಹೀಗೆ ಈ ಉತ್ಪನ್ನಗಳನ್ನು ದೀರ್ಘಾವಧಿಯ ಗುರಿಗಳೊಂದಿಗೆ ಖರೀದಿ ಮಾಡುವ ಕಾರಣದಿಂದ ಈ ವಿಮಾ ಪಾಲಿಸಿಗಳನ್ನು ಕಾರ್ಯಗತಗೊಳಿಸುವಲ್ಲಿ ಕೆಲವೊಂದು ಅಂಶಗಳನ್ನು ಮನಸ್ಸಿನಲ್ಲಿಟ್ಟುಕೊಳ್ಳುವುದು ಅತ್ಯಗತ್ಯ. ಕೆಲವು ಪಾಲಿಸಿದಾರರು ಅಥವಾ ಅವರ ನಾಮಿನಿಗಳು ಸಾವಿನಂತಹ ದುರದೃಷ್ಟಕರ ಘಟನೆಯ ಸಂದರ್ಭದಲ್ಲಿ ತಮ್ಮ ಪಾಲಿಸಿ ಮುಂದುವರಿಸದಿರಬಹುದು. ಹೀಗೆ ಪಾಲಿಸಿ ಅನೂರ್ಜಿತಗೊಳ್ಳುವಂಥ ಸಂದರ್ಭಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಪ್ರೀಮಿಯಂ ಮನ್ನಾ ರೈಡರ್ ಖರೀದಿಸುವ ಮೂಲಕ ಇದನ್ನು ಸಾಧಿಸಬಹುದಾಗಿದೆ.ಪ್ರೀಮಿಯಂ ಪಾವತಿಸದ ಕಾರಣ ಪಾಲಿಸಿಯು ಕಳೆದುಹೋಗುವುದಿಲ್ಲ ಎಂದು ಖಚಿತಪಡಿಸಿಕೊಳ್ಳಲು ವಿಮಾ ಯೋಜನೆಯೊಂದಿಗೆ ಖರೀದಿಸಲು ಪ್ರೋತ್ಸಾಹಿಸಲಾಗುತ್ತದೆ. ಪಾಲಿಸಿದಾರರ ಸಾವು ಅಥವಾ ಅಂಗವೈಕಲ್ಯದಿಂದಾಗಿ ಪಾವತಿ ಸಾಧ್ಯವಾಗದಿರಬಹುದು. ಇನ್ನೊಂದು ರೀತಿಯಲ್ಲಿ ಹೇಳುವುದಾದರೆ, ಯುಲಿಪ್ ಪಾಲಿಸಿದಾರರು ಈ ರೈಡರ್ (ಡಬ್ಲ್ಯುಓಪಿ) ಖರೀದಿಸಿದ್ದರೆ, ಪಾಲಿಸಿದಾರನ ಮರಣದ ನಂತರ ಮೊತ್ತವನ್ನು ಪಾವತಿಸದಿದ್ದರೂ, ಪಾಲಿಸಿಯ ಅವಧಿಯ ಅಂತ್ಯದವರೆಗೆ ಇದು ಮುಂದುವರಿಯುತ್ತದೆ.ಡಬ್ಲ್ಯುಓಪಿಗಳಲ್ಲಿ ಪ್ರೀಮಿಯಂ ಆಯ್ಕೆಯ ಮನ್ನಾ ಪ್ರಮುಖ ಪಾತ್ರವನ್ನು ವಹಿಸುತ್ತದೆ.

## ಮಸಾಲೆ ರೋಟಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಮೈದಾ ಹಿಟ್ಟು- 2ಬಟ್ಟಲು, ಈರುಳ್ಳಿ- 2, ಹಸಿಮೆಣಸಿಕಾಯಿ- 15 ಹಾಗೂ ಅಲ್ಪ ಪ್ರಮಾಣದಲ್ಲಿ ಕಾಳುಮೆಣಸು, ಬೆಳ್ಳುಳ್ಳಿ, ಶುಂಠಿಪೇಸ್ಟ್, ಚಕ್ಕೆ, ಲವಂಗ, ಏಲಕ್ಕಿ, ಗಸಗಸೆ, ನಿಂಬೆರಸ, ಜೀರಿಗೆ, ಕೊತ್ತಂಬರಿಸೊಪ್ಪು

### ಮಾಡುವ ವಿಧಾನ

ಮೊದಲಿಗೆ ಮೈದಾಹಿಟ್ಟಿಗೆ ನೀರು ಹಾಕಿ ಚಪಾತಿ ಮಾದರಿಯಲ್ಲಿ ಕಲಸಿಟ್ಟುಕೊಳ್ಳಬೇಕು. ಇನ್ನೊಂದೆಡೆ ತೆಗೆದಿಟ್ಟುಕೊಂಡ ಮಸಾಲೆ ಪದಾರ್ಥಗಳಾದ ಈರುಳ್ಳಿ, ಹಸಿಮೆಣಸಿಕಾಯಿ, ಕಾಳುಮೆಣಸು, ಬೆಳ್ಳುಳ್ಳಿ, ಶುಂಠಿ ಪೇಸ್ಟ್, ಚಕ್ಕೆ, ಲವಂಗ, ಏಲಕ್ಕಿ, ಗಸಗಸೆ, ನಿಂಬೆರಸ, ಜೀರಿಗೆ, ಕೊತ್ತಂಬರಿಸೊಪ್ಪು ಎಲ್ಲವನ್ನು ಹಾಕಿ ರುಬ್ಬಬೇಕು. ಸ್ವಲ್ಪ ಪ್ರಮಾಣದ ಕಡ್ಲೆಹಿಟ್ಟು ತೆಗೆದುಕೊಂಡು ಅದಕ್ಕೆ ರುಬ್ಬಿದ ಮಸಾಲೆಯನ್ನು ಅದಕ್ಕೆ ಹಾಕಿ ಕಲಸಿ ಸಣ್ಣ ಉಂಡೆಯನ್ನಾಗಿ ಮಾಡಿಕೊಳ್ಳಬೇಕು. ಬಳಿಕ ಮೊದಲು ಕಲೆಸಿಟ್ಟ ಮೈದಾ ಹಿಟ್ಟನ್ನು ತೆಗೆದುಕೊಂಡು ಅದನ್ನು ಸ್ವಲ್ಪ ಲಟ್ಟಿಸಿ ಅದರೊಳಗೆ ಮಸಾಲೆಯ ಉಂಡೆಯನ್ನು ಹಾಕಬೇಕು. ಮತ್ತೆ ಒಬ್ಬಟ್ಟಿನ ರೀತಿ ಲಟ್ಟಿಸಿ ಬಳಿಕ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಿಸಿದರೆ ಮಸಾಲೆ ರೋಟಿ ರೆಡಿ.

# ಟಾಲಿವುಡ್‌ನಲ್ಲಿ ಹನುಮಾನ್.. ಗುಂಟೂರು ಖಾರ.. ಪೈಪೋಟಿ

ಸಂಕ್ರಾಂತಿ ಸಂದರ್ಭದಲ್ಲಿ ಟಾಲಿವುಡ್‌ನಲ್ಲಿ ತೀವ್ರ ಪೈಪೋಟಿ ಇದೆ. ತೆಲುಗು ಸೂಪರ್ ಸ್ಟಾರ್ ಮಹೇಶ್ ಬಾಬು ನಟನೆಯ 'ಗುಂಟೂರು ಕಾರ', ತೇಜ ಸಜ್ಜ ಅವರ 'ಹನುಮಾನ್', ನಾಗಾರ್ಜುನ ಅವರ 'ನಾ ಸಮಿರಂಗ', ವೆಂಕಟೇಶ್ ಅವರ 'ಸೈಂಧವ' ಚಿತ್ರಗಳು ಪ್ರೇಕ್ಷಕರನ್ನು ರಂಜಿಸುತ್ತಿವೆ. ಇನ್ನುಳಿದ ಚಿತ್ರಗಳ ವಿಚಾರ ಬಿಟ್ಟರೆ, ಜನವರಿ 12 ಬಿಡುಗಡೆಯಾಗಿರುವ 'ಗುಂಟೂರು ಕಾರ' ಮತ್ತು 'ಹನುಮಾನ್' ಚಿತ್ರಗಳ ನಡುವೆ ಬಾಕ್ಸ್ ಆಫೀಸ್‌ನಲ್ಲಿ ಭಾರಿ ಫೈಟ್ ನಡೆಯುತ್ತಿದೆ. ಹೌದು.. ಬಿಡುಗಡೆಗೆ ಮುನ್ನ 'ಗುಂಟೂರು ಕಾರಂ' ಚಿತ್ರಕ್ಕೆ ಹೋಲಿಸಿದರೆ, 'ಹನುಮಾನ್' ಚಿತ್ರವು ಟಿಕೆಟ್ ಬುಕ್ಕಿಂಗ್‌ನಲ್ಲಿ ಅಗ್ರಸ್ಥಾನದಲ್ಲಿದೆ. ಹೆಚ್ಚಾಗಿ 'ಹನುಮಾನ್' ಚಿತ್ರ ವೀಕ್ಷಿಸಲು ಪ್ರೇಕ್ಷಕರು ಹೆಚ್ಚಿನ ಆಸಕ್ತಿ ತೋರಿದರು. ಆನ್ಲೈನ್ ಟಿಕೆಟಿಂಗ್ ಆಯಪ್ ಬುಕ್ ಮೈ ಶೋ ಇದನ್ನು ಬಹಿರಂಗಪಡಿಸಿದೆ. ಟಿಕೆಟ್ ಮಾರಾಟದ ವಿಚಾರದಲ್ಲಿ ಮಹೇಶ್ ಸಿನಿಮಾಗೆ ಹೋಲಿಸಿದರೆ ತೇಜ ಸಜ್ಜನ ಸಿನಿಮಾ ಮುಂದೆ ಸಾಗುತ್ತಿದೆ. ಅಲ್ಲದೆ, ಒಂದು ಗಂಟೆಯೊಳಗೆ 'ಗುಂಟೂರು ಕರಂ' ಸಿನಿಮಾಕ್ಕೆ 16 ಸಾವಿರ ಟಿಕೆಟ್ ಬುಕ್ ಆದ್ರೆ, 'ಹನುಮಾನ್' ಸಿನಿಮಾಗೆ ಸುಮಾರು 20 ಸಾವಿರ ಟಿಕೆಟ್ ಬುಕ್ ಆಗಿವೆ. ಸದ್ಯ ಮಹೇಶ್ ಸಿನಿಮಾ ಬುಕ್ಕಿಂಗ್ ನಲ್ಲಿ ಹಿಂದೆ ಬಿದ್ದಿದೆ. 'ಹನುಮಾನ್' 'ಗುಂಟೂರು ಕರಂ' ಚಿತ್ರಕ್ಕೆ ಶಾಕ್ ಮೇಲೆ ಶಾಕ್ ನೀಡುತ್ತಿದೆ. 'ಹನುಮಾನ್' ಸಿನಿಮಾದಲ್ಲಿ ತೇಜ ಸಜ್ಜಾಗೆ ಜೋಡಿಯಾಗಿ ಅಮೃತಾ ಅಯ್ಯರ್ ನಟಿಸಿದ್ದಾರೆ. ಕಾಲಿವುಡ್ ನಟಿ ವರಲಕ್ಷ್ಮಿ ಶರತ್ಕುಮಾರ್ ಮತ್ತು ಹಿರಿಯ ನಟ, ನಿರ್ದೇಶಕ ಸಮುದ್ರಖನಿ ಈ ಸಿನಿಮಾದಲ್ಲಿ ಪ್ರಮುಖ ಪಾತ್ರಗಳನ್ನು ನಿರ್ವಹಿಸಿದ್ದಾರೆ. ಪ್ರೈಮ್ ಶೋ ಎಂಟರ್ಟೈನ್ಮೆಂಟ್ ಬ್ಯಾನರ್ ಅಡಿಯಲ್ಲಿ ಕೆ ನಿರಂಜನ್ ರೆಡ್ಡಿ ಈ ಚಿತ್ರವನ್ನು ನಿರ್ಮಿಸಿದ್ದಾರೆ. ತ್ರಿವಿಕ್ರಮ್ ನಿರ್ದೇಶನದ 'ಗುಂಟೂರು ಕಾರ' ಚಿತ್ರದಲ್ಲಿ ಮಹೇಶ್ ಬಾಬು ನಾಯಕನಾಗಿ ನಟಿಸಿದ್ದಾರೆ. ಶ್ರೀಲೀಲಾ ಮತ್ತು ಮೀನಾಕ್ಷಿ ಚೌಧರಿ ಈ ಚಿತ್ರದಲ್ಲಿ ನಾಯಕಿಯರಾಗಿ ನಟಿಸಿದ್ದಾರೆ. ರಮ್ಯಾಕೃಷ್ಣ, ಪ್ರಕಾಶ್ ರಾಜ್ ಮತ್ತು ಜಗಪತಿ ಬಾಬು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಹಾಸಿನಿ ಮತ್ತು ಹರಿಕಾ ಕ್ರಿಯೇಷನ್ಸ್ ಬ್ಯಾನರ್ ಅಡಿಯಲ್ಲಿ ಎಸ್. ರಾಧಾಕೃಷ್ಣ ಈ ಚಿತ್ರವನ್ನು ನಿರ್ಮಿಸಿದ್ದು, ತಮನ್ ಸಂಗೀತ ಸಂಯೋಜಿಸಿದ್ದಾರೆ.





# ಆರೋಗ್ಯಕ್ಕೂ ಸಿಹಿ ಖರ್ಜೂರ?



### ಹೆಲ್ತ್ ಟಿಪ್ಸ್

ದಿನವೂ ಖರ್ಜೂರ ಸೇವಿಸುವುದರಿಂದ ಆರೋಗ್ಯಕ್ಕೆ ಅನೇಕ ಲಾಭಗಳಿವೆ. ತಿನ್ನಲು ಸಿಹಿಯಾಗಿರುವ ಈ ಹಣ್ಣು ಆರೋಗ್ಯದ ಸಿಹಿ ಹೆಚ್ಚಿಸುವಲ್ಲಿ ಎಷ್ಟು ಪರಿಣಾಮಕಾರಿ ಎಂದು ತಿಳಿಯಲು ಮುಂದೆ ಓದಿ.

ಇದರಲ್ಲಿ ನಾರಿನಂಶ ಅಧಿಕವಿರುವುದರಿಂದ ಸುಲಭವಾಗಿ ಜೀರ್ಣವಾಗುತ್ತದೆ. ದೇಹಕ್ಕೆ ಬೇಗನೆ ಶಕ್ತಿಯನ್ನು ತುಂಬುತ್ತದೆ.

ದಿನವೂ ಖರ್ಜೂರ ತಿಂದರೆ ಹೊಟ್ಟೆಯಲ್ಲಿ ಆರೋಗ್ಯಕರವಾದ ಬ್ಯಾಕ್ಟೀರಿಯವನ್ನು ಹೆಚ್ಚು ಉತ್ಪತ್ತಿ ಮಾಡುವುದರಿಂದ ಕರುಳಿನ ಕಾರ್ಯಕ್ಕೆ ಸಹಾಯ ಮಾಡುತ್ತದೆ.

ಖರ್ಜೂರ ತಿನ್ನುವುದರಿಂದ ಕ್ಯಾನ್ಸರ್ ರಕ್ತ ಕಣಗಳು ಹರಡುವುದನ್ನು ತಡೆಗಟ್ಟಬಹುದು.

ಖರ್ಜೂರವನ್ನು ರಾತ್ರಿಯಲ್ಲಿ ನೀರಿನಲ್ಲಿ ನೆನೆಹಾಕಿ ಬೆಳಗ್ಗೆ ಅದನ್ನು ಜ್ಯೂಸ್ ರೀತಿ ಮಾಡಿ ಕುಡಿಯುವುದು ಹೃದಯ ಸಮಸ್ಯೆ ಇರುವವರಿಗೆ ಒಳ್ಳೆಯದು.

ಖರ್ಜೂರದಲ್ಲಿ ಕಬ್ಬಿಣದಂಶ ಇರುವುದರಿಂದ ರಕ್ತಹೀನತೆಯನ್ನು ತಡೆಗಟ್ಟಬಹುದು.

ಅಸಿಡಿಟಿ ಮತ್ತು ಹೃದಯದ ಉರಿ ಕಡಿಮೆಯಾಗಲು ಖರ್ಜೂರ ಸಹಾಯ ಮಾಡುತ್ತದೆ.

ಹೆರಿಗೆಯ ನಂತರ ಎದೆ ಹಾಲು ಉತ್ಪತ್ತಿ ಹೆಚ್ಚು ಮಾಡುತ್ತದೆ ಈ ಖರ್ಜೂರ. ಖರ್ಜೂರ ಹಾಕಿ ಕಾಯಿಸಿದ ಹಾಲು ಮಕ್ಕಳಿಗೆ ಅತ್ಯುತ್ತಮವಾದ ಪೋಷಕಾಂಶವಾಗಿದೆ.

# ನಾಳೆ ಲೋಹ್ರಿ ಉತ್ಸವ




ಲೋಹ್ರಿ ಪ್ರತಿ ವರ್ಷ ಜನವರಿ 14 ರಂದು ಆಚರಿಸಲಾಗುತ್ತದೆ ಮತ್ತು ಚಳಿಗಾಲದ ಕೊನೆಯ ಕೆಲವು ದಿನಗಳು ಮತ್ತು ಪರಾಕಾಷ್ಠೆಯನ್ನು ಸೂಚಿಸುತ್ತದೆ. 2024 ರಲ್ಲಿಯೂ ಇದು ಜನವರಿ 14 ರಂದು ಬರುತ್ತದೆ . ಲೋಹ್ರಿ ಪಂಜಾಬ್ನ ಪ್ರಮುಖ ಹಬ್ಬಗಳಲ್ಲಿ ಒಂದಲ್ಲ ಆದರೆ ಜಮ್ಮು ಮತ್ತು ಕಾಶ್ಮೀರ ಮತ್ತು ಇತರ ರಾಜ್ಯಗಳಲ್ಲಿ ಆಚರಿಸಲಾಗುತ್ತದೆ. ಕೂಟಗಳು ಮತ್ತು ಆಚರಣೆಗಳು ಲೋಹ್ರಿಯನ್ನು ಸಮುದಾಯದ ಹಬ್ಬವನ್ನಾಗಿ ಮಾಡುತ್ತದೆ. ಲೋಹ್ರಿಯನ್ನು ಪಂಜಾಬ್ನ ಗ್ರಾಮೀಣ ಪ್ರದೇಶದಲ್ಲಿ ಲೋಹಿ ಎಂದು ಕರೆಯಲಾಗುತ್ತದೆ. ಲೋಹ್ರಿಯು ಮಕರ ಸಂಕ್ರಾಂತಿ ಮತ್ತು ಭೋಗಾಲಿ ಬಿಹುವಿನ ಅದೇ ಸಮಯದಲ್ಲಿ ಬೀಳುತ್ತದೆ.

ಲೋಹ್ರಿಯು ಸಂತ ಕಬೀರನ ಹೆಂಡತಿಯ ಹೆಸರು ಲೋಯಿಯಿಂದ ತನ್ನ ಹೆಸರನ್ನು ಪಡೆದುಕೊಂಡಿದೆ ಎಂದು ಕೆಲವರು ನಂಬುತ್ತಾರೆ. ಈ ಪದವು 'ಲೋಹ್' ಎಂಬ ಪದದಿಂದ ಬಂದಿದೆ ಎಂದು ಕೆಲವರು ನಂಬುತ್ತಾರೆ, ಅಂದರೆ ಬೆಂಕಿಯ ಬೆಳಕು ಮತ್ತು ಉಷ್ಣತೆ. ಇನ್ನೊಂದು ನಂಬಿಕೆಯೆಂದರೆ ಹೋಲಿಕಾ ಮತ್ತು ಲೋಹ್ರಿ ಸಹೋದರಿಯರು. ಮೊದಲನೆಯವರು ನಾಶವಾದಾಗ, ನಂತರದವರು ಪ್ರಹ್ಲಾದನೊಂದಿಗೆ ಬೆಂಕಿಯಲ್ಲಿ ಬದುಕುಳಿದರು.

ಲೋಹ್ರಿ ಅತ್ಯಂತ ಮಂಗಳಕರ ದಿನವಾಗಿದೆ ಏಕೆಂದರೆ ಇದು ಫಲವತ್ತತೆ ಮತ್ತು ಜೀವನದ ಕಿಡಿಯನ್ನು ಆಚರಿಸುತ್ತದೆ. ನವವಿವಾಹಿತ ವಧು ಮತ್ತು ನವಜಾತ ಮಗುವಿನ ಮೊದಲ ಲೋಹ್ರಿಯನ್ನು ಬಹಳ ಅನುಕೂಲಕರ ಮತ್ತು ಪ್ರಮುಖವೆಂದು ಪರಿಗಣಿಸಲಾಗುತ್ತದೆ. ಇತ್ತೀಚೆಗೆ ಮದುವೆ ಅಥವಾ ಹೆರಿಗೆಗೆ ಸಾಕ್ಷಿಯಾದ ಮನೆಗಳಲ್ಲಿ, ಲೋಹ್ರಿ ಆಚರಣೆಗಳು ಹೆಚ್ಚಿನ ಸಂಭ್ರಮವನ್ನು ತಲುಪುತ್ತವೆ. ಹೊಸದಾಗಿ ಮದುವೆಯಾದ ಮಹಿಳೆಯರು ತಮ್ಮ ಸುಂದರವಾಗಿ ಕಾಣಲು ಪ್ರಯತ್ನಿಸುತ್ತಾರೆ. ವಧುವಿನ ಮಾವಂದಿರು ಹೊಸ ಬಟ್ಟೆ ಮತ್ತು ಸುಂದರವಾದ ಆಭರಣಗಳನ್ನು ಉಡುಗೊರೆಯಾಗಿ ನೀಡುತ್ತಾರೆ. ನವವಿವಾಹಿತ ದಂಪತಿಗಳಿಗೆ ಭವ್ಯವಾದ ಆಚರಣೆಯನ್ನು ಏರ್ಪಡಿಸಲಾಗಿದೆ, ಅಲ್ಲಿ ಬಹಳಷ್ಟು ಅತಿಥಿಗಳನ್ನು ಆಹ್ವಾನಿಸಲಾಗುತ್ತದೆ, ಮತ್ತು ಈ ಆಚರಣೆಗಳ ಸಮಯದಲ್ಲಿ, ದಂಪತಿಗಳ ಮೇಲೆ ಅನೇಕ ಉಡುಗೊರೆಗಳು, ಅಸಂಖ್ಯಾತ ಆಶೀರ್ವಾದಗಳು ಮತ್ತು ಶುಭ ಹಾರೈಕೆಗಳು ಸುರಿಸಲ್ಪಡುತ್ತವೆ, ಅವರು ಸಂತೋಷದಿಂದ ಪ್ರಕಾಶಿಸುತ್ತಿದ್ದಾರೆ! ನವಜಾತ ಶಿಶುವಿನ ತಾಯಿ, ಸಂತೋಷದಾಯಕ ಸಂದರ್ಭದಿಂದಾಗಿ ತನ್ನ ಸೌಂದರ್ಯದ ಅವಿಭಾಜ್ಯತೆಯನ್ನು ತೋರುತ್ತಾಳೆ, ತನ್ನ ಮಗುವಿನೊಂದಿಗೆ ಸುಂದರವಾಗಿ ಧರಿಸುತ್ತಾರೆ ಮತ್ತು ಕುಟುಂಬ ಸದಸ್ಯರು ಮತ್ತು ಆಪ್ತರಿಂದ ಉಡುಗೊರೆಗಳನ್ನು ಸ್ವೀಕರಿಸುತ್ತಾರೆ.

ರೈತರ ಜೀವನದಲ್ಲೂ ಲೋಹ್ರಿಗೆ ಪ್ರಮುಖ ಸ್ಥಾನವಿದೆ. ಇದು ರಾಬಿ ಬೆಳೆಗಳ ಕೊಯ್ಲಿಗೆ ಸಂಬಂಧಿಸಿದೆ. ಕಬ್ಬಿನ ಉತ್ಪನ್ನಗಳು, ಉದಾಹರಣೆಗೆ, ಬೆಲ್ಲ, ಲೋಹ್ರಿ ಆಚರಣೆಗಳಲ್ಲಿ ಕೇಂದ್ರವಾಗಿದೆ, ಹಾಗೆಯೇ ಈ ಅವಧಿಯಲ್ಲಿ ಕೊಯ್ಲು ಮಾಡುವ ಅಡಿಕೆಗಳು. ಮುಂದಿನ ವರ್ಷದಲ್ಲಿ ಸಮೃದ್ಧ ಬೆಳೆ ಉತ್ಪಾದನೆಯಾಗಲಿ ಎಂದು ರೈತರು ಕುಟುಂಬ ಸಮೇತ ಪ್ರಾರ್ಥಿಸುತ್ತಾರೆ. ಪಂಜಾಬಿ ರೈತರು ಲೋಹ್ರಿಯ ನಂತರದ ದಿನವನ್ನು ಆರ್ಥಿಕ ಹೊಸ ವರ್ಷವೆಂದು ನೋಡುತ್ತಾರೆ. ಲೋಹ್ರಿಯಲ್ಲಿ ಹೊಸ ಕೃಷಿ ಬಾಡಿಗೆಗಳು ಪ್ರಾರಂಭವಾಗುತ್ತವೆ ಮತ್ತು ಬಾಡಿಗೆಯನ್ನು ಈ ದಿನದಂದು ಭೂಮಾಲೀಕರು ಸಂಗ್ರಹಿಸುತ್ತಾರೆ. ಕಾಲಾನಂತರದಲ್ಲಿ, ಜನರು ಲೋಹ್ರಿಯನ್ನು ದುಲ್ಲಾ ಭಟ್ಟಿಯ ಕಥೆಯೊಂದಿಗೆ ಸಂಯೋಜಿಸಿದ್ದಾರೆ, ಅವರು ಜನರಿಗೆ ಸಹಾಯ ಮಾಡಿದ್ದಕ್ಕಾಗಿ ಕೃತಜ್ಞತೆಯನ್ನು ವ್ಯಕ್ತಪಡಿಸುವ ಅನೇಕ ಲೋಹ್ರಿ ಹಾಡುಗಳ ಮುಖ್ಯ ಪಾತ್ರವಾಗಿದೆ. ಮೊಘಲ್ ಚಕ್ರವರ್ತಿ ಅಕ್ಬರನ ಆಳ್ವಿಕೆಯಲ್ಲಿ ಅವರು ಪಂಜಾಬಿನಲ್ಲಿ ವಾಸಿಸುತ್ತಿದ್ದರು. ಪಂಜಾಬ್ನಲ್ಲಿ ಅವರನ್ನು ಹೀರೋ ಎಂದು ಪರಿಗಣಿಸಲಾಗಿತ್ತು. ಶ್ರೀಮಂತರನ್ನು ದರೋಡೆ ಮಾಡುವುದರ ಜೊತೆಗೆ, ಅವರು ಬಡ ಪಂಜಾಬಿ ಹುಡುಗಿಯರನ್ನು ರಕ್ಷಿಸಿದರು, ಸ್ಯಾಂಡಲ್ ಬಾರ್ ಪ್ರದೇಶದಿಂದ ಮಧ್ಯಪ್ರಾಚ್ಯದ ಗುಲಾಮರ ಮಾರುಕಟ್ಟೆಯಲ್ಲಿ ಮಾರಾಟ ಮಾಡಲು ಬಲವಂತವಾಗಿ ಕರೆದೊಯ್ದರು. ಅವರು ಅರ್ಹ ಹುಡುಗರಿಗೆ ಅವರ ಮದುವೆಯನ್ನು ಏರ್ಪಡಿಸಿದರು ಮತ್ತು ಅವರಿಗೆ ಆರ್ಥಿಕ ಮತ್ತು ವಸ್ತು ಸಹಾಯವನ್ನು ಸಹ ನೀಡಿದರು. ಅವರಲ್ಲಿ ಇಬ್ಬರು ಹುಡುಗಿಯರು ಸುಂದ್ರಿ ಮತ್ತು ಮುಂಡ್ರಿ (1614 ರಲ್ಲಿ ವಿವಾಹವಾದರು) ಅವರು ಕ್ರಮೇಣ ಪಂಜಾಬ್ನ ಜಾನಪದದ ಮುಖ್ಯ ವಿಷಯಕ್ಕೆ ಕೇಂದ್ರವಾಗಿದ್ದರು.

ಜನರು ದೀಪೋತ್ಸವದ ಸುತ್ತಲೂ ಸೇರುತ್ತಾರೆ, ಲೋಹ್ರಿಯ ಪ್ರಕಾಶಮಾನವಾದ ಜ್ವಾಲೆಗಳಿಗೆ ಸಿಹಿತಿಂಡಿಗಳು, ಉಬ್ಬಿದ ಅಕ್ಕಿ ಮತ್ತು ಪಾಪ್ಕಾರ್ನ್ ಅನ್ನು ಅರ್ಪಿಸುತ್ತಾರೆ, ಹಾಡುಗಳನ್ನು ಹಾಡುತ್ತಾರೆ ಮತ್ತು ಶುಭಾಶಯಗಳನ್ನು ವಿನಿಮಯ ಮಾಡಿಕೊಳ್ಳುತ್ತಾರೆ. ವಿಶೇಷ ಲೋಹ್ರಿ ಹಾಡುಗಳ ಜೊತೆಯಲ್ಲಿ ಲೋಹ್ರಿ ಆಚರಣೆಗಳನ್ನು ನಡೆಸಲಾಗುತ್ತದೆ. ಹಾಡುಗಾರಿಕೆ ಮತ್ತು ನೃತ್ಯವು ಆಚರಣೆಗಳ ಸಂಕೀರ್ಣ ಭಾಗವಾಗಿದೆ. ಜನರು ತಮ್ಮ ಪ್ರಕಾಶಮಾನವಾದ ಬಟ್ಟೆಗಳನ್ನು ಧರಿಸುತ್ತಾರೆ ಮತ್ತು ಧೋಲ್ನ ಬಡಿತಕ್ಕೆ (ಭಾಂಗ್ರಾ ಮತ್ತು ಗಿಡ್ಡಾ) ನೃತ್ಯ ಮಾಡಲು ಬರುತ್ತಾರೆ. ಈ ದಿನದಂದು ಮಕ್ಕಳು ಸಂಜೆ ಹೊತ್ತಿಸುವ ಸಮುದಾಯದ ದೀಪೋತ್ಸವಗಳಿಗಾಗಿ ಹಣವನ್ನು ಸಂಗ್ರಹಿಸಲು ಮನೆಯಿಂದ ಮನೆಗೆ ಹೋಗುತ್ತಾರೆ. ಪಂಜಾಬ್ನ ವಿವಿಧ ಸ್ಥಳಗಳಲ್ಲಿ, ಲೋಹ್ರಿಗೆ ಸುಮಾರು 10 ರಿಂದ 15 ದಿನಗಳ ಮೊದಲು, ಹದಿಹರೆಯದ ಹುಡುಗರು ಮತ್ತು ಹುಡುಗಿಯರ ಗುಂಪುಗಳು ಲೋಹ್ರಿ ದೀಪೋತ್ಸವಕ್ಕಾಗಿ ಮರದ ದಿಮ್ಮಿಗಳನ್ನು ಸಂಗ್ರಹಿಸಲು ನೆರೆಹೊರೆಯ ಸುತ್ತಲೂ ಹೋಗುತ್ತವೆ.

# ನೆಲ್ಲಿಕಾಯಿಯಿಂದ ಕೇಶ ರಕ್ಷಣೆ

### ಬ್ಯೂಟಿ ಟಿಪ್ಸ್

ಚಳಿಗಾಲ ಮುಗಿಯುವ ಲಕ್ಷಣ ಕಾಣುತ್ತಿಲ್ಲ. ನಿಮ್ಮ ಕೇಶದ ಆರೈಕೆ ನಿಮಗೆ ಸವಾಲಾಗಿದೆಯೇ?.. ನೆಲ್ಲಿಕಾಯಿಯಿಂದ ನಿಮ್ಮೆಲ್ಲಾ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದು. ಎರಡು ನೆಲ್ಲಿಕಾಯಿಯನ್ನು ಸಣ್ಣಗೆ ಕತ್ತರಿಸಿ, ಅರ್ಧ ಕಪ್ ಮೊಸರಿನಲ್ಲಿ ಬೆರೆಸಿ. ನಾಲ್ಕು ಚಮಚ ಮೆಂತೆ ಕಾಳು ಮತ್ತು ಒಂದು ಮುಷ್ಠಿ ಕರಿ ಬೇವಿನ ಎಲೆ ಸೇರಿಸಿ. ಇವೆಲ್ಲವನ್ನೂ ಮಿಕ್ಸಿಯಲ್ಲಿ ರುಬ್ಬಿ. ತಲೆಗೆ ಹಚ್ಚಿ. ಎರಡು ಗಂಟೆ ಬಳಿಕ ತೊಳೆಯುವುದರಿಂದ ಕೂದಲು ಕಾಂತಿಯುತವಾಗಿ ಉದ್ದವಾಗಿ ಬೆಳೆಯುತ್ತದೆ.

ನೆಲ್ಲಿಕಾಯಿ ಪುಡಿಗೆ ಶೀಕಾಕಾಯಿ ಪುಡಿ, ಕಹಿಬೇವಿನ ಎಲೆಯ ಪುಡಿ, ದಾಲ್ಚಿನಿ ಪುಡಿ ಸೇರಿಸಿ, ನೀರು ಬೆರೆಸಿ ಸಣ್ಣ ಉರಿಯಲ್ಲಿಟ್ಟು ಕುದಿಸಿ. ಬಳಿಕ ಸೋಸಿ. ಈ ನೀರಿಗೆ ಶ್ರೀಗಂಧದ ಎಣ್ಣೆ ಬೆರೆಸಿ. ಕೂದಲಿಗೆ ಹಚ್ಚಿ. ಎರಡು ಗಂಟೆ ಬಳಿಕ ತಲೆ ತೊಳೆಯಿರಿ. ಯಾವುದೇ ಶ್ಯಾಂಪೂ ಬಳಸದಿರಿ.

ನೆಲ್ಲಿಕಾಯಿ ಪುಡಿಗೆ ಮದರಂಗಿ ಎಲೆಯ ಪೇಸ್ಟ್ ತಯಾರಿಸಿ ಬೆರೆಸಿ ಬ್ರಶ್ ಮೂಲಕ ಹಚ್ಚಿಕೊಂಡರೆ ಕೂದಲಿಗೆ ಹೊಳಪು ಬರುವುದು ಮಾತ್ರವಲ್ಲ, ಸಾಕಷ್ಟು ಪ್ರಮಾಣದ ಪೋಷಕಾಂಶ ಲಭ್ಯವಾಗಿ ಕೂದಲು ಸೊಂಪಾಗಿ ಬೆಳೆಯುತ್ತದೆ.



## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ :** ಸ್ಥಿರಾಸ್ತಿ ಮತ್ತು ವಾಹನದಿಂದ ಅನುಕೂಲ, ವಿದ್ಯಾಭ್ಯಾಸದಲ್ಲಿ ಪ್ರಗತಿ, ವ್ಯಾಪಾರ ವ್ಯವಹಾರದಲ್ಲಿ ಬೆಳವಣಿಗೆ, ಅನಿರೀಕ್ಷಿತ ಉದ್ಯೋಗ ಲಾಭ

**ವೃಷಭ:** ಶುಭ ಕಾರ್ಯದಲ್ಲಿ ಯಶಸ್ಸು, ಪಾಲುದಾರಿಕೆಯಲ್ಲಿ ಲಾಭ, ದಾಯಾದಿಗಳೊಂದಿಗೆ ಕಿರಿಕಿರಿ, ಪತ್ರ ವ್ಯವಹಾರದಲ್ಲಿ ಯಶಸ್ಸು

**ಮಿಥುನ:** ಆರ್ಥಿಕ ಚೇತರಿಕೆ, ಉದ್ಯೋಗದಲ್ಲಿ ಬೆಳವಣಿಗೆ, ಕೌಟುಂಬಿಕ ಸಹಕಾರ, ಗುಪ್ತ ಶತ್ರು ಕಾಟ

**ಕಟಕ:** ವ್ಯಾಪಾರ ವ್ಯವಹಾರದಲ್ಲಿ ಪ್ರಗತಿ, ಅಧಿಕಾರಿಗಳಿಂದ ಪ್ರಶಂಸೆ, ಭೂವ್ಯವಹಾರದಲ್ಲಿ ಅನುಕೂಲ, ಮಕ್ಕಳ ಜೀವನದಲ್ಲಿ ಬದಲಾವಣೆ

**ಸಿಂಹ:** ದೂರ ಪ್ರಯಾಣದಲ್ಲಿ ಅನುಕೂಲ, ಉದ್ಯೋಗ ಲಾಭ, ಆರ್ಥಿಕ ಸಹಕಾರ, ಗೃಹ ಮತ್ತು ವಾಹನದಿಂದ ಅನುಕೂಲ

**ಕನ್ಯಾ:** ಕೋರ್ಟ್ ಕೇಸುಗಳಲ್ಲಿ ಜಯ, ಅನಿರೀಕ್ಷಿತ ಅವಕಾಶ, ಪತ್ರ ವ್ಯವಹಾರಗಳಲ್ಲಿ ಯಶಸ್ಸು, ದಾಯಾದಿ ಕಲಹ

**ತುಲಾ:** ಉದ್ಯೋಗ ಲಾಭ, ಶುಭಕಾರ್ಯ ಪ್ರಯತ್ನದಲ್ಲಿ ಯಶಸ್ಸು, ವಾಹನ ಖರೀದಿಗೆ ಅನುಕೂಲಕರ, ರೋಗಭಾದೆಯಿಂದ ಮುಕ್ತಿ

**ವೃಶ್ಚಿಕ:** ಅನಿರೀಕ್ಷಿತವಾಗಿ ಉತ್ತಮ ಅವಕಾಶ, ಮುಖ್ಯ ತೀರ್ಮಾನಗಳಲ್ಲಿ ಯಶಸ್ಸು, ತಂದೆ ಮತ್ತು ತಾಯಿಯ ಸಹಕಾರ, ಯತ್ನ ಕಾರ್ಯಗಳಲ್ಲಿ ಜಯ

**ಧನಸ್ಸು:** ವ್ಯವಹಾರದಲ್ಲಿ ಅಡೆತಡೆ, ಪ್ರೀತಿ ಪ್ರೇಮ ಭಾವನೆಗಳಿಗೆ ಪೆಟ್ಟು, ಉದ್ಯೋಗ ನಷ್ಟ, ಸಾಲ ಮರುಪಾವತಿ, ಶತ್ರುಭಾದೆಯಿಂದ ಮುಕ್ತಿ

**ಮಕರ:** ಅನಿರೀಕ್ಷಿತ ಲಾಭ ಯಶಸ್ಸು ಪ್ರಗತಿ, ಪಾಲುದಾರಿಕೆ ವ್ಯವಹಾರದಲ್ಲಿ ಅನುಕೂಲ, ಆರ್ಥಿಕ ಚೇತರಿಕೆ, ಮಿತ್ರರಿಂದ ಸಹಕಾರ

**ಕುಂಭ:** ಶತ್ರು ದಮನ, ಅನಿರೀಕ್ಷಿತ ಉದ್ಯೋಗಾವಕಾಶ, ಪ್ರಯಾಣದಲ್ಲಿ ಅನುಕೂಲ, ದಾಂಪತ್ಯದಲ್ಲಿ ಮನಸ್ತಾಪ

**ಮೀನ :** ಆರ್ಥಿಕ ಪ್ರಗತಿ, ಕೌಟುಂಬಿಕ ಸಮಸ್ಯೆ ಬಗೆಹರಿಯುವುದು, ಮಕ್ಕಳ ಜೀವನದಲ್ಲಿ ಬದಲಾವಣೆ, ವಿದ್ಯಾಭ್ಯಾಸದಲ್ಲಿ ಪ್ರಗತಿ

# ಮಥುರೆಯಲ್ಲಿ ಕೃಷ್ಣ ಮಂದಿರ ತಲೆ ಎತ್ತಲಿದೆ



ಅಯೋಧ್ಯೆಯಲ್ಲಿ ಭವ್ಯವಾದ ರಾಮಮಂದಿರ ನಿರ್ಮಾಣಕ್ಕೆ ವ್ಯಾಪಕ ಸಿದ್ಧತೆಗಳು ನಡೆಯುತ್ತಿದ್ದು, ಇಡೀ ದೇಶ ಸಂಭ್ರಮಾಚರಣೆಯಲ್ಲಿ ತೊಡಗಿರುವಾಗ ಶ್ರೀರಾಮಚಂದ್ರ ಮಾಂಸಹಾರಿ ಎಂಬುದು ಸೇರಿದಂತೆ ವಿವಿಧ ರೀತಿಯಲ್ಲಿ ಅಪ ಪ್ರಚಾರ ಮಾಡುತ್ತಿರುವುದನ್ನು ಕೈಬಿಡಬೇಕು ಎಂದು ಉತ್ತರ ಪ್ರದೇಶದ ಆನಂದಧಾಮ್ ಪೀಠದ ಧಾರ್ಮಿಕ ಶಿಕ್ಷಕ ಮತ್ತು ಗುರೂಜಿ ರಿತೇಶ್ವರ್ ಜೀ ಮಹಾರಾಜ್ ಹೇಳಿದ್ದಾರೆ. ರಾಮಮಂದಿರದ ನಂತರ ಇದೀಗ ಕೃಷ್ಣಮಂದಿರ ನಿರ್ಮಾಣ ಮಾಡುವುದು ನಮ್ಮ ಗುರಿಯಾಗಿದ್ದು, ಮುಂದಿನ 442 ದಿನಗಳಲ್ಲಿ ಮಥುರೆಯಲ್ಲಿ ಕೃಷ್ಣ ಮಂದಿರ ತಲೆ ಎತ್ತಲಿದೆ ಎಂದು ಭವಿಷ್ಯ ನುಡಿದಿದ್ದಾರೆ. ನಗರದಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದಲ್ಲಿ ಹಲವು ಹಂತಗಳ ಚುನಾವಣೆಗಳು ನಿರಂತರವಾಗಿ ನಡೆಯತ್ತವೆ. ಇದೇ ರೀತಿ ಸದ್ಯದಲ್ಲಿಯೇ ಲೋಕಸಭಾ ಚುನಾವಣೆಯೂ ಎದುರಾಗಲಿದೆ. ಇದು ಕೂಡ ಉತ್ತಮ ಬೆಳವಣಿಗೆಯಲ್ಲವೇ?. ರಾಷ್ಟ್ರೀಯ ವಾದ, ಸಾಂಸ್ಕೃತಿಕ ಮೌಲ್ಯ ಮತ್ತು ರಾಷ್ಟ್ರೀಯ ಹಿತಾಸಕ್ತಿಯುಳ್ಳ ಪಕ್ಷ ಗೆದ್ದು ಅಧಿಕಾರಕ್ಕೆ ಬಂದರೆ ತಪ್ಪೇನು?. ರಾಮಮಂದಿರ ಈ ದೇಶದ ಆತ್ಮ. ರಾಜಕೀಯ ಪಕ್ಷಗಳು ಯಾಕೆ ಚುನಾವಣೆಗೆ ಹೆದರಿಕೊಂಡಿವೆ. ರಾಮಮಂದಿರದಿಂದ ಉತ್ತರ ಪ್ರದೇಶದ ಆರ್ಥಿಕತೆಯಲ್ಲಿ ಮಹತ್ವದ ಬದಲಾವಣೆಯಾಗುತ್ತಿದ್ದು, ಉದ್ಯೋಗ ಕೂಡ ದೊರೆಯುತ್ತಿದೆ. ಶ್ರೀ ರಾಮಮಂದಿರದಿಂದ ಏಕತೆ ಮೂಡಿದ್ದು, ಎಲ್ಲವೂ ಒಳ್ಳೆಯದಾಗುತ್ತದೆ ಎಂದು ಹೇಳಿದರು. ಆದರೆ ದೇಶದ ಹಲವೆಡೆ ರಾಮನ ಕುರಿತು ಹಲವು ರೀತಿಯಲ್ಲಿ ಟೀಕೆಗಳನ್ನು ಮಾಡುತ್ತಿದ್ದು, ಇದರಿಂದ ರಾಮಭಕ್ತರಿಗೆ ಆಘಾತ ಉಂಟಾಗಿದೆ. ಭಾವನೆಗಳಿಗೆ ಧಕ್ಕೆ ತರುವ ಕೆಲಸ ನಡೆಯುತ್ತಿದೆ. ಸನಾತನ ಧರ್ಮ ಶ್ರೀರಾಮಚಂದ್ರನ ಆದರ್ಶಗಳಿಂದ ತುಂಬಿದೆ. ರಾಮಾಯಣದ ಸಂದರ್ಭದಲ್ಲಿಯೂ ಅಸುರರಂತೆ ಕೆಲಸ ಮಾಡಿದ್ದ ಸಂತತಿ ಈಗಲೂ ಮುಂದುವರೆದಿದೆ. ಇಂತಹ ಟೀಕೆ, ಟಿಪ್ಪಣಿಗಳನ್ನು ಕೈಬಿಟ್ಟು ಅಯೋಧ್ಯೆಯ ರಾಮಮಂದಿರ ಉದ್ಘಾಟನೆಯಲ್ಲಿ ಪ್ರತಿಯೊಬ್ಬರೂ ಪಾಲ್ಗೊಳ್ಳಬೇಕು ಎಂದರು. ಇದು ಕೇವಲ ರಾಮಮಂದಿರವಲ್ಲ, ರಾಷ್ಟ್ರಮಂದಿರ ಮತ್ತು ವಿಶ್ವ ಮಂದಿರವಾಗಿದೆ. ಇದು ಎಲ್ಲರನ್ನು ಒಳಗೊಳ್ಳಗೊಳ್ಳುವ ಮಂದಿರವಾಗಿದೆ ಎಂದರು.

# ಅಂಬಾನಿ ಏಷ್ಯಾದ ನಂ.1 ಶ್ರೀಮಂತ



**ದೆಹಲಿ:** ರಿಲಯನ್ಸ್ ಇಂಡಸ್ಟ್ರೀಸ್ ಮುಖ್ಯಸ್ಥ ಮುಕೇಶ್ ಅಂಬಾನಿ ಆಸ್ತಿ ಮತ್ತೊಮ್ಮೆ 100 ಬಿಲಿಯನ್ ಡಾಲರ್ ಗಡಿ ದಾಟಿದೆ. ಭಾರತ ಮತ್ತು ಏಷ್ಯಾದ ಅತ್ಯಂತ ಶ್ರೀಮಂತ ವ್ಯಕ್ತಿಯಾಗಿರುವ ಮುಕೇಶ್ ಅಂಬಾನಿ ಸಂಪತ್ತು 2.8 ಬಿಲಿಯನ್ ಡಾಲರ್ಗಳಷ್ಟು ಏರಿಕೆ ಕಂಡಿದ್ದು, 101.8 ಬಿಲಿಯನ್ ಡಾಲರ್ ಮುಟ್ಟಿದೆ. ಬ್ಲೂಮ್ಬರ್ಗ್ ಬಿಲಿಯನೇರ್ಸ್ ಇಂಡೆಕ್ಸ್ ಪ್ರಕಾರ ಅವರು ಜಾಗತಿಕ ಸಿರಿವಂತರ ಪಟ್ಟಿಯಲ್ಲಿ 12ನೇ ಸ್ಥಾನದಲ್ಲಿದ್ದಾರೆ. ಅಂಬಾನಿ ಒಡೆತನ ರಿಲಯನ್ಸ್ ಇಂಡಸ್ಟ್ರೀಸ್ ಲಿ. ಷೇರುಗಳು ಶೇ. 2.6ರಷ್ಟು ಏರಿಕೆ ಕಂಡು ದಾಖಲೆಯ ಗರಿಷ್ಠ ಮಟ್ಟವನ್ನು ತಲುಪಿವೆ. ಈ ಬೆನ್ನಲ್ಲೇ ಅವರ ಆಸ್ತಿಯೂ ಏರಿಕೆ ಕಂಡಿದೆ.

**ಅಂಬಾನಿ ಆಸ್ತಿಯಲ್ಲೂ ಏರಿಕೆ:** ಈ ಮೂಲಕ ಬ್ಲೂಮ್ಬರ್ಗ್ ಬಿಲಿಯನೇರ್ಸ್ ಇಂಡೆಕ್ಸ್ ಪ್ರಕಾರ ಅವರು 2022ರ ಜೂನ್ ನಂತರ ಮೊದಲ ಬಾರಿಗೆ 100 ಬಿಲಿಯನ್ ಡಾಲರ್ ಕ್ಲಬ್ಗೆ ಮರಳಿದ್ದಾರೆ. ರಿಲಯನ್ಸ್ ಇಂಡಸ್ಟ್ರೀಸ್ನಲ್ಲಿ ಕಂಪನಿ ಅಧ್ಯಕ್ಷ ಮುಕೇಶ್ ಅಂಬಾನಿ ಶೇ. 42ರಷ್ಟು ಷೇರು ಹೊಂದಿದ್ದಾರೆ. ಸಂಸ್ಥೆಯು ತ್ರೈಮಾಸಿಕ ಲಾಭದಲ್ಲಿ ಏರಿಕೆಯನ್ನು ವರದಿ ಮಾಡಿದ ನಂತರ ಅದರ ಷೇರುಗಳು ಅಕ್ಟೋಬರ್ನ ಕನಿಷ್ಠ ಮಟ್ಟದಿಂದ ಶೇ.22ರಷ್ಟು ಏರಿಕೆ ಕಂಡಿವೆ. ಪರಿಣಾಮ ಅಂಬಾನಿ ಆಸ್ತಿಯಲ್ಲೂ ಏರಿಕೆಯಾಗಿದೆ.

# 30 ಡಿಗ್ರಿ ಸೆಲ್ಸಿಯಸ್‌ನಲ್ಲಿ ಮಹಿಳೆಯ ಕೂದಲು ಫ್ರೀಝ್





**ಸ್ಟಾಕ್ಹೋಮ್:** ಸ್ವೀಡನ್‌ನಲ್ಲಿ ಯಾರೊಬ್ಬರೂ ತಮ್ಮ ಮನೆಯಿಂದ ಹೊರಹೋಗಲಾಗದಷ್ಟು ತಾಪಮಾನವು ತಣ್ಣಗಾಗುತ್ತಿದೆ. ಈ ನಡುವೆ ದೇಶದ ಸಾಮಾಜಿಕ ಜಾಲತಾಣದಲ್ಲಿ ಜನರು ಅಲ್ಲಿನ ತಾಪಮಾನದ ಪ್ರಭಾವವನ್ನು ತೋರಿಸುವ ಸಾಕಷ್ಟು ವೀಡಿಯೋಗಳನ್ನು ಹಂಚಿಕೊಳ್ಳುತ್ತಿದ್ದಾರೆ. ಈ ನಡುವೆ ಮಹಿಳೆಯೊಬ್ಬರು ಮಾಡಿರುವ ಎಕ್ಸ್ಪರಿಮೆಂಟ್ನಿಂದ ನೆಟ್ಟಿಗರನ್ನು ಆಕೆಯ ಆರೋಗ್ಯದ ಬಗ್ಗೆ ಚಿಂತೆ ಮಾಡುವಂತೆ ಮಾಡಿದೆ. ಸಾಮಾಜಿಕ ಜಾಲತಾಣ ಬಳಕೆದಾರರಾಗಿರುವ ಎಲ್ವಿರಾ ಲುಂಡ್ಗ್ರೆನ್ ತಮ್ಮ ಕೂದಲನ್ನು ಹಿಮಾವೃತವಾದ −30 ಡಿಗ್ರಿ ಸೆಲ್ಸಿಯಸ್ ತಾಪಮಾನದಲ್ಲಿ ಘನೀಕರಿಸುವ ಮೂಲಕ ಅಲ್ಲಿನ ಹವಾಮಾನ ಎಷ್ಟು ಪ್ರತಿಕೂಲವಾಗಿದೆ ಎಂಬುದನ್ನು ತೋರಿಸಿದ್ದಾರೆ. ಆಕೆ ವೀಡಿಯೊವನ್ನು ಹಂಚಿಕೊಂಡಾಗಿನಿಂದ ಸಾಮಾಜಿಕ ಜಾಲತಾನದಲ್ಲಿ ಭಾರೀ ವೈರಲ್ ಆಗುತ್ತಿದ್ದು, ಜನರ ಪ್ರತಿಕ್ರಿಯೆಗಳು ಕೋಲಾಹಲವನ್ನೇ ಎಬ್ಬಿಸಿದೆ.

# ರಷ್ಯಾ ಪ್ರಮುಖ ಆರ್ಥಿಕತೆಯಾಗಿ ಹೊರಹೊಮ್ಮಿದೆ: ಪುಟಿನ್!



**ಮಾಸ್ಕೋ:** ''ಎಲ್ಲಾ ರೀತಿಯ ಒತ್ತಡದ ನಡುವೆಯೂ ರಷ್ಯಾ ಯುರೋಪಿನ ಪ್ರಮುಖ ಆರ್ಥಿಕತೆಯಾಗಿ ಹೊರಹೊಮ್ಮಿದೆ ಮತ್ತು ಈಗ ಕೊಳ್ಳುವ ಸಾಮರ್ಥ್ಯದ ಸಮಾನತೆಯ ವಿಷಯದಲ್ಲಿ ಜಾಗತಿಕವಾಗಿ ಐದನೇ ಸ್ಥಾನವನ್ನು ಹೊಂದಿದೆ'' ಎಂದು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಹೇಳಿಕೊಂಡಿದ್ದಾರೆ. ವಾಣಿಜ್ಯೋದ್ಯಮಿಗಳೊಂದಿಗಿನ ಸಭೆಯಲ್ಲಿ ಮಾತನಾಡಿದ ಪುಟಿನ್, ''ನಮ್ಮ ಕತ್ತು ಹಿಸುಕಲಾಗುತ್ತಿದೆ ಮತ್ತು ಪ್ರತಿ ಕಡೆಯಿಂದ ಒತ್ತಡ ಹೇರಲಾಗುತ್ತಿದೆ ಎಂದು ತೋರುತ್ತದೆ, ಆದರೆ ಇನ್ನೂ, ನಾವು ಯುರೋಪಿನ ಅತಿದೊಡ್ಡ ಆರ್ಥಿಕತೆಯಾಗಿ ಉಳಿದಿದ್ದೇವೆ'' ಎಂದು ಹೇಳಿದ್ದಾರೆ. ''ನಾವು ಜರ್ಮನಿಯನ್ನು ಹಿಂದಿಕ್ಕಿ ವಿಶ್ವದ ಐದನೇ ಸ್ಥಾನಕ್ಕೆ ಏರಿದ್ದೇವೆ, ಚೀನಾ, ಯುಎಸ್, ಭಾರತ, ಜಪಾನ್ ಮತ್ತು ರಷ್ಯಾ ಮುಂಚೂಣಿಯಲ್ಲಿದ್ದು, ನಾವು ಯುರೋಪ್ ನಲ್ಲಿ ನಾವೇ ನಂಬರ್ ಒನ್ ಎಂದು ಹೇಳಿದ್ದಾರೆ. ತಲಾ ಸೂಚಕವನ್ನು ಸುಧಾರಿಸಲು ನಿರಂತರ ಪ್ರಯತ್ನಗಳ ಅಗತ್ಯವನ್ನು ಪುಟಿನ್ ಒಪ್ಪಿಕೊಂಡಿದ್ದು, ಖರೀದಿ ಸಾಮರ್ಥ್ಯದ ಸಮಾನತೆಯ ವಿಷಯದಲ್ಲಿ ನಾವು ಯುರೋಪ್ ನ ಎಲ್ಲಾ ದೇಶಗಳನ್ನು ಮೀರಿಸಿದರೂ, ತಲಾವಾರು ಆಧಾರದ ಮೇಲೆ ಇನ್ನೂ ಕೆಲಸ ಮಾಡಬೇಕಾಗಿದೆ'' ಎಂದಿದ್ದಾರೆ.

# ದೈವಿಕ ಕನಸನ್ನು ನನಸಾಗಿಸಿದೆ: ಅಡ್ವಾಣಿ

**ದೆಹಲಿ:** ಅಯೋಧ್ಯೆಯ ರಾಮಮಂದಿರದ ಉದ್ಘಾಟನೆಯು ದೈವಿಕ ಕನಸನ್ನು ನನಸಾಗಿಸಿದೆ ಎಂದು ಮಾಜಿ ಗೃಹ ಸಚಿವ ಮತ್ತು ಹಿರಿಯ ಬಿಜೆಪಿ ನಾಯಕ ಎಲ್ಕೆ ಅಡ್ವಾಣಿ ಮಾತನಾಡಿದ್ದಾರೆ. ಅಡ್ವಾಣಿ ಅವರು ಜನವರಿ 22 ರಂದು ಅಯೋಧ್ಯೆಯಲ್ಲಿ ರಾಮ ಮಂದಿರದ ಉದ್ಘಾಟನಾ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ವಿಶ್ವ ಹಿಂದೂ ಪರಿಷತ್ ನಾಯಕರೊಬ್ಬರು ಹೇಳಿರುವುದಾಗಿ ಎಎನ್‌ಐ ಸುದ್ದಿ ಸಂಸ್ಥೆ ವರದಿ ಮಾಡಿದೆ. ಹಿಂದಿ ಸಾಹಿತ್ಯ ಪತ್ರಿಕೆಯಾದ ರಾಷ್ಟ್ರಧರ್ಮದಲ್ಲಿ ಪ್ರಕಟವಾಗಲಿರುವ ಲೇಖನದಲ್ಲಿ ಎಲ್ಕೆ ಅಡ್ವಾಣಿಯವರು ಈ ರೀತಿ ಹೇಳಿದ್ದಾರೆ. ರಾಮ ಮಂದಿರ ನಿರ್ಮಾಣ – ದೈವಿಕ ಕನಸಿನ ಈಡೇರಿಕೆ ' ಎಂಬ ಶೀರ್ಷಿಕೆ ಇರುವ ಅಡ್ವಾಣಿಯವರ ಲೇಖನವಿರುವ ಪತ್ರಿಕೆಯ ವಿಶೇಷ ಸಂಚಿಕೆಯನ್ನು ಜನವರಿ 16 ರಂದು ಮುದ್ರಿಸಲಾಗುವುದು. ಈ ವಿಶೇಷ ಸಂಚಿಕೆಯನ್ನು ರಾಮಮಂದಿರ ಉದ್ಘಾಟನಾ ಸಮಾರಂಭಕ್ಕೆ ಸಮಾರಂಭಕ್ಕೆ ಆಹ್ವಾನಿಸಿದ ಅತಿಥಿಗಳಿಗೆ ನೀಡಲಾಗುವುದು. ಪತ್ರಿಕೆಯ ಸಂಪಾದಕರೊಂದಿಗಿನ ಸಂವಾದದಲ್ಲಿ ಹಿರಿಯ ಬಿಜೆಪಿ ನಾಯಕ ಅಡ್ವಾಣಿ ಅವರು ಆ ಸಮಯದಲ್ಲಿ (ಸೆಪ್ಟೆಂಬರ್ 1990 ರಲ್ಲಿ, ರಥ ಯಾತ್ರೆ ಪ್ರಾರಂಭವಾದ ಕೆಲವು ದಿನಗಳ ನಂತರ) ಅಯೋಧ್ಯೆಯಲ್ಲಿ ಒಂದು ದಿನ ಭವ್ಯವಾದ ರಾಮಮಂದಿರವನ್ನು ನಿರ್ಮಿಸಲಾಗುವುದು ಎಂದು ವಿಧಿ ನಿರ್ಧರಿಸಿದೆ ಎಂದು ನಾನು ಭಾವಿಸಿದೆ. ಎಲ್ಲವನ್ನೂ ಕಾಲ ನಿರ್ಧರಿಸುತ್ತದೆ. 'ರಥಯಾತ್ರೆ' ಪ್ರಾರಂಭವಾದ ಕೆಲವು ದಿನಗಳ ನಂತರ, ನಾನು ಕೇವಲ ಸಾರಥಿ ಎಂದು ನಾನು ಅರಿತುಕೊಂಡೆ. ಯಾತ್ರೆಯೇ ಮುಖ್ಯ ಸಂದೇಶವಾಗಿತ್ತು.. ಅದು ರಾಮನ ಜನ್ಮಸ್ಥಳಕ್ಕೆ ಹೋಗುತ್ತಿರುವ ಕಾರಣ 'ರಥ' ಪೂಜೆಗೆ ಅರ್ಹವಾಗಿದೆ ಎಂದು ಹೇಳಿದ್ದಾರೆ.

# ಅಟಲ್ ಸೇತು ಉದ್ಘಾಟಿಸಿದ ಪ್ರಧಾನಿ ಮೋದಿ





**ನವದೆಹಲಿ:** ಭಾರತದ ಅತಿ ಉದ್ದದ ಸಮುದ್ರ ಸೇತುವೆಯಾದ ಮುಂಬೈ ಟ್ರಾನ್ಸ್ ಹಾರ್ಬರ್ ಲಿಂಕ್ ಅಥವಾ ಅಟಲ್ ಸೇತುವನ್ನು ಪ್ರಧಾನಿ ನರೇಂದ್ರ ಮೋದಿ ಇಂದು ಉದ್ಘಾಟಿಸಿದರು. ಈ ಸೇತುವೆಗೆ ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಹೆಸರನ್ನ ಇಡಲಾಗಿದೆ. 21.8 ಕಿ.ಮೀ ಉದ್ದದ ಆರು ಪಥದ ಸೇತುವೆಯನ್ನು 18,000 ಕೋಟಿ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗಿದೆ.

ತಪೋವನ ಮೈದಾನದಲ್ಲಿ ನಡೆದ ರಾಷ್ಟ್ರೀಯ ಯುವ ಮಹೋತ್ಸವವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇಂದು ಭಾರತದ ಯುವ ಶಕ್ತಿಯ ದಿನ. ಗುಲಾಮಗಿರಿಯ ದಿನಗಳಲ್ಲಿ ಭಾರತವನ್ನ ಹೊಸ ಶಕ್ತಿಯಿಂದ ತುಂಬಿದ ಮಹಾನ್ ವ್ಯಕ್ತಿಗೆ ಈ ದಿನವನ್ನ ಅರ್ಪಿಸಲಾಗಿದೆ.

ಸ್ವಾಮಿ ವಿವೇಕಾನಂದರ ಜನ್ಮ ದಿನಾಚರಣೆಯಂದು ಇಲ್ಲಿಗೆ ಬಂದಿರುವುದು ನನಗೆ ಸಂತೋಷ ತಂದಿದೆ. ರಾಷ್ಟ್ರೀಯ ಯುವ ದಿವಸದ ಶುಭಾಶಯಗಳು. ಇಂದು ಭಾರತದ 'ನಾರಿ ಶಕ್ತಿ'ಯ ಸಂಕೇತವಾದ ರಾಜಮಾತಾ ಜೀಜಾ ಬಾಯಿ ಅವರ ಜನ್ಮದಿನ ಎಂದರು.

ಇನ್ನು ಈ ಸೇತುವೆಯ ಉದ್ದವು ಸಮುದ್ರದಲ್ಲಿ ಸುಮಾರು 16.5 ಕಿಮೀ ಮತ್ತು ನೆಲದ ಮೇಲೆ ಸುಮಾರು 5.5 ಕಿಮೀ.ಸಾಗುತ್ತದೆ. ಸೇತುವೆಯ ಉದ್ಘಾಟನೆಯೊಂದಿಗೆ ಮುಂಬೈನಲ್ಲಿ ಸಂಚಾರ ಗಮನಾರ್ಹವಾಗಿ ಸುಧಾರಿಸುವ ನಿರೀಕ್ಷೆಯಿದೆ. ಇದರ ಲೋಕಾರ್ಪಣೆಯೊಂದಿಗೆ ದಕ್ಷಿಣ ಮುಂಬೈ ಮತ್ತು ನವಿ ಮುಂಬೈ ನಡುವಿನ ಪ್ರಯಾಣವು 2 ಗಂಟೆಯಿಂದ 20 ನಿಮಿಷಗಳಿಗೆ ಕಡಿತವಾಗುತ್ತದೆ. ಮುಂಬೈನ ಆರ್ಥಿಕ ಅಭಿವೃದ್ಧಿಯಲ್ಲಿಯೂ ಈ ಸೇತುವೆ ಪ್ರಮುಖ ಪಾತ್ರ ವಹಿಸಲಿದೆ. ಇದರೊಂದಿಗೆ ರಾಯಗಢದ ಕೈಗಾರಿಕಾ ವಲಯವನ್ನು ಸುಲಭವಾಗಿ ತಲುಪಬಹುದು.

# ಏರ್ ಇಂಡಿಯಾ ವೆಜ್ ಊಟದಲ್ಲಿ ಚಿಕನ್ ಪೀಸ್




**ದೆಹಲಿ:** ಏರ್ ಇಂಡಿಯಾ ವಿಮಾನದಲ್ಲಿ ಹಲವು ಬಾರಿ, ಹಲವು ರೀತಿಯ ಯಡವಟ್ಟು ನಡೆದು ಹೋಗಿದೆ. ಊಟದಲ್ಲಿ ಹಲ್ಲಿ, ಕಲ್ಲು, ಇರುವೆ, ಜಿರಲೆ ಎಲ್ಲರೂ ಆಗಾಗ ಸಿಗುತ್ತಿರುತ್ತಾರೆ. ಇದೀಗ ವೆಜ್ ಊಟದಲ್ಲಿ ಚಿಕನ್ ಪೀಸ್ ಸಿಕ್ಕಿದೆ. ಯಾರಿಗೆ ಈ ರೀತಿಯಾಗಿದೆಯೋ, ಆಕೆ ಟ್ವೀಟ್ ಮಾಡಿ, ಆಕ್ರೋಶ ಹೊರಹಾಕಿದ್ದಾರೆ.ಪ್ಲೀಸ್ ನೀವು ಆ ಟ್ವೀಟ್ ತೆಗಿಯಿರಿ. ನಮ್ಮ ತಪ್ಪನ್ನು ಮನ್ನಿಸಿ, ನಮ್ಮನ್ನು ಕ್ಷಮಿಸಿ ಎಂದು ಏರ್ ಇಂಡಿಯಾ ಕ್ಷಮೆಯಾಚಿಸಿದೆ. ವೀರ್ ಜೈನ್ ಎಂಬ ಮಹಿಳೆ, ಏರ್ ಇಂಡಿಯಾ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ವೇಳೆ, ಅವರು ವೆಜ್ ಊಟವನನ್ನು ಆರ್ಡರ್ ಮಾಡಿದ್ದಾರೆ. ಆದರೆ ವೆಜ್ ಊಟದಲ್ಲಿ ಚಿಕನ್ ಪೀಸ್ ಸಿಕ್ಕಿದೆ. ಕೂಡಲೇ ಆ ಫೋಟೋವನ್ನು ತೆಗೆದು, ತಮ್ಮ ಎಕ್ಸ್ ಖಾತೆಯಲ್ಲಿ ಶೇರ್ ಮಾಡಿ, ಆಕ್ರೋಶ ಹೊರಹಾಕಿದ್ದಾರೆ. ಈ ಒಂದು ಪೋಸ್ಟ್ ಶೇರ್ ಆಗುತ್ತಿದ್ದಂತೆ, ನೆಟ್ಟಿಗರು ಕೂಡ ಈ ಬಗ್ಗೆ ಅಸಮಾದಾನ ಹೊರಹಾಕಿದ್ದಾರೆ. ಅಲ್ಲದೇ, ಇವರಂತೆ ಇನ್ನೂ ಹಲವರು ವೆಜ್ ಊಟ ಕೇಳಿದರೂ, ನಿರ್ಲಕ್ಷ್ಯದಿಂದ ಅವರಿಗೂ ಈ ರೀತಿ ನಾನ್ವೆಜ್ ಸರಬರಾಜು ಮಾಡಿದ್ದಾರೆಂದು ಹಲವರು ಆರೋಪಿಸಿದ್ದಾರೆ.

# 10 ಅಡಿ ಎತ್ತರದ ವಿಚಿತ್ರ ಜೀವಿ

**ದೆಹಲಿ:** ಮನುಷ್ಯರಂತೆ ಕಾಣುವ ಆದರೆ 10 ಅಡಿ ಎತ್ತರದ ಎರಡು ಜೀವಿಗಳು ಬೆಟ್ಟದ ಮೇಲೆ ನಿಂತಿರುವ ವಿಡಿಯೋ ಸಾಮಾಜಿಕ ಜಾತಣದಲ್ಲಿ ವೈರಲ್ ಆಗಿದ್ದು ಈ ದೃಶ್ಯ ಬ್ರೆಜಿಲ್ನ ದ್ವೀಪದಲ್ಲಿ ಕಂಡು ಬಂದಿದ್ದು ಎಂದು ಹೇಳಲಾಗಿದೆ. ಸಾಮಾನ್ಯವಾಗಿ ಯಾರಿಂದಲೂ



ತಲುಪಲಾಗದ ಬೆಟ್ಟದ ಮೇಲೆ ಎರಡು ವಿಚಿತ್ರ ಜೀವಿಗಳು ಪ್ರತ್ಯಕ್ಷವಾಗಿದ್ದು, ಸುಮಾರು 10 ಅಡಿಗಳಷ್ಟು ಎತ್ತರದ , ಮನುಷ್ಯಾಕೃತಿಯನ್ನೇ ಹೋಲುತ್ತಿವೆ. ಬೆಟ್ಟದ ಬಳಿ ಚಾರಣಕ್ಕೆ ಹೋಗಿದ್ದವರು ಈ ವಿಚಿತ್ರ ಜೀವಿಗಳ ವಿಡಿಯೋ ಸೆರೆ ಹಿಡಿದಿದ್ದು. ಬೆಟ್ಟದ ತುದಿ ತಲುಪುವುದು ಸಾಧ್ಯವೇ ಇಲ್ಲ ಎನ್ನುವಷ್ಟರ ಮಟ್ಟಿಗೆ ಹಾದಿ ದುರ್ಗಮವಾಗಿದೆ. ಆದರೂ ಈ ಎರಡು ಜೀವಿಗಳು ಸಲೀಸಾಗಿ ಹಾಗೂ ವೇಗದಲ್ಲಿ ಬೆಟ್ಟವನ್ನು ಇಳಿಯುತ್ತಿದ್ದಾರೆ ಎಂದು ಮಾತನಾಡಿಕೊಂಡಿದ್ದಾರೆ. ಇಲ್ಹಾ ದೋ ಮೇಲ್ ಎಂಬ ದ್ವೀಪದಲ್ಲಿ ಈ ವಿಡಿಯೋ ಸೆರೆ ಹಿಡಿಯಲಾಗಿದ್ದು ಸದ್ಯ ಈ ಬಗ್ಗೆ ಬ್ರೆಜಿಲ್ ಸರ್ಕಾರ ಹೇಳಿಕೆ ಬಿಡುಗಡೆ ಮಾಡಿಲ್ಲ. ಆದರೆ ಸಾಮಾಜಿಕ ಜಾಲತಣದಲ್ಲಿ ಚರ್ಚೆಗೆ ಈ ವಿಡಿಯೊ ಕಾರಣವಾಗಿದೆ, ಸಾಕಷ್ಟು ಮಂದಿ ಇದು ಏಲಿಯನ್ ಎಂದೇ ಕಮೆಂಟ್ ಮಾಡುತ್ತಿದ್ದಾರೆ.

# ಅಫ್ಘಾನಿಸ್ತಾನ: 24 ಗಂಟೆಗಳೊಳಗೆ ಮೂರು ಬಾರಿ ಭೂಕಂಪನ

**ಅಫ್ಘಾನಿಸ್ತಾನ:** ಶುಕ್ರವಾರ ಬೆಳಗ್ಗೆ ಅಫ್ಘಾನಿಸ್ತಾನದ ಹಿಂದುಕುಶ್ ಪ್ರಾಂತ್ಯದ ಮೇಲೆ 4.4 ರಿಕ್ಟರ್ ತೀವ್ರತೆಯಲ್ಲಿ ಅಪ್ಪಳಿಸಿದ ಭೂಕಂಪದ ನಂತರ ಕೆಲವೇ ಗಂಟೆಗಳಲ್ಲಿ ಮತ್ತೊಂದು ಭೂಕಂಪವು ಅಫ್ಘಾನಿಸ್ತಾನವನ್ನು ಅಪ್ಪಳಿಸಿದೆ ಎಂದು indiatoday.in ವರದಿ ಮಾಡಿದೆ.

ರಾಷ್ಟ್ರೀಯ ಭೂಕಂಪ ಶಾಸ್ತ್ರ ಕೇಂದ್ರದ ಪ್ರಕಾರ, ಇತ್ತೀಚಿನ ಭೂಕಂಪನವು ಬೆಳಗ್ಗೆ 9.40ಕ್ಕೆ ಸಂಭವಿಸಿದ್ದು, 180 ಕಿಮೀ ಆಳದಲ್ಲಿ ಭೂಕಂಪವು ಕೇಂದ್ರಿತಗೊಂಡಿತ್ತು. ಇದಕ್ಕೂ ಮುನ್ನ ಬೆಳಗ್ಗೆ 4.51 ನಿಮಿಷಕ್ಕೆ ಮೊದಲ ಭೂಕಂಪನವು ಸಂಭವಿಸಿತು. ಭೂಕಂಪನವು 17 ಕಿಮೀ ಆಳದಲ್ಲಿ ಕೇಂದ್ರೀಕೃತಗೊಂಡಿತ್ತು. ಇದುವರೆಗೂ ಯಾವುದೇ ಹಾನಿ ಅಥವಾ ಗಾಯಾಳುಗಳ ವರದಿಯಾಗಿಲ್ಲ.

ನಿನ್ನೆ 6.1 ರಿಕ್ಟರ್ ತೀವ್ರತೆ ಹೊಂದಿದ್ದ ಭೂಕಂಪವು ಇದೇ ಪ್ರಾಂತ್ಯದಲ್ಲಿ ಮಧ್ಯಾಹ್ನ 2.50ರ ವೇಳೆ ಸಂಭವಿಸಿತ್ತು. ಈ ಭೂಕಂಪದ ತೀವ್ರತೆ ಎಷ್ಟಿತ್ತೆಂದರೆ, ದಿಲ್ಲಿ ಮತ್ತು ಉತ್ತರ ಭಾರತದ ಹಲವು ಭಾಗಗಳು ಹಾಗೂ ಪಾಕಿಸ್ತಾನದ ಲಾಹೋರ್‌ನಲ್ಲಿ ಇದರ ಅನುಭವವಾಗಿತ್ತು. ಪೂಂಚ್ ಸೇರಿದಂತೆ ಜಮ್ಮು ಮತ್ತು ಕಾಶ್ಮೀರ ಭಾಗದಲ್ಲೂ ಭೂಮಿ ನಡುಗಿತ್ತು.



# ಶವವಾಗಿ ಪತ್ತೆಯಾದ ಪೋರ್ನ್ ಸ್ಟಾರ್ ಥೈನಾ



**ದೆಹಲಿ:** ಪೆರುವಿನ ಬ್ಲೂಫಿಲ್ಮ್ ನಟಿ ಥೈನಾ ಫೀಲ್ಡ್ಸ್ (24) ಶವವಾಗಿ ಪತ್ತೆಯಾಗಿದ್ದಾಳೆ. ಟ್ರುಜಿಲ್ಲೋದಲ್ಲಿರುವ ಮನೆಯಲ್ಲಿ ಥೈನಾ ಶವವಾಗಿ ಪತ್ತೆಯಾಗಿದ್ದಾಳೆ. ಈ ನಟಿ ಒಂದು ತಿಂಗಳ ಹಿಂದೆಯಷ್ಟೇ, ಹೇಳಿಕೊಂದನ್ನು ನೀಡಿ ಸುದ್ದಿಯಾಗಿದ್ದಳು. ಇದೀಗ ಆಕೆಯ ಶವ ಪತ್ತೆಯಾಗಿದ್ದು, ಸಾವಿಗೆ ಕಾರಣವೇನೆಂದು ತಿಳಿದು ಬಂದಿಲ್ಲ. ಒಂದು ತಿಂಗಳ ಹಿಂದಷ್ಟೇ ಥೈನಾ, ನಾನು ಬ್ಲೂ ಫಿಲ್ಮ್‌ನಲ್ಲಿ ನಟಿಸುವಾಗ ಸಾಕಷ್ಟು ಲೈಂಗಿಕ ಸಂಕಷ್ಟಗಳನ್ನು ಅನುಭವಿಸಿದ್ದೇವೆ. ನಮ್ಮನ್ನನು ಬಳಸಿಕೊಂಡು ಸಿನಿಮಾ ಮಾಡುವವರು, ನಾವು ಅವರಿಗೆ ಬೇಕಾದ ಕೆಲಸವನ್ನೆಲ್ಲ ಮಾಡಬೇಕೆಂದು ಬಯಸುತ್ತಾರೆ. ಅವರ ಮನಬಂದಂತೆ ನಮ್ಮನ್ನು ಬಳಸಿಕೊಳ್ಳುತ್ತಾರೆ. ನಾನು ಕೂಡ ಈ ಫೀಲ್ಡ್‌ನಲ್ಲಿ ಬಂದಾಗ, ಸಾಕಷ್ಟು ಕಷ್ಟಗಳನ್ನು ಅನುಭವಿಸಿದ್ದೆ ಎಂದು ಥೈನಾ ಹೇಳಿಕೆ ನೀಡಿದ್ದಳು. ಆಕೆಯ ಸ್ನೇಹಿತ ಅಲೆಜಾಂಡ್ರಾ, ಈ ಸುದ್ದಿಯನ್ನು ಮಾಧ್ಯಮಗಳಿಗೆ ಹೇಳಿದ್ದು, ಆಕೆಯ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸಿದ್ದಾನೆ.

# ಮಾಲ್ಡೀವ್ಸ್‌ನ ಆಂತರಿಕ ವಿಷಯದಲ್ಲಿ ಹಸ್ತಕ್ಷೇಪ ಸಹಿಸಲ್ಲ: ಚೀನಾ



**ಚೀನಾ:** ಮಾಲ್ಡೀವ್ಸ್ ಆಂತರಿಕ ವಿಷಯದಲ್ಲಿ ಬೇರೆ ದೇಶ ಹಸ್ತಕ್ಷೇಪ ಮಾಡುವುದನ್ನು ಸಹಿಸುವುದಿಲ್ಲ ಎಂದು ಚೀನಾ ಹೇಳಿದೆ. ಮಾಲ್ಡೀವ್ಸ್‌ನ ಭಾರತದ ಸೇನಾ ನೆಲೆ ತೆರವು ಕುರಿತಾಗಿ ಭಾರತ ಮತ್ತು ಮಾಲ್ಡೀವ್ಸ್ ನಡುವೆ ಬಿಕ್ಕಟ್ಟು ತಲೆದೋರಿತ್ತು. ಇದರ ನಡುವೆಯೇ ಉಭಯ ದೇಶಗಳ ನಡುವೆ ಮತ್ತೊಂದು ರಾಜತಾಂತ್ರಿಕ ಸಮಸ್ಯೆ ತಲೆದೋರಿದ್ದು, ಇದರ ಬೆನ್ನಲ್ಲೇ ಚೀನಾ ಎಚ್ಚರಿಕೆ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸಿದ ಸಚಿವರನ್ನು ಅಮಾನತುಗೊಳಿಸಿದ ಬಳಿಕ ಮಾಲ್ಡೀವ್ಸ್ ಅಧ್ಯಕ್ಷ ಮೊಹಮ್ಮದ್ ಮುಯಿಜು ಚೀನಾಗೆ ಭೇಟಿ ನೀಡಿದ್ದರು. ಈ ವೇಳೆ ಚೀನಾ ಅಧ್ಯಕ್ಷ ಕ್ಸಿ ಜಿನ್ಪಿಂಗ್ ಹಾಗೂ ಮುಯಿಜು 20 ಒಪ್ಪಂದಗಳಿಗೆ ಸಹಿ ಹಾಕಿದ್ದಾರೆ. ಬಳಿಕ ಹೇಳಿಕೆ ಬಿಡುಗಡೆ ಮಾಡಿರುವ ಚೀನಾ ಸರ್ಕಾರ, 'ಮಾಲ್ಡೀವ್ಸ್ ತನ್ನ ರಾಷ್ಟ್ರೀಯ ಸಾರ್ವಭೌಮತೆ, ಸ್ವಾತಂತ್ರ್ಯ ಮತ್ತು ರಾಷ್ಟ್ರೀಯ ಘನತೆಯನ್ನು ಕಾಪಾಡಿಕೊಳ್ಳಲು ಚೀನಾ ನೆರವು ನೀಡಲಿದೆ. ಅಲ್ಲದೇ ಇತರ ದೇಶಗಳು ಮಾಲ್ಡೀವ್ಸ್‌ನ ಆಂತರಿಕ ವಿಷಯದಲ್ಲಿ ಹಸ್ತಕ್ಷೇಪ ಮಾಡುವುದುನ್ನು ಸಹಿಸುವುದಿಲ್ಲ' ಎಂದು ಹೇಳಿದೆ. ಚೀನಾ ಪರ ನಿಲುವು ಹೊಂದಿರುವ ಮುಯಿಜು ಮಾಲ್ಡೀವ್ಸ್ ಅಧ್ಯಕ್ಷರಾದ ಬಳಿಕ ಚೀನಾದೊಂದಿಗೆ ಸಂಪರ್ಕ ಮತ್ತಷ್ಟು ಹೆಚ್ಚಾಗಿದ್ದು, ಮಾಲ್ಡೀವ್ಸ್ ಅಭಿವೃದ್ಧಿಗೆ ಎಲ್ಲಾ ರೀತಿಯ ಬೆಂಬಲವನ್ನು ಚೀನಾ ಘೋಷಿಸಿದೆ.

# ಗುವಾಹಟಿಗೆ ತೆರಳುತ್ತಿದ್ದ ಇಂಡಿಗೋ ವಿಮಾನ ಢಾಕಾದಲ್ಲಿ ತುರ್ತು ಭೂಸ್ಪರ್ಶ

**ನವದೆಹಲಿ:** ಮುಂಬೈನಿಂದ ಗುವಾಹಟಿಗೆ ತೆರಳುತ್ತಿದ್ದ ಇಂಡಿಗೋ ವಿಮಾನ ಶನಿವಾರ ಢಾಕಾದ ಹಜರತ್ ಶಹಜಲಾಲ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ತುರ್ತು ಭೂಸ್ಪರ್ಶ ಮಾಡಿದೆ.

ದಟ್ಟ ಮಂಜಿನಿಂದಾಗಿ ಗುವಾಹಟಿ ವಿಮಾನ ನಿಲ್ದಾಣದಲ್ಲಿ ವಿಮಾನ ಲ್ಯಾಂಡಿಂಗ್ ಮಾಡಲು ಸಾಧ್ಯವಾಗದ ಕಾರಣ, ವಿಮಾನವನ್ನು ಬಾಂಗ್ಲಾದೇಶದ ರಾಜಧಾನಿ ಢಾಕಾಗೆ ಅನಿರೀಕ್ಷಿತ ಡೈವರ್ಟ್ ಮಾಡಲಾಗಿದೆ.

ಇಂಡಿಗೋ 6ಇ–123 ವಿಮಾನ, ಇಂದು ಬೆಳಗ್ಗೆ 4 ಗಂಟೆಗೆ ಢಾಕಾವನ್ನು ತಲುಪಿತು. ಅಲ್ಲಿ ಪ್ರಯಾಣಿಕರು ಹೆಚ್ಚಿನ ಸೂಚನೆಗಳಿಗಾಗಿ ಕಾಯುತ್ತಿದ್ದರು. ವಿಮಾನಯಾನ ಸಂಸ್ಥೆಯು ಗುವಾಹಟಿ ವಿಮಾನ ನಿಲ್ದಾಣದಲ್ಲಿ ಕಡಿಮೆ ಗೋಚರತೆಯು ಡೈವರ್ಟ್ ಮಾಡಲು ಪ್ರಾಥಮಿಕ ಕಾರಣವೆಂದು ಉಲ್ಲೇಖಿಸಿದೆ.

''ಕೆಟ್ಟ ಹವಾಮಾನದ ಕಾರಣ ಮುಂಬೈನಿಂದ ಗುವಾಹಟಿಗೆ ಆಗಮಿಸುತ್ತಿದ್ದ ಇಂಡಿಗೋ ಫ್ಲೈಟ್ 6ಇ 5319 ಅನ್ನು ಬಾಂಗ್ಲಾದೇಶದ ಢಾಕಾಕ್ಕೆ ತಿರುಗಿಸಲಾಯಿತು. ಢಾಕಾದಿಂದ ಗುವಾಹಟಿಗೆ ವಿಮಾನ ನಿರ್ವಹಿಸಲು ಪರ್ಯಾಯ ಸಿಬ್ಬಂದಿಯ ವ್ಯವಸ್ಥೆ ಮಾಡಲಾಗುತ್ತಿದೆ. ಪ್ರಯಾಣಿಕರಿಗೆ ಬದಲಾವಣೆಯ ಬಗ್ಗೆ ಮಾಹಿತಿ ನೀಡಲಾಯಿತು ಮತ್ತು ವಿಮಾನದಲ್ಲಿ ಉಪಹಾರ ನೀಡಲಾಯಿತು. ಅನಾನುಕೂಲತೆಗಾಗಿ ವಿಷಾದಿಸುತ್ತೇವೆ '' ಎಂದು ಏರ್‌ಲೈನ್ ವಕ್ತಾರರು ತಿಳಿಸಿದ್ದಾರೆ.




# ಪಾಕಿಸ್ತಾನಕ್ಕೆ ಹೊಂದಿಕೊಂಡಿರುವ ಪಂಜಾಬ್ ಗಡಿಯಲ್ಲಿ ಕ್ಯಾಮೆರಾ!

**ಪಂಜಾಬ್:** ಪಂಜಾಬ್‌ನ ಗಡಿ ಗ್ರಾಮಗಳಿಗೆ ಪಾಕಿಸ್ತಾನ ನಿರಂತರವಾಗಿ ಡ್ರಗ್ಸ್ ಮತ್ತು ಶಸ್ತ್ರಾಸ್ತ್ರಗಳನ್ನು ರವಾನಿಸುತ್ತಿದೆ ಎನ್ನುವ ಆರೋಪಗಳು ಕೇಳಿಬರುತ್ತಿರುವ ಹಿನ್ನೆಲೆಯಲ್ಲಿ ಪಾಕಿಸ್ತಾನಕ್ಕೆ ಹೊಂದಿಕೊಂಡಿರುವ ಪಂಜಾಬ್ ಗಡಿಯಲ್ಲಿ 500ಕ್ಕೂ ಅಧಿಕ ಕ್ಯಾಮೆರಾಗಳನ್ನು ಅಳವಡಿಸಲಾಗುತ್ತಿದೆ.



ಪಂಜಾಬ್ ಪೊಲೀಸರು ಇದೀಗ ಗಡಿ ಪ್ರದೇಶಗಳಲ್ಲಿ ತನ್ನದೇ ಆದ ಜಾಲವನ್ನು ಬಲಪಡಿಸಲು ಆರಂಭಿಸಿದ್ದಾರೆ. ಅಮೃತಸರ, ಫಿರೋಜ್ಪುರ ಮತ್ತು ತರ್ನ್ ತರಣ್ ಗಡಿ ಗ್ರಾಮಗಳ 575 ಸ್ಥಳಗಳಲ್ಲಿ ಈಗ ಕ್ಯಾಮೆರಾಗಳನ್ನು ಅಳವಡಿಸಲಾಗುವುದು.

ಈಗಾಗಲೇ ಗ್ರಾಮ ರಕ್ಷಣಾ ಸಮಿತಿಗಳು ಕಾರ್ಯನಿರ್ವಹಿಸುತ್ತಿವೆ. ಗಡಿ ಭಾಗಗಳಿಗೆ ಸಂಬಂಧಿಸಿದ ಯೋಜನೆಗಳಿಗೆ 20 ಕೋಟಿ ರೂ. ತಗುಲಲಿದೆ, ಈ ನಿಟ್ಟಿನಲ್ಲಿ ಪೊಲೀಸರು ಕಾರ್ಯಪ್ರವೃತ್ತರಾಗಿದ್ದಾರೆ.

ಈ ಕ್ಯಾಮೆರಾಗಳಲ್ಲಿ ಇಂಟರ್ನೆಟ್ ಸೌಲಭ್ಯವೂ ಇರಲಿದೆ. ಈ ಕ್ಯಾಮೆರಾಗಳನ್ನು ರೆಕಾರ್ಡ್ ಮಾಡಲು ವಿಶೇಷ ನಿಯಂತ್ರಣ ಕೊಠಡಿ ನೋಡಲ್ ಅಧಿಕಾರಿಗಳನ್ನು ಸಹ ನಿಯೋಜಿಸಲಾಗುವುದು.

ಈ ಬಾರಿ ಅಳವಡಿಸಿರುವ ಕ್ಯಾಮೆರಾಗಳು ಸಂಪೂರ್ಣ ಹೈಟೆಕ್ ಆಗಿವೆ. ಈ ಕ್ಯಾಮೆರಾಗಳು ಮುಖ ಪತ್ತೆ ತಂತ್ರಾಂಶ ಮತ್ತು ಸ್ವಯಂಚಾಲಿತ ನಂಬರ್ ಪ್ಲೇಟ್ ಗುರುತಿಸುವಿಕೆಯ ಸೌಲಭ್ಯವನ್ನೂ ಹೊಂದಿವೆ. ಮಾತ್ರವಲ್ಲದೆ ವಾಹನದಲ್ಲಿ ಕುಳಿತ ವ್ಯಕ್ತಿಯ ಮುಖವನ್ನು ಗುರುತಿಸಲು ಸಾಧ್ಯವಾಗುತ್ತದೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

ಸಿನಿ ಕಾರ್ನರ್







# ರಾಮ ಮಂದಿರ ಉದ್ಘಾಟನೆ ದಿನವೇ ನಟ ಧ್ರುವ ಪುತ್ರಿಗೆ ನಾಮಕರಣ

ಜನವರಿ 22ರ ದಿನಕ್ಕಾಗಿ ಇಡೀ ದೇಶಕ್ಕೆ ದೇಶವೇ ಕಾಯುತ್ತಿದೆ. ಅಂದು ಅಯೋಧ್ಯೆಯಲ್ಲಿ ರಾಮ ಮಂದಿರ ಉದ್ಘಾಟನೆ ನಡೆಯುತ್ತಿದೆ. ಈ ಕಾರ್ಯಕ್ರಮದಲ್ಲಿ ಭಾಗಿ ಆಗುವುದಕ್ಕಾಗಿ ಹಲವರು ತುದಿಗಾಲಲ್ಲಿ ನಿಂತಿದ್ದಾರೆ. ಕನ್ನಡ ಸಿನಿಮಾ ರಂಗದಿಂದಲೂ ಹಲವಾರು ಸಿಲೆಬ್ರಿಟಿಗಳು ಭಾಗಿ ಆಗುತ್ತಿದ್ದಾರೆ. ಈ ದಿನವೇ ನಟ ಧ್ರುವ ಸರ್ಜಾ ತಮ್ಮ ಪುತ್ರಿಗೆ ನಾಮಕರಣ ಮಾಡಲಿದ್ದಾರೆ.

ಧ್ರುವ ಸರ್ಜಾ ಅಂಡ್ ಫ್ಯಾಮಿಲಿ ಆಂಜನೇಯನ ಭಕ್ತರು. ಆಂಜನೇಯ ಗುಡಿಯನ್ನೇ ಈ ಕುಟುಂಬ ನಿರ್ಮಾಣ ಮಾಡಿದೆ. ಧ್ರುವ ಸಿನಿಮಾದಲ್ಲಿ ಹನುಮನ ಕುರಿತಾಗಿ ಸನ್ನಿವೇಶವೋ, ಹಾಡೋ ಇದ್ದೇ ಇರುತ್ತದೆ. ಹನುಮನ ಉಸಿರಾಗಿರುವ ರಾಮನ ಮಂದಿರ ಉದ್ಘಾಟನೆ ದಿನದಂದು ತಮ್ಮ ಪುತ್ರಿಗೆ ನಾಮಕರಣ ಮಾಡಲಿದ್ದಾರಂತೆ ಧ್ರುವ.

ಧ್ರುವ ಸರ್ಜಾ ಮಗಳಿಗೆ ನಾಮಕರಣ ಮಾಡುತ್ತಿದ್ದರೆ, ಅನೇಕ ಮಹಿಳೆಯರು ಅಂದೇ ಹೆರಿಗೆ ಮಾಡಿಸುವಂತೆ ವೈದ್ಯರ ದುಂಬಾಲು ಬಿದ್ದಿರುವ ಘಟನೆಗಳು ನಡೆದಿವೆ. ರಾಮ ಮಂದಿರ ಉದ್ಘಾಟನೆ ದಿನವೇ ಹೆರಿಗೆ ಮಾಡಿಸಿಕೊಳ್ಳಲು ಹಲವರು ತಯಾರಿ ಕೂಡ ಮಾಡಿಕೊಂಡಿದ್ದಾರೆ. ಅಷ್ಟರ ಮಟ್ಟಿಗೆ ರಾಮ ಜನರ ಮನಸ್ಸಲ್ಲಿ ಬೇರೂರಿದ್ದಾನೆ.



ಅನ್ನಪೂರ್ಣಿ ಸಿನಿಮಾ

# ನಯನತಾರಾ ವಿರುದ್ಧ ಪ್ರಕರಣ ದಾಖಲು



ನಯನತಾರಾ ನಟನೆಯ ಅನ್ನಪೂರ್ಣಿ ಸಿನಿಮಾದಲ್ಲಿ ಶ್ರೀರಾಮನಿಗೆ ಹಾಗೂ ಹಿಂದೂ ಧರ್ಮಕ್ಕೆ ಧಕ್ಕೆ ಆಗುವಂತಹ ಸನ್ನಿವೇಶಗಳ ಇವೆ ಎನ್ನುವ ಕಾರಣಕ್ಕಾಗಿ ಹಲವಾರು ಜನರು ಆಕ್ರೋಶ ವ್ಯಕ್ತ ಪಡಿಸಿದ್ದರು. ಇದೀಗ ಚಿತ್ರದ ನಿರ್ದೇಶಕ, ನಿರ್ಮಾಪಕ ಹಾಗೂ ನಟಿ ನಯನತಾರಾ ಅವರ ಮೇಲೂ ಪ್ರಕರಣ ದಾಖಲಾಗಿದೆ. ಮಧ್ಯ ಪ್ರದೇಶದ ಜಬಲ್ ಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ವಿವಾದ ಭುಗಿಲೇಳುತ್ತಿದ್ದಂತೆಯೇ 'ಅನ್ನಪೂರ್ಣಿ' ಸಿನಿಮಾವನ್ನು ಕೊನೆಗೂ ನೆಟ್ ಫಿಕ್ಸ್ ತೆಗೆದು ಹಾಕಿದೆ. ಈ ಸಿನಿಮಾ ಬಗ್ಗೆ ಸಾಕಷ್ಟು ಟೀಕೆಗಳು ಕೇಳಿ ಬಂದಿದ್ದವು. ಅಲ್ಲದೇ, ಸಿನಿಮಾ ಬಗ್ಗೆ ದೂರು ಕೂಡ ದಾಖಲಾಗಿತ್ತು. ಹಿಂದೂ ಭಾವನೆಗಳಿಗೆ ಧಕ್ಕೆ ಮಾಡಲಾಗಿದೆ ಎನ್ನುವ ಕಾರಣಕ್ಕಾಗಿ ಚಿತ್ರದ ವಿರುದ್ಧ ಪ್ರತಿಭಟನೆ ಕೂಡ ಮಾಡಲಾಗಿತ್ತು. ನಾನಾ ಕಡೆಗಳಲ್ಲಿ ಅನ್ನಪೂರ್ಣಿ ಸಿನಿಮಾ ಬಗ್ಗೆ ದೂರುಗಳು ದಾಖಲಾಗುತ್ತಿದ್ದಂತೆಯೇ ಒಟಿಟಿಯಿಂದಲೇ ಚಿತ್ರವನ್ನು ತೆಗೆದು ಹಾಕಲಾಗಿದೆ. ಈ ಚಿತ್ರದಲ್ಲಿ ಶ್ರೀರಾಮನನ್ನು ಮಾಂಸಾಹಾರಿಯಾಗಿ ತೋರಿಸಲಾಗಿತ್ತು. ಇಂತಹ ವಿವಾದಿತ ದೃಶ್ಯಗಳನ್ನು ತೆಗೆದು ಹಾಕುವವರೆಗೂ ಅನ್ನಪೂರ್ಣಿ ಒಟಿಟಿಯಲ್ಲಿ ಸಿಗಲಾರದು. ಲೇಡಿ ಸೂಪರ್ ಸ್ಟಾರ್ ನಯನತಾರಾಗೆ ಇದು 75ನೇ ಸಿನಿಮಾ. ಈ ಸಿನಿಮಾದಲ್ಲಿ ನಯನತಾರಾ ಹೊಸ ಬಗೆಯ ಪಾತ್ರ ಮಾಡಿದ್ದಾರೆ. ಅವರ ಗೆಟಪ್ ಕಂಡು ಅಭಿಮಾನಿಗಳು ಸಂಭ್ರಮಿಸಿದ್ದರು. ಪಕ್ಕಾ ಸಂಪ್ರದಾಯಸ್ಥ ಕುಟುಂಬದ ಹುಡುಗಿಯಾಗಿ ನಯನತಾರಾ ಈ ಸಿನಿಮಾದಲ್ಲಿ ಕಾಣಿಸಿಕೊಂಡಿದ್ದಾರೆ. ಡಿಸೆಂಬರ್‌ನಲ್ಲಿ 'ಅನ್ನಪೂರ್ಣಿ' ಎಂಬ ಸಿನಿಮಾ ರಿಲೀಸ್ ಆಗಿತ್ತು. ಒಟಿಟಿಯಲ್ಲಿ ರಿಲೀಸ್ ಆಗಿ ಪ್ರೇಕ್ಷಕರ ಮೆಚ್ಚುಗೆ ಪಡೆದಿತ್ತು. ಚಿತ್ರದಲ್ಲಿ ನಯನತಾರಾ ತಂದೆ ಪಾತ್ರದಲ್ಲಿ ಕನ್ನಡದ ನಟ ಅಚ್ಯುತ್ ಕುಮಾರ್ ನಟಿಸಿದ್ದರು. ಅವರ ಮನೋಜ್ಞ ನಟನೆಗೆ ನಯನತಾರಾ ಮೆಚ್ಚುಗೆ ಸೂಚಿಸಿದ್ದರು.

# ನಿರಂಜನ್ ಶೆಟ್ಟಿ ಅಭಿನಯದ '31 DAYS' ಚಿತ್ರದ ಫಸ್ಟ್ ಲುಕ್ ರಿಲೀಸ್

ಜಾಲಿಡೇಸ್ ಚಿತ್ರದ ಖ್ಯಾತಿಯ ನಿರಂಜನ್ ಶೆಟ್ಟಿ ನಾಯಕನಾಗಿ ನಟಿಸುತ್ತಿರುವ '31 DAYS' ಚಿತ್ರದ ಫಸ್ಟ್ ಲುಕ್ ಇತ್ತೀಚಿಗೆ ಬೆಂಗಳೂರಿನ ಚಿತ್ರಕಲಾ ಪರಿಷತ್ ಆವರಣದಲ್ಲಿ ನಡೆಯುವ ಚಿತ್ರಸಂತೆಯಲ್ಲಿ ಅನಾವರಣವಾಯಿತು. ಚಿತ್ರಕ್ಕೆ 'ಹೈ ವೋಲ್ಟೇಜ್ ಲವ್ ಸ್ಟೋರಿ' ಎಂಬ ಅಡಿಬರಹವಿದೆ. ಇದೊಂದು ಪ್ರೇಮ ಕಥಾನಕವಾಗಿದ್ದು, ಚಿತ್ರಸಂತೆಗೆ ಆಗಮಿಸಿದ್ದ 46 ವರ್ಷಗಳ ಹಿಂದೆ ಪ್ರೀತಿಸಿ ಮದುವೆಯಾಗಿರುವ ದಂಪತಿ ಫಸ್ಟ್ ಲುಕ್ ಬಿಡುಗಡೆ ಮಾಡಿದ್ದು ವಿಶೇಷ. ಶೀರ್ಷಿಕೆಯನ್ನು ಯುವ ಪ್ರೇಮಿಗಳು ಬಿಡುಗಡೆ ಮಾಡಿದರು. ಅಲ್ಲಿ ನೆರದಿದ್ದ ಸಹಸ್ರಾರು ಕಲಾಸಕ್ತರು ಚಿತ್ರದ ವಿನೂತನ ಫಸ್ಟ್ ಲುಕ್‌ಗೆ ಫಿದಾ ಆದರು. ನಾನು ಸಹ ಚಿತ್ರಕಲಾ ಪರಿಷತ್ ನ ವಿದ್ಯಾರ್ಥಿಯಾಗಿದ್ದು, ಚಿತ್ರಸಂತೆಯಲ್ಲಿ ನಮ್ಮ ಚಿತ್ರದ ಫಸ್ಟ್ ಲುಕ್ ಹಾಗೂ ಶೀರ್ಷಿಕೆ ಬಿಡುಗಡೆಯಾಗಿದ್ದು ಖುಷಿಯಾಗಿದೆ ಎನ್ನುತ್ತಾರೆ ನಾಯಕ ನಿರಂಜನ್ ಶೆಟ್ಟಿ. Nstar ಬ್ಯಾನರ್ ನಲ್ಲಿ ನಾಗವೇಣಿ. ಓ. ಶೆಟ್ಟಿ ಅವರು ನಿರ್ಮಿಸುತ್ತಿರುವ ಈ ಚಿತ್ರವನ್ನು ರಾಜ ರವಿಕುಮಾರ್ ನಿರ್ದೇಶಿಸುತ್ತಿದ್ದಾರೆ. ಚಿತ್ರದ ಚಿತ್ರೀಕರಣ ಮುಕ್ತಾಯ ಹಂತ ತಲುಪಿದೆ. ಹೆಬ್ರಿ, ಆಗುಂಬೆ, ತೀರ್ಥಹಳ್ಳಿ ಹಾಗೂ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆದಿದೆ. ನಿರಂಜನ್ ಶೆಟ್ಟಿ ಅವರು ನಾಯಕನಾಗಿ ಈ ಚಿತ್ರದ ನಾಯಕನಾಗಿ ಅಭಿನಯಿಸುತ್ತಿದ್ದು ಅವರಿಗೆ ನಾಯಕಿಯಾಗಿ ಪ್ರಜ್ವಲಿ ಸುವರ್ಣ ನಟಿಸುತ್ತಿದ್ದಾರೆ. ಈ ಚಿತ್ರ ಪ್ರಸ್ತುತ ಜನರೇಷನ್ ನಲ್ಲಿ ನಡೆಯುವ ಒಂದು ಸುಂದರ love story ಆಗಿದ್ದು 31 ದಿನಗಳಲ್ಲಿ ನಡೆಯುವ high voltage love story ಇದಾಗಿದೆ. 4 ಹಾಡುಗಳಿರುವ ಈ ಚಿತ್ರಕ್ಕೆ ವಿ. ಮನೋಹರ್ ರವರ ಸಂಗೀತ ನಿರ್ದೇಶನವಿದೆ. ಇದು ವಿ.ಮನೋಹರ್ ಅವರ ಸಂಗೀತ ನಿರ್ದೇಶನದ 150 ನೇ ಚಿತ್ರವೂ ಹೌದು. ವಿನುತ್. ವಿ ಛಾಯಾಗ್ರಹಣ, ಧನು ಕುಮಾರ್ ನೃತ್ಯ ನಿರ್ದೇಶನ ಹಾಗೂ ಸನತ್ ರವರ ಸಂಕಲನ ಈ ಚಿತ್ರಕ್ಕಿದೆ.

ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಗೆ ಭಾರತ ತಂಡ ಪ್ರಕಟ

# ಯುಪಿ ಮೂಲದ ಹೊಸ ಆಟಗಾರನಿಗೆ ಚಾನ್ಸ್






**ನವದೆಹಲಿ:** ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಸರಣಿಯ ಮೊದಲ ಎರಡು ಪಂದ್ಯಗಳಿಗೆ ಭಾರತದ 16 ಸದಸ್ಯರ ತಂಡವನ್ನು ಬಿಸಿಸಿಐ ಪ್ರಕಟಿಸಿದೆ. ಗಾಯದಿಂದ ಚೇತರಿಕೆ ಕಾಣುತ್ತಿರುವ ವೇಗಿ ಮೊಹಮ್ಮದ್ ಶಮಿ ಮತ್ತು ಆರಂಭಿಕ ಆಟಗಾರ ಋತುರಾಜ್ ಗಾಯಕ್ವಾಡ್ ಅವಕಾಶ ಪಡೆದಿಲ್ಲ. ಇಶಾನ್ ಕಿಶನ್ ಬದಲಿಗೆ ವಿಕೆಟ್ ಕೀಪರ್ ಆಗಿ ಹೊಸ ಆಟಗಾರನಿಗೆ ಸ್ಥಾನ ನೀಡಲಾಗಿದೆ.

ಇಶಾನ್ ಕಿಶನ್ ಅನುಪಸ್ಥಿತಿಯಲ್ಲಿ ಉತ್ತರ ಪ್ರದೇಶದ ಧ್ರುವ್ ಜುರೆಲ್‌ಗೆ ಟೀಂ ಇಂಡಿಯಾದಲ್ಲಿ ಅವಕಾಶ ಸಿಕ್ಕಿದೆ. ಜುರೆಲ್ ಇದೇ ಮೊದಲ ಬಾರಿಗೆ ಭಾರತ ತಂಡದಲ್ಲಿ ಅವಕಾಶ ಪಡೆದುಕೊಂಡಿದ್ದು, ಟೀಂ ಇಂಡಿಯಾದ ಮೂವರು ವಿಕೆಟ್ ಕೀಪರ್‌ಗಳಲ್ಲಿ ಒಬ್ಬರಾಗಿದ್ದಾರೆ. ಕೆ.ಎಲ್ ರಾಹುಲ್, ಕೆಎಸ್ ಭರತ್ ದಕ್ಷಿಣ ಆಫ್ರಿಕಾ ಸರಣಿಗೂ ವಿಕೆಟ್ ಕೀಪರ್ ಆಗಿದ್ದರು.

22 ವರ್ಷದ ಧ್ರುವ್ ಜುರೆಲ್ 2023ರ ಇಂಡಿಯನ್ ಪ್ರೀಮಿಯರ್ ಲೀಗ್ ಋತುವಿನಲ್ಲಿ ರಾಜಸ್ಥಾನ ರಾಯಲ್ಸ್ ತಂಡದ ಪರ ಅಬ್ಬರದ ಇನ್ನಿಂಗ್ಸ್‌ಗಳನ್ನು ಆಡುವ ಮೂಲಕ ಕ್ರಿಕೆಟ್ ನಲ್ಲಿ ಸಂಚಲನ ಸೃಷ್ಟಿಸಿದ್ದರು. ಭಾರತದ 2020ರ ಅಂಡರ್-19 ವಿಶ್ವಕಪ್ ತಂಡದ ಭಾಗವಾಗಿದ್ದರು. ಅಂದು ಭಾರತ ಫೈನಲ್ ತಲುಪಲು ಪ್ರಮುಖ ಪಾತ್ರವಹಿಸಿದ್ದರು. ಬಳಿಕ ತಂಡ ಫೈನಲ್‌ನಲ್ಲಿ ಬಾಂಗ್ಲಾದೇಶ ವಿರುದ್ಧ ಸೋತಿತ್ತು.

ಜುರೆಲ್ ಫೆಬ್ರವರಿ 2022ರಲ್ಲಿ ಉತ್ತರ ಪ್ರದೇಶ ತಂಡದಿಂದ ಪ್ರಥಮ ದರ್ಜೆ ಕ್ರಿಕೆಟ್‌ಗೆ ಪಾದಾರ್ಪಣೆ ಮಾಡಿದ್ದರು. ಒಟ್ಟು 15 ಪಂದ್ಯಗಳಲ್ಲಿ 46.47ರ ಸರಾಸರಿಯಲ್ಲಿ 790 ರನ್ ಗಳಿಸಿದ್ದಾರೆ. ಒಂದು ಶತಕವನ್ನೂ ಸಿಡಿಸಿದ್ದಾರೆ. ಅವರು ಕಳೆದ ತಿಂಗಳು ದಕ್ಷಿಣ ಆಫ್ರಿಕಾಕ್ಕೆ ಪ್ರವಾಸ ಕೈಗೊಂಡಿದ್ದ ಭಾರತ-ಎ ತಂಡದ ಭಾಗವಾಗಿದ್ದರು.

ಇಶಾನ್ ಕಿಶನ್‌ರನ್ನು ಬಿಸಿಸಿಐ ಕೈಬಿಡಲು ಕಾರಣವೇನು?

ದಕ್ಷಿಣ ಆಫ್ರಿಕಾ ಟೆಸ್ಟ್ ಸರಣಿಗೂ ಮುನ್ನ ಆಯಾಸವಾಗಿದೆ. ಕುಟುಂಬ ಸದಸ್ಯರೊಂದಿಗೆ ವಿಶ್ರಾಂತಿ ಪಡೆಯುವುದಾಗಿ ಹೇಳಿ ದುಬೈನಲ್ಲಿ ಪಾರ್ಟಿಗೆ ಹೋಗಿದ್ದ ಇಶಾನ್ ಬಿಸಿಸಿಐ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ಇದೇ ಕಾರಣಕ್ಕೆ ಅಫ್ಘಾನಿಸ್ತಾನ ಟಿ20 ಸರಣಿಗೆ ಅವರನ್ನು ಆಯ್ಕೆ ಮಾಡಿರಲಿಲ್ಲ. ಇದೀಗ ಇಂಗ್ಲೆಂಡ್ ಟೆಸ್ಟ್ ಸರಣಿಯಿಂದಲೂ ಕೈಬಿಡಲಾಗಿದೆ. ಅವರು ದಕ್ಷಿಣ ಆಫ್ರಿಕಾ ಟೆಸ್ಟ್ ಸರಣಿಗೆ ಬ್ಯಾಕಪ್ ವಿಕೆಟ್ ಕೀಪರ್ ಆಗಿ ಆಯ್ಕೆಯಾಗಿದ್ದರು. ಬಳಿಕ ಭರತ್‌ಗೆ ಅವಕಾಶ ನೀಡಲಾಗಿತ್ತು.

ಮೊದಲ 2 ಟೆಸ್ಟ್ ಪಂದ್ಯಗಳಿಗೆ ಭಾರತ ತಂಡ:

ರೋಹಿತ್ ಶರ್ಮಾ (ನಾಯಕ), ಶುಭಮನ್ ಗಿಲ್, ಯಶಸ್ವಿ ಜೈಸ್ವಾಲ್, ವಿರಾಟ್ ಕೊಹ್ಲಿ, ಶ್ರೇಯಸ್ ಅಯ್ಯರ್, ಕೆ.ಎಲ್ ರಾಹುಲ್ (ವಿಕೆಟ್ ಕೀಪರ್), ಕೆ.ಎಸ್ ಭರತ್ (ವಿಕೆಟ್ ಕೀಪರ್), ಧ್ರುವ್ ಜುರೆಲ್ (ವಿಕೆಟ್ ಕೀಪರ್), ರವಿಚಂದ್ರನ್ ಅಶ್ವಿನ್, ರವೀಂದ್ರ ಜಡೇಜಾ, ಅಕ್ಷರ್ ಪಟೇಲ್, ಕುಲ್ದೀಪ್ ಯಾದವ್, ಮೊಹಮ್ಮದ್ ಸಿರಾಜ್, ಮುಕೇಶ್ ಕುಮಾರ್, ಜಸ್ಪ್ರೀತ್ ಬುಮ್ರಾ (ಉಪನಾಯಕ), ಅವೇಶ್ ಖಾನ್.

# ಅಂಧ ಮಹಿಳೆಯರ ಕಣ್ಣಲ್ಲಿ ಗೆಲುವಿನ ಹೊಳಪು




**ಹುಬ್ಬಳ್ಳಿ:** ಕ್ರಿಕೆಟ್ ಅಸೋಸಿಯೇಷನ್ ಫಾರ್ ಬ್ಲೈಂಡ್ ಇನ್ ಇಂಡಿಯಾ ಆಯೋಜಿಸಿದ್ದ ಅಂಧ ಮಹಿಳೆಯರ ರಾಷ್ಟ್ರೀಯ ಟಿ20 ಕ್ರಿಕೆಟ್ ಟೂರ್ನಿಯಲ್ಲಿ ಒಡಿಶಾ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿದೆ.

ಹುಬ್ಬಳ್ಳಿಯ ದೇಶಪಾಂಡೆನಗರ ಕೆಜಿಎ ಮೈದಾನದಲ್ಲಿ ನಡೆದ ಫೈನಲ್‌ನಲ್ಲಿ ಒಡಿಶಾ, ಆತಿಥೇಯ ಕರ್ನಾಟಕ ತಂಡದ ವಿರುದ್ಧ 6 ವಿಕೆಟ್‌ಗಳ ಜಯ ಸಾಧಿಸಿ, ಟ್ರೋಫಿ ತನ್ನದಾಗಿಸಿಕೊಂಡಿತು. ಇದರೊಂದಿಗೆ ಚಾಂಪಿಯನ್ ತಂಡ 1.04 ಲಕ್ಷ ರೂ. ಹಾಗೂ ರನ್ನರ್ ಅಪ್ ತಂಡ 80 ಸಾವಿರ ರೂ. ನಗದು ಬಹುಮಾನ ಪಡೆಯಿತು.

ಮೊದಲು ಬ್ಯಾಟ್ ಮಾಡಿದ ಕರ್ನಾಟಕ 18.3 ಓವರ್‌ಗಳಲ್ಲಿ 93 ರನ್‌ಗಳಿಗೆ ಆಲೌಟ್ ಆಯಿತು. ರೇಣುಕಾ ರಜಪೂತ 17, ಟಿ.ಸಿ ದೀಪಿಕಾ 16, ದೀವಕ್ಕಾ 12, ಯು. ವರ್ಷಾ 10 ರನ್ ಗಳಿಸಿದರು. ಒಡಿಶಾ ಪರ ಜಮುನಾ ರಾಣಿ ಟುಡು 19 ರನ್ ಬಿಟ್ಟುಕೊಟ್ಟು 2 ವಿಕೆಟ್ ಪಡೆದರು. ಈ ರನ್ ಗುರಿ ಬೆನ್ನತ್ತಿದ್ದ ಒಡಿಶಾ 13.1 ಓವರ್‌ಗಳಲ್ಲಿ 4 ವಿಕೆಟ್ ನಷ್ಟಕ್ಕೆ 94 ರನ್ ಗಳಿಸಿ ಜಯ ಸಾಧಿಸಿತು. ಒಡಿಶಾ ಪರ ಬಸಂತಿ ಹಂಸಾ ಅಜೇಯ 34, ಜಮುನಾ ರಾಣಿ 24 ಹಾಗೂ ಪದ್ಮನಿ ಟುಡು ಅಜೇಯ 14 ರನ್ ಬಾರಿಸಿದರು. ಒಡಿಶಾ ತಂಡದ ಜಿಲಿ ಬಿರುವಾ ಫೈನಲ್ ಪಂದ್ಯದ ಆಟಗಾರ್ತಿ, ಬಿ-1 ವಿಭಾಗದಲ್ಲಿ ರಾಜಸ್ಥಾನದ ಸಿಮು ದಾಸ್, ಬಿ-2 ವಿಭಾಗದಲ್ಲಿ ದೆಹಲಿಯ ಮೆಂಕಾ ಕುಮಾರಿ ಹಾಗೂ ಬಿ-3 ವಿಭಾಗದಲ್ಲಿ ಜಿಲಿ ಬಿರುವಾ ಸರಣಿಶ್ರೇಷ್ಠ ಪ್ರಶಸ್ತಿ ಪಡೆದರು. ಟೂರ್ನಿಯಲ್ಲಿ 16 ತಂಡಗಳು ಪಾಲ್ಗೊಂಡಿದ್ದವು.

# ಶೇಂಗಾ, ಸೋಯಾಬೀನ್ ಬೆಳೆಗಾರರಿಗೆ ಮಧ್ಯಂತರ ಬೆಳೆ ವಿಮೆ ಬಿಡುಗಡೆಗೆ ಕ್ರಮ



**ಬೆಂಗಳೂರು:** ಧಾರವಾಡ ಜಿಲ್ಲೆಯಲ್ಲಿ ಶೇಂಗಾ ಮತ್ತು ಸೋಯಾಬಿನ್ ಬೆಳೆಗಳಿಗೂ ಮಧ್ಯಂತರ ಬೆಳೆ ವಿಮೆ ನೀಡುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ತಿಳಿಸಿದ್ದಾರೆ. ಧಾರವಾಡ ಸಂಸದರೂ ಆಗಿರುವ ಕೇಂದ್ರ ಸಂಸದೀಯ ಸಚಿವ ಜೋಶಿ ಅವರು ಈ ಬಗ್ಗೆ ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದಾರೆ.

ಪೋಸ್ಟ್‌ನಲ್ಲಿ ಏನಿದೆ?: ಬೆಳೆ ಹಾನಿ ಸಮೀಕ್ಷೆಗೂ ಮೊದಲೇ ಶೇಂಗಾ ಹಾಗೂ ಸೋಯಾಬಿನ್ ಬೆಳೆ ಕಟಾವು ಆಗಿದ್ದರಿಂದ ಈ ಎರಡೂ ಬೆಳೆಗಳನ್ನು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಮಧ್ಯಂತರ ಪರಿಹಾರ ಪ್ರಕ್ರಿಯೆಯಿಂದ ವಿಮಾ ಕಂಪನಿ ಕೈ ಬಿಟ್ಟಿತ್ತು.

ಧಾರವಾಡ ಜಿಲ್ಲಾಡಳಿತ ಮಧ್ಯಂತರ ಬೆಳೆ ವಿಮೆ ಪರಿಹಾರಕ್ಕೆ ಸಲ್ಲಿಸಿದ ರಿಪೋರ್ಟ್ ನಲ್ಲಿ ಸೋಯಾಬಿನ್ ಮತ್ತು ಶೇಂಗಾ ಬೆಳೆಗಳನ್ನ ಹೊರತುಪಡಿಸಿ ಮಿಕ್ಕ ಎಲ್ಲಾ ಬೆಳೆಗಳನ್ನು ಎಸ್‌ಬಿಐ ವಿಮೆ ಕಂಪನಿ ಅಂಗೀಕರಿಸಿ ಮಧ್ಯಂತರ ವಿಮೆ ಹಣ ಬಿಡುಗಡೆ ಮಾಡಿತ್ತು.

ಈ ವಿಚಾರ ಗಮನಕ್ಕೆ ಬರುತ್ತಲೇ ಕೇಂದ್ರ ಸರ್ಕಾರದ ಹಿರಿಯ ಅಧಿಕಾರಿಗಳು ಮತ್ತು ವಿಮೆ ಕಂಪನಿಯನ್ನು ಸಂಪರ್ಕಿಸಿ, ಸಭೆ ನಡೆಸಿ ಮುಂಗಾರಿನ ಶೇಂಗಾ ಮತ್ತು ಸೋಯಾಬೀನ್ ಬೆಳೆಗಳಿಗೂ ಬೆಳೆ ವಿಮೆ ಪರಿಹಾರ ಬಿಡುಗಡೆಗೆ ಕ್ರಮ ಕೈಗೊಳ್ಳಲಾಗಿದೆ. ಎಂದು ಸಚಿವ ಜೋಶಿ ತಿಳಿಸಿದ್ದಾರೆ.

ಈ ಬೆಳೆಗಾರರ ಸಮಸ್ಯೆ ಅರಿತು ಕೇಂದ್ರ ಕೃಷಿ ಸಚಿವ ಅರ್ಜುನ್ ಅವರೊಂದಿಗೂ ಚರ್ಚೆ ನಡೆಸಿ, ಫಸಲ್ ಬಿಮಾ ಸಿಇಓ ರಿತೇಶ್ ಚೌಹಾನ್ ಮತ್ತು ಎಸ್‌ಬಿಐ ವಿಮೆ ಕಂಪನಿಯ ರಾಷ್ಟ್ರೀಯ ಮುಖ್ಯಸ್ಥ ಪಿಯೂಷ್ ಸಿಂಗ್ ಅವರ ಗಮನ ಸೆಳೆದು ಶೇಂಗಾ, ಸೋಯಾಬೀನ್ ಬೆಳೆ ಗಾರರಿಗೂ ಮಧ್ಯಂತರ ಬೆಳೆ ವಿಮೆ ಪರಿಹಾರ ಕೈ ಸೇರುವಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಜೋಶಿ ಹೇಳಿದ್ದಾರೆ.

ಧಾರವಾಡ ಜಿಲ್ಲೆಯ ಶೇಂಗಾ ಹಾಗೂ ಸೋಯಾಬೀನ್ ಬೆಳೆಗಳಿಗೂ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಮಧ್ಯಂತರ ಪರಿಹಾರ ನೀಡುವಂತೆ ರಾಜ್ಯ ಸರ್ಕಾರಕ್ಕೆ ಅತಿ ಶೀಘ್ರದಲ್ಲಿ ಪತ್ರ ತಲುಪಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

# ಲೈಂಗಿಕ ಕಿರುಕುಳ ಮುಖ್ಯ ಶಿಕ್ಷಕನ ವಿರುದ್ಧ ಕೇಸ್ ದಾಖಲು

**ಯಾದಗಿರಿ:** ಜಿಲ್ಲೆಯ ಗುರುಮಠಕಲ್ ತಾಲೂಕಿನ ಸರ್ಕಾರಿ ಶಾಲೆಯೊಂದರಲ್ಲಿ ವಿದ್ಯಾರ್ಥಿನಿಯರಿಗೆ ಶಿಕ್ಷಕನಿಂದ ಲೈಂಗಿಕ ಕಿರುಕುಳ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾಮುಕ ಶಿಕ್ಷಕ ಹಣಮೇಗೌಡನ ವಿರುದ್ಧ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಕಾಯ್ದೆ ಅಡಿ ಕೇಸ್ ದಾಖಲಾಗಿದೆ.



ಕಾಮುಕ ಶಿಕ್ಷಕ ಹಣಮೇಗೌಡ ಎರಡ್ಮೂರು ವರ್ಷಗಳಿಂದ ವಿದ್ಯಾರ್ಥಿಯರಿಗೆ ಲೈಂಗಿಕ ಕಿರುಕುಳ ನೀಡ್ತಿದ್ದ. ಈಗಾಗಲೇ ಅನುಚಿತ ವರ್ತನೆ ಆರೋಪದಡಿ ಶಿಕ್ಷಕ ಹಣಮೇಗೌಡನನ್ನು ಜಿಲ್ಲಾ ಪಂಚಾಯತಿ ಸಿಇಓ ಗರೀಮಾ ಪನ್ವಾರ್ ಅಮಾನತು ಮಾಡಿ ಆದೇಶಿಸಿದ್ರು. ಅಲ್ಲದೇ ಇದೇ ಘಟನೆಗೆ ಸಂಬಂಧಿಸಿದಂತೆ ನಾಲ್ಕು ಜನ ಶಿಕ್ಷಕ ಇಲಾಖೆ ಅಧಿಕಾರಿಗಳ ತಂಡದಿಂದ ಶಾಲೆಗೆ ಭೇಟಿ ವಿದ್ಯಾರ್ಥಿನಿಯರಿಂದ ಮಾಹಿತಿ ಸಂಗ್ರಹಿಸಲಾಗಿತ್ತು. ಅಧಿಕಾರಿಗಳ ತಂಡದ ಭೇಟಿ ವೇಳೆ ಶಾಲೆಯ ವಿದ್ಯಾರ್ಥಿನಿಯರು ಶಿಕ್ಷಕನ ಕರಾಳ ಮುಖ ಅನಾವರಣ ಮಾಡಿದ್ರು. ಲೈಂಗಿಕ ಕಿರುಕುಳ ನೀಡಿದ್ದರ ಬಗ್ಗೆ ಕಣ್ಣೀರಾಕುತ್ತಲೇ ಅಧಿಕಾರಿಗಳ ಮುಂದೆ ಎಲ್ಲಾ ವಿಚಾರವನ್ನ ವಿದ್ಯಾರ್ಥಿನಿಯರು ಎಳೆ ಎಳೆಯಾಗಿ ಬಿಚ್ಚಿಟ್ಟಿದ್ರು. ಪರಿಶೀಲನೆ ವರದಿಯ ಆಧಾರದ ಮೇಲೆ ಯಾದಗಿರಿ ಡಿಡಿಪಿಐ ಮಂಜುನಾಥ ಎಚ್.ಟಿ ಅವರಿಂದ ಶಿಕ್ಷಕನ ವಿರುದ್ಧ ಪೋಕ್ಸೋ ಕೇಸ್ ದಾಖಲಿಸಲಾಗಿದೆ.

ರಾಮೋತ್ಸವಕ್ಕೆ ರಾಜ್ಯದಿಂದ ಹೆಚ್ಚುವರಿ ರೈಲು

# ಇಲಾಖೆಯಿಂದ ಚಿಂತನೆ



**ಬೆಂಗಳೂರು:** ರಾಮಮಂದಿರ ಉದ್ಘಾಟನೆ ದಿನ ಸಮೀಪವಾಗುತ್ತಿರುವ ಬೆನ್ನಲ್ಲೇ ರಾಜ್ಯದಿಂದ ಅಯೋಧ್ಯೆಗೆ ಹೊರಡಲು ತಯಾರಾದ ರಾಮನ ಭಕ್ತರಿಗೆ ರೈಲ್ವೇ ಇಲಾಖೆ ಗುಡ್ ನ್ಯೂಸ್ ನೀಡಿದೆ. ರಾಜ್ಯದ ಹಲವು ಭಾಗಗಳಿಂದ ಅಯೋಧ್ಯೆಗೆ ಹೆಚ್ಚುವರಿ ರೈಲುಗಳನ್ನು ಬಿಡಲು ಇಲಾಖೆ ಚಿಂತನೆ ನಡೆಸುತ್ತಿದೆ.

ಅಯೋಧ್ಯೆ ರಾಮಮಂದಿರದಲ್ಲಿ ಬಾಲರಾಮನ ಪ್ರಾಣಪ್ರತಿಷ್ಠಾಪನೆಯನ್ನು ಕಣ್ತುಂಬಿಕೊಳ್ಳಲು ಇಡೀ ಹಿಂದೂ ಸಮುದಾಯ ತುದಿಗಾಲಲ್ಲಿ ನಿಂತಿದೆ. ಇದಕ್ಕಾಗಿ ರಾಜ್ಯದಿಂದ ಅಯೋಧ್ಯೆಗೆ ತೆರಳಲು ಹಲವಾರು ಜನ ಸಿದ್ಧತೆ ನಡೆಸಿದ್ದಾರೆ. ಅಯೋಧ್ಯೆಗೆ ಹೊರಟ ರಾಮನ ಭಕ್ತರಿಗಾಗಿ ನೈರುತ್ಯ ರೈಲ್ವೆ ಇಲಾಖೆ ರಾಜ್ಯದಿಂದ ಹೆಚ್ಚುವರಿ ರೈಲನ್ನು ಬಿಡಲು ತಯಾರಿ ನಡೆಸುತ್ತಿದೆ.

ರಾಜ್ಯದಿಂದ ಅಯೋಧ್ಯೆಗೆ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಹೋಗುವ ನಿರೀಕ್ಷೆ ಇದೆ. ಈ ಹಿಂದೆಯೇ ಬೇರೆ ಬೇರೆ ರಾಜ್ಯಗಳಿಂದ ಅಯೋಧ್ಯೆಗೆ ರೈಲುಗಳನ್ನು ಬಿಡುವುದಾಗಿ ಕೇಂದ್ರ ಇಲಾಖೆ ಹೇಳಿತ್ತು. ಅದೇ ರೀತಿ ರಾಜ್ಯದಿಂದಲೂ ಹೆಚ್ಚಿನ ಜನ ರಾಮಭಕ್ತರು ಅಯೋಧ್ಯೆಗೆ ತೆರಳುವ ಸಾಧ್ಯತೆ ಇದೆ. ಈ ಹಿನ್ನಲೆ ರಾಜ್ಯದಿಂದ ಹೆಚ್ಚುವರಿ ರೈಲುಗಳ ಸಂಚಾರಕ್ಕೆ ನೈರುತ್ಯ ರೈಲ್ವೆ ವಲಯ ಪ್ಲ್ಯಾನ್ ಮಾಡ್ತಿದೆ. ಈ ಸಂಬಂಧ ಈಗಾಗಲೇ ಕೇಂದ್ರ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿರುವ ನೈರುತ್ಯ ರೈಲ್ವೆ ವಲಯ, ಕೇಂದ್ರದ ಒಪ್ಪಿಗೆಗಾಗಿ ಕಾಯುತ್ತಿದೆ. ಮುಂದಿನ ಮೂರ್ನಾಲ್ಕು ದಿನದ ಒಳಗೆ ಈ ಸಂಬಂಧ ಕೇಂದ್ರ ವಲಯ ಸೂಚನೆ ನೀಡುವ ಸಾಧ್ಯತೆ ಇದ್ದು, ಈ ಹಿನ್ನೆಲೆ ನೈರುತ್ಯ ವಲಯ ಕೂಡ ತಯಾರಿ ಆರಂಭಿಸಿದೆ.

ಅಯ್ಯೋಧ್ಯೆಗೆ ಹೆಚ್ಚುವರಿ ರೈಲನ್ನು ರಾಜ್ಯದ ಯಾವ ನಗರದ ಮಾರ್ಗದಿಂದ ಬಿಡಬೇಕು? ಯಾವ ಯಾವ ಸಮಯಕ್ಕೆ ಬಿಡಬೇಕು? ರಾಜ್ಯದಲ್ಲಿನ ಯಾವ ಯಾವ ಪ್ರಮುಖ ರೈಲ್ವೆ ನಿಲ್ದಾಣಗಳಿಂದ ಹೆಚ್ಚುವರಿ ರೈಲನ್ನು ಅಯ್ಯೋಧ್ಯೆಗೆ ಬಿಡಬಹುದು ಎಂಬ ಯೋಜನೆ ರೂಪಿಸಲಾಗುತ್ತಿದೆ. ಅಯ್ಯೋದ್ಯೆ ರೈಲ್ವೆ ನಿಲ್ದಾಣ ಹೊರತುಪಡಿಸಿ ರಾಮಮಂದಿರಕ್ಕೆ ಹತ್ತಿರ ಇರುವ ಬೇರೆ ಯಾವ ನಿಲ್ದಾಣಗಳಿಗೆ ಹೆಚ್ಚುವರಿ ರೈಲನ್ನು ಬಿಡಬಹುದು. ಪ್ರಮುಖವಾಗಿ ರಾಜ್ಯದ ಬೆಂಗಳೂರು -ಮಂಗಳೂರು ಕಲಬುರಗಿ-ಹುಬ್ಬಳ್ಳಿ, ಮೈಸೂರು ನಗರಗಳಿಂದ ರೈಲಿನ ಸಂಪರ್ಕಕ್ಕೆ ಚಿಂತನೆ ನಡೆಸಲಾಗಿದೆ ಎಂದು ತಿಳಿದು ಬಂದಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com